ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 310
5-6-2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 310

### ಬೇತೂರು ಗ್ರಾಮದ ದಂಪತಿ ಬರ್ಭರ ಹತ್ಯೆ, ನೋವುಂಡ ಕುಟುಂಬಕ್ಕೆ ಕೊನೆಗೂ ಸಿಕ್ಕಿತು ನ್ಯಾಯ

# ಜೋಡಿ ಕೊಲೆ ಮೂವರು ಆರೋಪಿಗಳಿಗೆ ಜೀವಾವಧಿ ಶಿಕ್ಷೆ

**ದಾವಣಗೆರೆ:** ಜೋಡಿ ಕೊಲೆ ಮಾಡಿ ಜಿಲ್ಲೆಯನ್ನೇ ಬೆಚ್ಚಿ ಬೀಳಿಸಿದ್ದ ಮೂವರು ಕೊಲೆ ಆರೋಪಿಗಳಿಗೆ ಇಲ್ಲಿನ 1ನೇ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಬುಧವಾರ ಜೀವಾವಧಿ ಶಿಕ್ಷೆ ನೀಡುವ ಮೂಲಕ ಸಾರ್ವಜನಿಕರು ಹಾಗೂ ಕುಟುಂಬದವರು ತುಸು ಸಮಾಧಾನ ಪಟ್ಟುಕೊಳ್ಳುವಂತೆ ಮಾಡಿದೆ.


ತಾಲೂಕಿನ ಬೇತೂರು ಗ್ರಾಮದ ಕುಮಾರ್, ಹರಪನಹಳ್ಳಿ ತಾಲೂಕು ಹಳ್ಳಿಕೆರೆ ಪರಶುರಾಮ್ ಹಾಗೂ ಕೊಟ್ಟೂರು ತಾಲ್ಲೂಕು ಕಮಲಾಪುರದ ಮರಿಸ್ವಾಮಿ ಎಂಬುವರಿಗೆ ನ್ಯಾಯಾಲಯ ಜೀವಾವಧಿ ಶಿಕ್ಷೆ ಹಾಗೂ ತಲಾ 35 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಪಿರ್ಯಾದಿಗಳ ಪರವಾಗಿ ಸರ್ಕಾರಿ ಅಭಿಯೋಜಕರಾದ ಕೆ.ಎಸ್. ಸತೀಶ್ ಅವರು ಸುದೀರ್ಘ ವಾದ ಮಂಡನೆ ಮಾಡಿದ್ದರು. ವಾದ ವಿವಾದ ಆಲಿಸಿ ಪರಿಶೀಲಿಸಿದ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಯ್ಯಣ್ಣನವರ್ ಆರೋಪಿಗಳೀಗೆ ಕಠಿಣ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ.

ಆರೋಪಿಗಳು ಜ.24, 2022ರಂದು ರಾತ್ರಿ 9ರ ಸಮಯದಲ್ಲಿ ನಗರ ಸಮೀಪದ ಬೇತೂರು ಗ್ರಾಮದ ಮಠದ ಮನೆ ಗುರುಸಿದ್ದಯ್ಯ ಹಾಗೂ ಇವರ ಪತ್ನಿ ಸರೋಜಮ್ಮ ಎಂಬುವರ ಮನೆ ನುಗಿ ದಂಪತಿಯನ್ನು ಬರ್ಭರವಾಗಿ ಹತ್ಯೆ ಮಾಡಿ ಚಿನ್ನಾಭರಣ ಹಾಗೂ ನಗದು ದೋಚಿ ಪರಾರಿಯಾಗಿದ್ದರು.

ಮನೆಯಲ್ಲಿ ವಾಸ ಇದ್ದ ಇಬ್ಬರೇ ದಂಪತಿಗಳನ್ನು ಹತ್ಯೆ ಮಾಡಿದ ಘಟನೆ ಜಿಲ್ಲೆಯಲ್ಲಿ ತಲ್ಲಣ ಉಂಟು ಮಾಡಿತ್ತು. ಇಲ್ಲಿನ ಗ್ರಾಮಾಂತರ ಠಾಣೆಯಲ್ಲಿ ಜ.25, 2022ರಂದು ದೂರು ದಾಖಲಾಗಿತ್ತು. ಗ್ರಾಮಾಂತರ ಠಾಣೆ ಡಿವೈಎಸ್ಪಿ ಬಿ.ಎಸ್. ಬಸವರಾಜ್ ಮತ್ತು ತಂಡ ಆರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸಿದ್ದರು. ಅಂದಿನ ಪ್ರಭಾರ ಡಿವೈಎಸ್ಪಿ ಆಗಿದ್ದ ಐಪಿಎಸ್ ಅಧಿಕಾರಿ ಮಿಥನ್ ಪ್ರಕರಣದ ತನಿಖೆ ನಡೆಸಿ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದ್ದರು.

ಒಂದನೇ ಆರೋಪಿ ಕುಮಾರ ಇದೇ ಗ್ರಾಮದವನಾಗಿದ್ದು, ಮಠದ ಗುರುಸಿದ್ದಯ್ಯ ಅವರ ಮನೆಯಲ್ಲಿ ನಾಲ್ಕು ವರ್ಷಗಳ ಹಿಂದೆ ಕೂಲಿ ಕೆಲಸ ಮಾಡುತ್ತಿದ್ದನು. ನಂತರ ಈತ ಬೆಂಗಳೂರಿಗೆ ಕೂಲಿ ಕೆಲಸಕ್ಕೆ ಹೋದವನು ಕುಡಿತ, ಜೂಜಾಟದಿಂದ



ಸಾಲ ಮಾಡಿಕೊಂಡಿದ್ದನು. ಮಠದ ಗುರುಸಿದ್ದಯ್ಯ ಮತ್ತು ಪತ್ನಿ ಸರೋಜಮ್ಮ ಇವರಿಗೆ ಮೂವರು ಹೆಣ್ಣು ಮಕ್ಕಳಿದ್ದು, ಮದುವೆಯಾಗಿ ಗಂಡನೆ ಮನೆಯಲ್ಲಿ ವಾಸಿಸುತ್ತಿದ್ದರು. ಈ ಮಾಹಿತಿ ತಿಳಿದಿದ್ದ ಕುಮಾರ ಪರಿಚಯದ ಹಿನ್ನೆಲೆಯಲ್ಲಿ ಜ.24,2022ರಂದು ರಾತ್ರಿ 9 ಗಂಟೆಗೆ ಸಂಚು ರೂಪಿಸಿಕೊಂಡು ಸಾಲ ಕೇಳುವ ನೆಪದಲ್ಲಿ ಮನೆಗೆ ಇನ್ನಿಬ್ಬರ ಆರೋಪಿಗಳೊಂದಿಗೆ ಹೋಗಿದ್ದ.

ನಾನು ದಾವಣಗೆರೆಗೆ ಬಂದ ದಿನವೇ



ಜೋಡಿ ಕೊಲೆ ಯಾಗಿತ್ತು ನಾನು ವೃತ್ತಿ ಪ್ರಾರಂಭಿಸಲು ದಾವಣಗೆರೆಗೆ ಆಗಮಿಸಿದ ಮೊದಲ ದಿನವೇ ಬೇತೂರು ಗ್ರಾಮದಲ್ಲಿ ಜೋಡಿ ಕೊಲೆಯಾಗಿತ್ತು. ಪ್ರಕರಣದ ತನಿಖೆ ಜವಾಬ್ದಾರಿಯನ್ನು ಮಾರನೆ ದಿನವೇ ಎಸ್ಪಿ ರಿಷ್ಯಂತ್ ಸಾರ್ ನನಗೆ ವಹಿಸಿದ್ದರು. ಇಲಾಖೆ ಹಿರಿಯ ಅಧಿಕಾರಿಗಳು ಹಾಗೂ ಗ್ರಾಮಾಂತರ ಠಾಣೆ ಸಿಬ್ಬಂದಿ ಸಹಕಾರದಿಂದ ತನಿಖೆ ಮಾಡಿ ಆರೋಪ ಪಟ್ಟಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿತ್ತು. ಪ್ರಕರಣ ಸವಾಲಿನಿಂದ ಕೂಡಿತ್ತಾದರೂ ಆಳವಾದ ತನಿಖೆ ನಡೆಸಿ ವರದಿ ನೀಡಲಾಗಿತ್ತು. ಅಂತಿಮವಾಗಿ ನ್ಯಾಯಲಯ ಉತ್ತಮ ತೀರ್ಪು ನೀಡಿದ್ದು, ಕುಟುಂಬದವರಿಗೆ ನ್ಯಾಯ ಸಿಕ್ಕಿರುವುದು ಸಂತೋಷ ತಂದಿದೆ.

–ಮಿಥುನ್,
ಪೊಲೀಸ್ ವರಿಷ್ಠಾಧಿಕಾರಿಗಳು,
ಕರಾವಳಿ ಕಾರ್ಯಪಡೆ,

ಪರಿಚಯ ಇದ್ದ ಕಾರಣಕ್ಕೆ ಗುರುಸಿದ್ದಯ್ಯ ರಾತ್ರಿ ನಡು ಮನೆ ಒಳಗೆ ಕೂರಿಸಿಕೊಂಡು ಮಾತನಾಡಿಸುತ್ತಿದ್ದರು. ಸರೋಜಮ್ಮ ಅವರು ಟೀ ಮಾಡಿಕೊಡಲು ಅಡುಗೆ ಮನೆಗೆ ಹೋದಾಗ ಮೊದಲು ಗುರುಸಿದ್ದಯ್ಯ ಅವರಿಗೆ ಅರಿತ ಚಾಕುವಿನಿಂದ ಹಲವು ಬಾರಿ ಬರ್ಭರವಾಗಿ ಇರಿದಿದ್ದರು. ಗುರುಸಿದ್ದಯ್ಯ ಅವರ ಕೂಗಾಟ ಕೇಳಿ ಅಡುಗೆ ಮನೆಯಿಂದ ನಡುಮನೆಗೆ ಬಂದ ಸರೋಜಮ್ಮ ಅವರನ್ನು ಸಹ ಆರೋಪಿಗಳು ಚಾಕುವಿನಿಂದ ಹಲವು ಬಾರಿ ಇರಿದು ಕೊಲೆ ಮಾಡಿ ಪರಾರಿಯಾಗಿದ್ದರು.

ಮಾರನೇ ದಿನ ಬೆಳಗ್ಗೆ 8 ಗಂಟೆಯಾದರೂ ಮನೆಯಿಂದ ಯಾರೂ ಹೊರ ಬುರದಿರುವುದನ್ನು ಗಮನಿಸಿ ಅಕ್ಕಪಕ್ಕದವರು ನೋಡಿದಾಗ ದಂಪತಿಗಳು ರಕ್ತದ ಮಡುವಿನಲಿ ಬಿದ್ದಿರುವುದು ಕಂಡು ಬಂದಿತ್ತು.

ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ ಅಂದಿನ ಎಸ್ಪಿ ಸಿ.ಬಿ. ರಿಷ್ಯಂತ್ ಅವರು ಪಕ್ರಣದ ತನಿಖೆಯ ಜವಾಬ್ದಾರಿಯನ್ನು ಪ್ರಭಾರ ಡಿವೈಎಸ್ಪಿ ಆಗಿದ್ದ ಐಪಿಎಸ್ ಅಧಿಕರಿ ಮಿಥನ್ ಅವರಿಗೆ ವಹಿಸಿದ್ದರು.

ಸರ್ಕಾರಿ ಆಭಿಯೋಜಕರಾದ ಕೆ.ಎಸ್. ಸತೀಶ್ ಅವರು ಸತತ ಮೂರುವರೆ ವರ್ಷ ಸಮರ್ಥವಾಗಿ ವಾದ ಮಂಡಿಸಿದ್ದರು. ತೀರ್ಪು ನೀಡುವ ಬುಧವಾರದ ದಿನ ಮೊದಲ ಆರೋಪಿ ಕುಮಾರ, ಹೊಸ ವಕೀಲರನ್ನು ನಿಯೋಜಿಸಿಕೊಂಡು ಮತ್ತೊಮ್ಮೆ ಸಾಕ್ಷಿಗಳ ವಿಚಾರಣೆ ಮಾಡುವಂತೆ ನ್ಯಾಯಾಧೀಶರ ಮುಂದೆ ಅರ್ಜಿ ಸಲ್ಲಿಸಿದ್ದನು.

ಆರೋಪಿಗಳ ಪರವಾಗಿ ಬೆಂಗಳೂರಿನಿಂದ ಬಂದಿದ್ದ ವಕೀಲರು ತೀರ್ಪು ನೀಡುವ ಮೊದಲು ಮತ್ತೊಮ್ಮೆ ಪ್ರಕರಣ ವಾದ ಮಂಡನೆಗೆ ಅವಕಾಶ ಮಾಡುವಂತೆ ಕೋರಿದರು. ಇದನ್ನು ಒಪ್ಪದ ಸರ್ಕಾರಿ ಅಭಿಯೋಜಕರಾದ ಕೆ.ಎಸ್. ಸತೀಶ್ ಅವರು, ಸುಪ್ರೀಂ ಕೋರ್ಟ್‌ನ ಕೆಲ ಪ್ರಕರಣಗಳನ್ನು ಉಲ್ಲೇಖಿಸಿ ಮತ್ತೊಮ್ಮೆ ವಿಚಾರಣೆಗೆ ಅವಕಾಶ ಮಾಡಬಾರದೆಂದು ಪ್ರಬಲವಾಗಿ ವಾದ ಮಂಡಿಸಿದರು.

ಎರಡೂ ಕಡೆಯವರ ವಾದ-ವಿವಾದ ಆಲಿಸಿದ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಯ್ಯಣ್ಣನವರ್ ಆರೋಪಿಯ ಮನವಿ ತಿರಸ್ಕರಿಸಿ ತೀರ್ಪು ಪ್ರಕಟಿಸಿದರು.

## ಇಂದಿರಾ ಕ್ಯಾಂಟೀನ್ ನಮ್ಮ ಸರ್ಕಾರದ ಮತ್ತೊಂದು ಗ್ಯಾರಂಟಿಯಾಗಿದೆ: ಸಚಿವ ರಹೀಂ ಖಾನ್



**ದಾವಣಗೆರೆ:** ನಮ್ಮ ಸರ್ಕಾರದಿಂದ 186 ಹೊಸ ಇಂದಿರಾ ಕ್ಯಾಂಟಿನ್ ಗಳನ್ನು ತೆರೆಯಲಾಗಿದೆ. ಸರ್ಕಾರದ 5 ಗ್ಯಾರಂಟಿಗಳ ಜೊತೆಗೆ ಇಂದಿರಾ ಕ್ಯಾಂಟೀನ್ ಕೂಡ ಒಂದು ಗ್ಯಾರಂಟಿಯಾಗಿದೆ ಎಂದು ಪೌರಾಡಳಿತ ಸಚಿವ ರಹೀಂ ಖಾನ್ ಹೇಳಿದರು.

ಬುಧವಾರ ದಾವಣಗೆರೆಗೆ ಆಗಮಿಸಿದ್ದ ವೇಳೆ ನಗರದ ಪಾಲಿಕೆ ಸಭಾಂಗಣದ ಮುಂಭಾಗದಲ್ಲಿರುವ ಇಂದಿರಾ ಕ್ಯಾಂಟೀನ್ ಗೆ ಭೇಟಿ ನೀಡಿ ಪರಿಶೀಲಿಸಿದರು.

ರಾಜ್ಯದಲ್ಲಿ ನಮ್ಮ ಕಾಂಗ್ರೆಸ್ ಸರ್ಕಾರ ಬಂದ ನಂತರ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳು ಬಡವರ ಪರವಾಗಿ ಸಾಕಷ್ಟು ಕೆಲಸಗಳನ್ನು ಮಾಡುತ್ತಿದ್ದು, ಇಂದಿರಾ ಕ್ಯಾಂಟೀನ್ ಮುಖ್ಯಮಂತ್ರಿಗಳ ಕನಸಿನ ಯೋಜನೆಯಾಗಿದೆ ಎಂದರು.

ನಮ್ಮ ಸರ್ಕಾರದ ಅವಧಿಯಲ್ಲಿ ಇಂದಿರಾ ಕ್ಯಾಂಟೀನ್ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿತ್ತು. ಆದರೆ ಆನಂತರ ಬಂದ್ ಆಯ್ತು. ಈಗ ಮತ್ತೆ ಆರಂಭ ಮಾಡಿರುವುದರಿಂದ ಬಡವರಿಗೆ, ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ.

### ನಗರದಲ್ಲಿ ರೌಡಿ ಪರೇಡ್:

## ಖಡಕ್ ವಾರ್ನಿಂಗ್ ನೀಡಿದ ಎಸ್ಪಿ ಉಮಾ ಪ್ರಶಾಂತ್



**ದಾವಣಗೆರೆ:** ನಗರದ ಡಿಎಆರ್ ಗ್ರೌಂಡ್ ನಲ್ಲಿ ಬುಧವಾರ ರೌಡಿ ಪರೇಡ್ ನಡೆಸಿದ ಪೊಲೀಸ್ ಇಲಾಖೆ, ರೌಡಿಗಳಿಗೆ ಖಡಕ್ ವಾರ್ನಿಂಗ್ ನೀಡಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ನಗರದ ರೌಡಿ ಶೀಟರ್ ಗಳನ್ನುದ್ದೇಶಿಸಿ, ಕಾನೂನು ಸುವ್ಯವಸ್ಥೆಗೆ ಭಂಗ ತಂದರೆ ಗಡೀಪಾರು ಮಾಡುವುದಾಗಿ ಎಚ್ಚರಿಕೆ ನೀಡಿದರು.

ಸುಮಾರು ನಗರದ 150 ಕ್ಕೂ ಹೆಚ್ಚು ರೌಡಿಗಳು ಪರೇಡ್ ನಲ್ಲಿ ಭಾಗಿಯಾಗಿದ್ದರು. ಈ ವೇಳೆ ರೌಡಿ ಶೀಟರ್ ಶ್ರೀನಿವಾಸ ಅಲಿಯಾಸ್ ಮೋಟ್ ಬಾಳ್ ಸೀನು ಅವರನ್ನುದ್ದೇಶಿಸಿ ಮಾನಾಡಿದ ಉಮಾ, ನೀವು ಕಾರ್ಪೊರೇಟರ್ ಆಗಿದ್ದೀರಿ ಅಂತ ನಾವು ರಿಯಾಯ್ತಿ ತೋರೋಲ್ಲಾ.ನಿಮ್ಮ ಮೇಲೂ ನಿಗಾ ಇಡುತ್ತೇವೆ ಎಂದು ಹೇಳಿದರು.

ಹುಡುಗರನ್ನು ಇಟ್ಟುಕೊಂಡು ಸೆಟಲ್ ಮೆಂಟ್, ರೌಡಿಜಂ ಅಂತ ಮಾಡುವಹಾಗಿಲ್ಲ ನೀವು ಏನ್ ಮಾಡುದ್ರೂ ನಮಗೆ ಗೊತ್ತಾಗುತ್ತೆ. ಕಾರ್ಪೊರೇಟರ್ ಆಗಿದ್ದಿರಿ ಗೌರವಯುತವಾಗಿ ಇರಬೇಕು ಎಂದು ರೌಡಿ ಶೀಟರ್ ಮೋಟ್ ಬೆಳ್ ಶ್ರೀನಿವಾಸ್ ಗೆ ಎಚ್ಚರಿಕೆ ನೀಡಿದರು. ಜೊತೆಗೆ ಅಲ್ಲಿರುವ ಎಲ್ಲ ರೌಡಿ ಶೀಟರ್ ಗಳಿಗೂ ತಿಳಿ ಹೇಳಿದರು.

## ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಪಾಲಿಕೆ ಕಾರ್ಮಿಕರಿಂದ ಪ್ರತಿಭಟನೆ



**ದಾವಣಗೆರೆ:** ನೇರಪಾವತಿ ಮತ್ತು ಕೆಲಸ ಖಾಯಮಾತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಾಲಿಕೆ ಹೊರಗುತ್ತಿಗೆ ಲೋಡರ್ಸ್ ಹೆಲ್ಪರ್ಸ್ ಸಫಾಯಿ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಲೋಡರ್ಸ್ ಮತ್ತು ಹೆಲ್ಪರ್ಸ್ಗಳು ಪ್ರತಿಭಟನೆ ನಡೆಸಿದರು.

ಸಂಗೊಳ್ಳಿ ರಾಯಣ್ಣ ವೃತ್ತದಿಂದ ಮೆರವಣಿಗೆ ಹೊರಟು ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಸೇರಿ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಸಂಘದ ಅಧ್ಯಕ್ಷ ಹೆಚ್. ಹುಲಿಗೇಶ್, ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು, ಸಫಾಯಿ ಕರ್ಮಚಾರಿ ಗುರುತಿನ ಚೀಟಿ ನೀಡಬೇಕು, ವೇತನ ರಹಿತ ಕಾರ್ಯ ನಿರ್ವಹಿಸುತ್ತಿರುವ ಲೋಡರ್ಸ್ ಹಾಗೂ ಹೆಲ್ಪರ್ಸ್ ಗಳಿಗೆ ವೇತನ ಸಹಿತ ಕೆಲಸಕ್ಕೆ ನೇಮಕ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ಕೆಲಸ ನಿರ್ವಹಿಸಲು ನಿರ್ದಿಷ್ಟ ಕಾಲಮಿತಿ ನಿಗದಿಪಡಿಸಬೇಕು. ರಾತ್ರಿ ಪಾಳೆಯದಲ್ಲಿ ಕಾರ್ಯನಿರ್ವಹಿಸಿದ ಕಾರ್ಮಿಕರಿಗೆ ಮರುದಿನ ವಿಶ್ರಾಂತಿ ನೀಡಬೇಕು. ಲೋಡರ್ಸ್ ಹಾಗೂ ಹೆಲ್ಪರ್ಸ್ ಗಳಿಗೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಥಮ ಆದ್ಯತೆ ಮೇರೆಗೆ ನಿವೇಶನ ನೀಡಬೇಕು.ಕೆಲಸದ ಸಂದರ್ಭದಲ್ಲಿ ಸಾರ್ವಜನಿಕರಿಂದ ಕಾರ್ಮಿಕರಿಗೆ ಆಗುವ ತೊಂದರೆಗಳಿಗೆ ಅಧಿಕಾರಿ ವರ್ಗ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಲೋಡರ್ಸ್ ಹಾಗೂ ಹೆಲ್ಪರ್ಸ್ ಗಳ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ಪಾಲಿಕೆಯ ಅನುದಾನದಲ್ಲಿ ಸಂಪೂರ್ಣ ವೆಚ್ಚ ಭರಿಸಲು ಅವಕಾಶ ಕಲ್ಪಿಸಬೇಕು. ಕೆಲಸದ ಸಂದರ್ಭದಲ್ಲಿ ಕಾರ್ಮಿಕರು ಮೃತಪಟ್ಟರೆ ಅವರ ಅವಲಂಭಿತರಿಗೆ 25 ರೂ. ಲಕ್ಷ ಪರಿಹಾರ ನೀಡಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

ಕಳೆದ ತಿಂಗಳಿಂದ ವೇತನವಿಲ್ಲದೇ ಕೆಲಸ ಮಾಡುತ್ತಿರುವ ಕಾರ್ಮಿಕರನ್ನು ಹೆಚ್ಚುವರಿ ಕಾರ್ಮಿಕರನ್ನಾಗಿ ನೇಮಕ ಮಾಡಿಕೊಳ್ಳಬೇಕು. ಇದಲ್ಲದೇ ಮುಂಬರುವ ದಿನಗಳಲ್ಲಿ ರಾಜ್ಯ ಸರ್ಕಾರ ನಮ್ಮ ಬೇಡಿಕೆಗಳನ್ನು ಹಂತಹಂತವಾಗಿ ಈಡೇರಿಸಲು ಮುಂದಾಗಬೇಕು. ಇಲ್ಲವಾದಲ್ಲಿ ಇಡೀ ರಾಜ್ಯವೇ ಚರ್ಚೆ ಮಾಡುವ ರೀತಿಯಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳುತ್ತೇವೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಡಿ. ಸುರೇಶ್, ಹರ್ಷವರ್ಧನ್, ನಿರಂಜನ್, ಹೆಚ್. ನಾಗರಾಜ್, ಕೇಶವಮೂರ್ತಿ, ಮೀನಾಕ್ಷಿ, ಕೆ.ಪಿ. ರಾಕೇಶ್, ಜಿ. ಉಮೇಶ್, ಕೆ.ಎಸ್. ದೀಪಕ್ ಇನ್ನಿತರರು ಉಪಸ್ಥಿತರಿದ್ದರು.

## ತನ್ನ ಬೆತ್ತಲೆ ಫೋಟೋವನ್ನು ಸಂಸತ್ತಿನಲ್ಲಿ ಪ್ರದರ್ಶಿಸಿದ ಸಂಸದೆ



**ವೆಲ್ಲಿಂಗ್ಟನ್:** ಡೀಪ್‌ಫೇಕ್ ತಂತ್ರಜ್ಞಾನವು ಬಾಲಿವುಡ್, ಹಾಲಿವುಡ್ ಸೆಲೆಬ್ರಿಟಿಗಳನ್ನು ಮಾತ್ರವಲ್ಲ ರಾಜಕೀಯ ನಾಯಕರನ್ನೂ ಬಿಟ್ಟಿಲ್ಲ. ಡೀಪ್‌ಫೇಕ್ ನಿಂದ ಆಗುತ್ತಿರುವ ಅಪಾಯದ ಬಗ್ಗೆ ಇತ್ತೀಚೆಗೆ ಸಾಕಷ್ಟು ಮಂದಿ ಎಲ್ಲರ ಗಮನ ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ. ಇದೀಗ ಸಂಸದೆಯೊಬ್ಬರು ತಮ್ಮ ಡೀಪ್‌ಫೇಕ್ ಚಿತ್ರವನ್ನು ಸಂಸತ್ತಿನಲ್ಲಿ ಪ್ರದರ್ಶಿಸಿ ಧೈರ್ಯ ತೋರಿದ್ದಾರೆ. ಈ ಮೂಲಕ ಡೀಪ್‌ಫೇಕ್ ತಂತ್ರಜ್ಞಾನದ ಅಪಾಯಗಳ ಬಗ್ಗೆ ರಾಜಕೀಯ ನಾಯಕರು ಮಾತ್ರವಲ್ಲ ವಿಶ್ವದ ಗಮನ ಸೆಳೆದಿದ್ದಾರೆ. ಈ ಘಟನೆ ನ್ಯೂಜಿಲೆಂಡ್‌ನ ಪಾರ್ಲಿಮೆಂಟ್‌ನಲ್ಲಿ ನಡೆದಿದೆ.

ಡೀಪ್‌ಫೇಕ್ ತಂತ್ರಜ್ಞಾನದ ಅಪಾಯಗಳ ಬಗ್ಗೆ ಎಲ್ಲರನ್ನೂ ಎಚ್ಚರಿಸಲು ವೆಲ್ಲಿಂಗ್ಟನ್ ನಲ್ಲಿರುವ ನ್ಯೂಜಿಲೆಂಡ್ ನ ಸಂಸತ್ತಿನಲ್ಲಿ ಸಂಸದೆ ಧೈರ್ಯದಿಂದ ತಮ್ಮ ಬೆತ್ತಲೆ ಫೋಟೋವನ್ನು ತೋರಿಸಿದ್ದಾರೆ. ನ್ಯೂಜಿಲೆಂಡ್ ನ ಸಂಸದೆ ಆಕ್ಟ್ ಪಕ್ಷದ ಲಾರಾ ಮೆಕ್‌ಕ್ಲೂರ್ ಅವರು ಸಂಸತ್ತಿನಲ್ಲಿ ಸೆನ್ಸಾರ್ ಮಾಡಲಾದ ತಮ್ಮ ಚಿತ್ರವನ್ನು ಬಹಿರಂಗಪಡಿಸಿದ್ದು,ಇದನ್ನು ಆನ್‌ಲೈನ್‌ನಲ್ಲಿ ರಚಿಸಲು ಐದು ನಿಮಿಷಗಳಿಗಿಂತ ಕಡಿಮೆ ಸಮಯ ತೆಗೆದುಕೊಂಡಿದ್ದಾರೆ ಎಂದು ಹೇಳಿದರು.

ಈ ಚಿತ್ರವು ನನ್ನ ಬೆತ್ತಲೆ ಚಿತ್ರವಾಗಿದೆ. ಆದರೆ ಅದು ನಿಜವಲ್ಲಎಂದು ಅವರು ಮೇ 14ರಂದು ಸದನದಲ್ಲಿ ತಿಳಿಸಿದ್ದಾರೆ.

ಡೀಪ್‌ಫೇಕ್‌ನ ಅಪಾಯಗಳ ಬಗ್ಗೆ ಚರ್ಚಿಸುತ್ತಾ ಅವರು, ಇದು ಅವಮಾನಕರ ಮತ್ತು ವಿನಾಶಕಾರಿ. ಇದು ವಾಸ್ತವವಾಗಿ ನಾನು ಅಲ್ಲ ಎಂದು ತಿಳಿದಿದ್ದರೂ ಸಹ ಸಂಸತ್ತಿನಲ್ಲಿ ನಿಂತು ನನ್ನ ಫೋಟೋವನ್ನು ಎಲ್ಲರಿಗೂ ತೋರಿಸಬೇಕಾದ ಪರಿಸ್ಥಿತಿ ನನಗೆ ಕಿರಿಕಿರಿಯನ್ನು ಉಂಟು ಮಾಡಿದೆ ಎಂದರು.

## ಮುಂಗಾರು ಆರಂಭ,ಅತಿವೃಷ್ಠಿ ಸಂದರ್ಭದಲ್ಲಿ ಸಿದ್ಧತೆಯಲ್ಲಿರಿ

### ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಅಧಿಕಾರಿಗಳಿಗೆ ಶಾಸಕ ಬಿ.ಪಿ ಹರೀಶ್ ಸೂಚನೆ

**ಹರಿಹರ:** ಮುಂಗಾರು ಮುಂಚಿತವಾಗಿ ಆರಂಭವಾಗಿದ್ದು ಅತಿವೃಷ್ಟಿ ಸಂದರ್ಭ ಬಂದರೆ ಸರ್ವ ರೀತಿಯಲ್ಲಿ ಸಿದ್ಧತೆಯಲ್ಲಿರುವಂತೆ ತಾಲೂಕಿನ ಅಧಿಕಾರಿಗಳಿಗೆ ಶಾಸಕ ಬಿ.ಪಿ.ಹರೀಶ್ ಸೂಚನೆ ನೀಡಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ 2025-26 ನೇ ಮೊದಲ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿ ವರ್ಷಕ್ಕಿಂತ ಈ ವರ್ಷ ಮುಂಚಿತವಾಗಿಯೇ ಮುಂಗಾರು ಮಳೆ ಆರಂಭವಾಗಿದೆ ಅತಿವೃಷ್ಟಿ ಸಂದರ್ಭಗಳಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಸಿದ್ಧತೆಯಲ್ಲಿರ ಬೇಕು ಎಂದು ತಿಳಿಸಿದರು.

ರೈತರಿಗೆ ಉಪಯುಕ್ತವಾದ ಬಿತ್ತನೆ ಬೀಜ, ರಾಸಾಯನಿಕ ಗೊಬ್ಬರ, ವ್ಯವಸಾಯ ಸಲಕರಣೆಗಳ ವಿತರಣೆ ಯಾಗದಂತೆ ಕೇಂದ್ರ ಸರ್ಕಾರದ ಮಹತ್ವ ಯೋಜನೆಗಳ ನೀಡಿಕೆಯಲ್ಲಿ ವ್ಯತ್ಯಾಸ ವಾಗದಂತೆ ನೋಡಿಕೊಂಡು ಹೋಗುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯ ಸರ್ಕಾರದ ಅಧಿನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಶಿಷ್ಠಾಚಾರ ಉಲ್ಲಂಘಿಸಿದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ, ನಿರ್ಧಾಕ್ಷಿಣ್ಯ ವಾಗಿ ರಾಜ್ಯ ಹಕ್ಕುಚ್ಯುತಿ ಸಮಿತಿಗೆ ವರದಿ ಸಲ್ಲಿಸಲಾಗುವುದೆಂದು ಶಾಸಕ ಬಿ.ಪಿ ಹರೀಶ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.



ಕಳೆದ 15 ದಿನಗಳ ಹಿಂದೆ ನಗರದ ಬಸ್ ನಿಲ್ದಾಣದಿಂದ ದಾವಣಗೆರೆ ವಿಶ್ವ ವಿದ್ಯಾನಿಲಯಕ್ಕೆ ನೇರ ಬಸ್ ಸಂಚಾರ ಆರಂಭ ದ ಸಮಯದಲ್ಲಿ, ಬಸ್ ಸಂಚಾರಕ್ಕೆ ಚಾಲನೆ ನೀಡುವ ದಿನಕ್ಕಿಂತ ಹಿಂದಿನ ರಾತ್ರಿಯಲ್ಲಿ ಹರಿಹರ ಬಸ್ ಡಿಪೋ ಅಧಿಕಾರಿಗಳು ದೂರವಾಣಿಯ ಮೂಲಕ ಮಾಹಿತಿ ನೀಡಿದ್ದನ್ನು, ಹಾಗೂ ಕೆಲವು ಇಲಾಖೆಗಳ ಅಧಿಕಾರಿಗಳು ಕೈಗೊಳ್ಳುವ ಅಭಿವೃದ್ಧಿ ಕಾರ್ಯಕ್ರಮ ಗಳ ಕುರಿತು ಮುಂಚಿತವಾಗಿಯೇ ತಮಗೆ ತಿಳಿಸದಿರುವುದರ ಕುರಿತು ಕಿಡಿ ಕಾರಿದರಲ್ಲದೆ ಇನ್ನು ಮುಂದೆ ಅಧಿಕಾರಿಗಳು ಶಿಷ್ಠಾಚಾರ ಉಲ್ಲಂಘನೆ ಮಾಡಿದಲ್ಲಿ ರಾಜ್ಯ ಸಮಿತಿಗೆ ವರದಿ ನೀಡಲು ತಾವು ನಿರ್ಧರಿಸಬೇಕಾಗುತ್ತದೆ ಎಂದು ಹೇಳಿದರು.

ಸಭೆಯಲ್ಲಿ ಉಪಸ್ಥಿತರಿದ್ದ ಕೆಡಿಪಿ ನಾಮ ನಿರ್ದೇಶಿತ ಸದಸ್ಯ ಬಿ.ಬಿ.ಮಲ್ಲೇಶ ಮಾತನಾಡಿ, ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆಯ ಭಾಗದ ಹರಿಹರ ತಾಲೂಕಿಗೆ ನ್ಯಾಯ ಸಮ್ಮತವಾಗಿ ಸಿಗಬೇಕಾಗಿರುವ ನೀರು ಸಿಗದೇ ಇರುವ ಕಾರಣ,ನಮ್ಮ ತಾಲೂಕಿನ ರೈತರು ಭದ್ರಾ ಯೋಜನೆಯ ನೀರಿನಿಂದ ವಂಚಿತರಾಗಿದ್ದಾರಲ್ಲದೆ. ಮುಂಗಾರು-ಹಿಂಗಾರು ಹಂಗಾಮಿನಲ್ಲಿ ಹಾನಿಯನ್ನು ಅನುಭವಿಸುತ್ತಿದ್ದಾರೆ.

ರೈತರ ಬಹುದಿನದ ಕನಸಾಗಿರುವ ಬೈರನಪಾದ ಏತ ನೀರಾವರಿ ಯೋಜನೆ ಜಾರಿಯಾಗದಿರುವ ಕಾರಣದಿಂದಲೂ, ಹರಿಹರ ತಾಲೂಕು ಸಮಗ್ರ ನೀರಾವರಿಯಿಂದ ವಂಚಿತ ಕ್ಷೇತ್ರ ವಾಗಿದೆ. ನಮ್ಮ ರೈತರ ಬದುಕು ನದಿಯ ದಡದಲ್ಲಿಯೇ ಕುಳಿತಿದ್ದರೂ ಕುಡಿಯಲು ನೀರು ಸಿಗದೆ ಸತ್ತಂತಾಗಿದೆ. ಜಿಲ್ಲೆಯ ಜಗಳೂರು, ದಾವಣಗೆರೆ, ಚಿತ್ರದುರ್ಗ ಸೇರಿದಂತೆ ಸುತ್ತಮುತ್ತಲ ತಾಲೂಕಿಗೂ ಕುಡಿಯುವ ನೀರು ಹಾಗೂ ಏತ ನೀರಾವರಿ ಯೋಜನೆಗೂ ನೀರು ಕೊಡುವ ನಮ್ಮ ತಾಲೂಕು ಇವೆಲ್ಲದರಿಂದ ವಂಚಿತಗೊಂಡಿದೆ. ಇದೆಲ್ಲವನ್ನು ಸರಿಪಡಿಸಲು ನೀರಾವರಿ ನಿಗಮ, ಭದ್ರಾ ಕಾಡಾ, ಅಂತರಜಲ ಅಭಿವೃದ್ಧಿ ಇಲಾಖೆಗಳ ಅಧಿಕಾರಿಗಳು ಮುಂದಾಗ ಬೇಕೆಂದು ಒತ್ತಾಯಿಸಿದರು.

ಬೆಳ್ಳೂಡಿ-ರಾಮತೀರ್ಥ ಸೇತುವೆ ಪುರ್ನನಿರ್ಮಿಸಲು ಒತ್ತಾಯ ; ಕಳೆದ 4 ವರ್ಷಗಳ ಹಿಂದೆ ಸುರಿದ ಭಾರಿ ಮಳೆಯಿಂದ ಬೆಳ್ಳೂಡಿ-ರಾಮತೀರ್ಥ ಗ್ರಾಮದ ಮಧ್ಯದಲ್ಲಿ ಹರಿದಿರುವ ಸೂಳೆಕೆರೆ ಹಳ್ಳಕ್ಕೆ ಕಟ್ಟಿರುವ ಸೇತುವೆಯ ತಡೆಗೋಡೆ ನೀರಿನ ರಭಸಕ್ಕೆ ಹಾನಿಯಾದ ಕಾರಣ, ಆ ಸೇತುವೆಯನ್ನೆ ನಂಬಿದ್ದ ಅನೇಕ ಗ್ರಾಮಗಳ ಜನರು ಇಂದು ಅನೇಕ ತೊಂದರೆಗಳನ್ನು ಅನುಭವಿಸುತ್ತಿದ್ದಾರೆ.ಇದು ಜಿಲ್ಲೆಗೆ ಕಪ್ಪು ಚುಕ್ಕೆಯಾಗಿದ್ದು ತಕ್ಷಣವೆ ಮುರಿದು ಬಿದ್ದಿರುವ ಸೇತುವೆಯನ್ನು ದುರಸ್ತಿಗೊಳಿಸಬೇಕು ಎಂದು ಸದಸ್ಯ ಕೊಟ್ರೇಶ ನಾಯ್ಕ ಒತ್ತಾಯಿಸಿದರು ಆಗ ಇದಕ್ಕೆ ಶಿಲ್ಪಾ, ಮತ್ತು ಮಲ್ಲೇಶ ಧ್ವನಿಗುಡಿಸಿದರು.

ಆಗ ಶಾಸಕರು ಮಧ್ಯ ಪ್ರವೇಶಿಸಿ,ಕಳೆದ ಕಳೆದ 2008 ರಲ್ಲಿ ನಾನು ಶಾಸಕನಾಗಿದ್ದ ಸಮಯದಲ್ಲಿಯೇ ಆ ಸೇತುವೆ ನಿರ್ಮಿಸಲಾಗಿದ್ದು. ಅದನ್ನು ಉದ್ಘಾಟಿಸಬೇಕು ಎನ್ನುವಷ್ಟರಲ್ಲಿ ಬಂದ ಚುನಾವಣೆಯ ಸಮಯದಲ್ಲಿ ರಾಮತೀರ್ಥದ ಜನರು ಅದನ್ನು ಉದ್ಘಾಟಿಸಲು ಬಿಡಲಿಲ್ಲ. ಅದು ಇವತ್ತು ಮತ್ತೆ ಹೊಸದಾಗಿ ನಿರ್ಮಿಸುವ ಹಂತೆಕ್ಕೆ ತಲುಪಿದೆ. ಮತ್ತೆ ನಾನು ಶಾಸಕನಾಗಿ ಆಯ್ಕೆಯಾದ ನಂತರ ದಿ.16-6-2022 ರಂದು ಸೇತುವೆ ಪುನಹ ನಿರ್ಮಿಸಲು 10 ಕೋಟಿ ಅನುದಾನಕ್ಕೆ ಪತ್ರ ಬರೆದಿದ್ದೇನೆ. ಅದಕ್ಕೆ ಆರ್ಥಿಕ ಇಲಾಖೆ ಅನುದಾನ ನೀಡುವುದೊಂದೇ ಬಾಕಿ ಉಳಿದಿದ್ದು ಅನುದಾನ ನೀಡಿದ ತಕ್ಷಣವೇ ಕಾಮಗಾರಿ ಆರಂಭಿಸಲಾಗುವುದು ಎಂದು ಸಭೆಯ ಗಮನಕ್ಕೆ ತಂದರು.

ಆಹಾರ, ಆರೋಗ್ಯ, ಶಿಕ್ಷಣ, ಮಹಿಳಾ ಮಕ್ಕಳ ಕಲ್ಯಾಣ, ಸಾರಿಗೆ, ತೋಟಗಾರಿಕೆ, ಕೃಷಿ, ಅರಣ್ಯ, ಹಿಂದುಳಿದ ವರ್ಗಗಳ ಇಲಾಖೆ, ಅಲ್ಪ ಸಂಖ್ಯಾತರ ಅಭಿವೃದ್ಧಿ, ಪರಿಶಿಷ್ಠ ಜಾತಿ, ಪ.ಪಂಗಡಗಳು ಸೇರಿದಂತೆ ಇತರೆ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸ ಲಾಯಿತು. ತಹಶೀಲ್ದಾರ್ ಕೆ.ಎಂ.ಗುರುಬಸವರಾಜ,ತಾ.ಪಂ ಕಾರ್ಯ ನಿರ್ವಹಣಾಧಿಕಾರಿ ಸುಮಲತಾ ಎಸ್.ಪಿ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗೊಳ್ಳಬಹುದು. ನಿಮ್ಮ ಪ್ರೀತಿಪಾತ್ರರ ಅತೃಪ್ತಿಗೆ ನಿಮ್ಮ ನಗು ನಿಮ್ಮ ಅತ್ಯುತ್ತಮ ಔಷಧವಾಗಿದೆ. ಇಂದು ಕೆಲಸದಲ್ಲಿ ಎಲ್ಲರೂ ಪ್ರಾಮಾಣಿಕವಾಗಿ ನಿಮ್ಮನ್ನು ಆಲಿಸುತ್ತಾರೆ. ಈ ರಾಶಿಚಕ್ರದ ವಿದ್ಯಾರ್ಥಿಗಳು ಇಂದು ಅಧ್ಯಯನದಲ್ಲಿ ಮನಸ್ಸನ್ನು ಹೊಂದಲು ತೊಂದರೆಗಳು ಬರಬಹುದು

### ವೃಷಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಲೋನ್ ತೆಗೆದುಕೊಂಡಿರುವ ಜನರಿಗೆ ಲೋನ್ ನ ಮೊತ್ತವನ್ನು ಮರುಪಾವತಿಸುವಲ್ಲಿ ತೊಂದರೆಗಳು ಉಂಟಾಗಬಹುದು. ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ. ನಿಮ್ಮ ಸಹೋದ್ಯೋಗಿಗಳು

### ವೃಷಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಲೋನ್ ತೆಗೆದುಕೊಂಡಿರುವ ಜನರಿಗೆ ಲೋನ್ ನ ಮೊತ್ತವನ್ನು ಮರುಪಾವತಿಸುವಲ್ಲಿ ತೊಂದರೆಗಳು ಉಂಟಾಗಬಹುದು. ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ.

### ಕರ್ಕ ರಾಶಿ

ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ. ಇದು ಜೀವನದ ಸುಗಂಧವನ್ನು ಹಾಳುಮಾಡುವ ಹಾಗೂ ಒಂದು ಸಮೃದ್ಧ ಜೀವನವನ್ನು ನಡೆಸುವ ಬಯಕೆಯನ್ನು ಸಾಯಿಸುವ ನೀಚ ಚಿಂತನೆಯಾಗಿದೆ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು.

### ಸಿಂಹ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ಹಾಗೂ ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ.

### ಕನ್ಯಾ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಇಂದು ಮನೆಯ ಯಾವುದೇ ಎಲೆಕ್ಟ್ರಾನಿಕ್ ಸರಕುಗಳ ಕೆಟ್ಟು ಹೋಗುವ ಕಾರಣದಿಂದಾಗಿ ನಿಮ್ಮ ಹಣ ಖರ್ಚಾಗಬಹುದು. ಮನೆಯ ಕೆಲಸ ಸುಸ್ತು ಮಾಡುತ್ತದೆ ಮತ್ತು ನಿಮ್ಮನ್ನು ಮಾನಸಿಕ ಒತ್ತಡದಲ್ಲಿರಿಸುತ್ತದೆ. ನಿಮ್ಮ ಪ್ರೀತಿಯ ಸಂಬಂಧ ಮಾಂತ್ರಿಕ ತಿರುವು ಪಡೆಯುತ್ತಿದೆ; ಸುಮ್ಮನೇ ಅದನ್ನು ಅನುಭವಿಸಿ.

### ತುಲಾ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವು ತೊಂದರೆಗೊಳಗಾಗಬಹುದು ಮಕ್ಕಳಲ್ಲಿ ನಿಮಗೆ ರೋಮಾಂಚಕ ಸುದ್ದಿ ತರಬಹುದು. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು, ಇಂದು ನಿಮ್ಮ ಸಂಗಾತಿ ಮದುವೆಯ ಬಗ್ಗೆ ನಿಮ್ಮೊಂದಿಗೆ ಮಾತನಾಡಬಹುದು. ಅಂತಹ ಪರಿಸ್ಥಿತಿಯಲ್ಲಿ ಯಾವುದೇ ನಿರ್ಧಾರವನ್ನು ತೆಗೆದುಕೊಳ್ಳುವ ಮೊದಲು ನೀವು ಪರಿಗಣಿಸಬೇಕು.

### ವೃಶ್ಚಿಕ ರಾಶಿ

ಧಾರ್ಮಿಕ ಭಾವನೆಗಳನ್ನು ಉದ್ಭವಿಸಿ ಒಬ್ಬ ಪವಿತ್ರ ವ್ಯಕ್ತಿಯಿಂದ ದೈವಿಕ ಜ್ಞಾನವನ್ನು ಪಡೆಯಲು ನೀವು ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ನೀಡುವಂತೆ ಮಾಡುತ್ತವೆ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು. ಸಂಬಂಧಿಗಳು / ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ. ಮದುವೆಯಾಗುವವರು ತಮ್ಮ ಪ್ರೇಮಿ ಸಂತೋಷದ ಮೂಲವೆಂದು ಕಂಡುಕೊಳ್ಳುತ್ತಾರೆ.

### ಧನು ರಾಶಿ

ನೀವು ಕೆಲವು ಉನ್ನತ ವ್ಯಕ್ತಿಗಳನ್ನು ಭೇಟಿಯಾಗಬಹುದಾದ್ದರಿಂದ ಗಾಬರಿಯಾಗಬೇಡಿ ಮತ್ತು ವಿಶ್ವಾಸ ಕಳೆದುಕೊಳ್ಳದಿರಿ. ಇದು ವ್ಯಾಪಾರಕ್ಕೆ ಬಂಡವಾಳದಂತೆ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ.

### ಮಕರ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ – ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಕನಸಿನ ಚಿಂತೆಗಳನ್ನು ಬಿಟ್ಟು ನಿಮ್ಮ ಪ್ರೀತಿಪಾತ್ರ ಸಂಗಾತಿಯಜೋತೆಯಿರಿ.

### ಕುಂಭ ರಾಶಿ

ನಿಮ್ಮ ಅಧಿಕ ಚೈತನ್ಯದ ಹೊರತಾಗಿಯೂ ನೀವು ಇಂದು ನಿಮ್ಮೊಡನೆ ಇರಲಾರದ ಯಾರನ್ನಾದರೂ ನೆನಪಿಸಿಕೊಳ್ಳುತ್ತಿದ್ದೀರಿ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಹಾಯ ಕೇಳುವ ಒಬ್ಬ ವಯಸ್ಸಾದ ಹಿರಿಯರಿಂದ ಆಶೀರ್ವಾದ. ನಿಮ್ಮ ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ. ನೀವು ಇಂದು ಕೆಲಸದಲ್ಲಿ ಓರ್ವ ಅದ್ಭುತ ವ್ಯಕ್ತಿಯನ್ನು ಬೇಟಿಯಾಗಬಹುದು.

### ಮೀನ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ನಿಮ್ಮ ಮನೆಯಲ್ಲಿ ಸ್ವಲ್ಪ ಸ್ವಚ್ಛತಾ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು.

### ಮಳೆ ನೀರು ಕೊಯ್ಲು ನಿರ್ವಹಣೆ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿಕೆ

## ನೀರನ್ನು ವ್ಯರ್ಥ ಮಾಡದೇ ಮಿತವಾಗಿ ಬಳಸಿ, ಜೀವಜಲ ಕಾಪಾಡಿ



**ದಾವಣಗೆರೆ:** ನೀರನ್ನು ಸುಖಾಸುಮ್ಮನೆ ವ್ಯರ್ಥವಾಗಿ ಪೋಲು ಮಾಡದೇ ಮಿತವಾಗಿ ತುಪ್ಪದ ರೀತಿಯಲ್ಲಿ ಬಳಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಮಂಗಳವಾರ ಮಳೆನೀರು ಕೊಯ್ಲು ನಿರ್ವಹಣೆ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಭೂಮಿಯ ಮೇಲೆ ಶೇ.71ರಷ್ಟು ನೀರಿದ್ದರೂ ಬಳಕೆ ಮತ್ತು ಕುಡಿಯಲು ಕೇವಲ ಶೇ.0.03ರಷ್ಟು ಮಾತ್ರ ಯೋಗ್ಯವಾಗಿದೆ. ನೀರು ಮೂಲಭೂತವಾಗಿ ಅತ್ಯಮೂಲ್ಯವಾದ ವಸ್ತು. ಆದ್ದರಿಂದ ನೀರನ್ನು ವ್ಯರ್ಥವಾಗಿ ಹರಿಯಲು ಬಿಡದೇ ಮಿತವಾಗಿ ಬಳಸಲು ಕ್ರಮವಹಿಸಬೇಕು. ಜಿಲ್ಲೆಯಲ್ಲಿ ವಾರ್ಷಿಕ 650 ಮಿ.ಮೀ ಸರಾಸರಿ ಮಳೆಯಾಗುತ್ತದೆ. ಅಲ್ಲದೇ ಜಿಲ್ಲೆಗೆ ಹೊಂದಿಕೊಂಡು ತುಂಗಭದ್ರಾ ನದಿ ಹರಿಯುತ್ತಿದ್ದರೂ ಸಹ ಬೇಸಿಗೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗುತ್ತಿದೆ. ಆದುದರಿಂದ ಸರ್ಕಾರಿ ಕಟ್ಟಡಗಳಿಗೆ, ಶಾಲಾ ಕಾಲೇಜು, ಹಾಸ್ಟೆಲ್‌ಗಳಿಗೆ ಮಳೆ ನೀರು ಕೊಯ್ಲು ಅಳವಡಿಸಬೇಕು. ಈ ಯೋಜನೆ ಅಳವಡಿಸಲು ಸ್ಥಳದ ಅಭಾವವಿದ್ದಲ್ಲಿ ಕೊಳವೆ ಬಾವಿ ಸುತ್ತಲೂ ಇಂಗು ಗುಂಡಿ ನಿರ್ಮಿಸಬೇಕು.

ಹಾಗೆಯೇ ನಗರಸಭೆ, ಜಿಲ್ಲಾ ಪಂಚಾಯತಿ ಇನ್ನಿತರೆ ಸ್ಥಳೀಯ ಸಂಸ್ಥೆಗಳಿಂದ ಹೊಸದಾಗಿ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡುವ ಮೊದಲು ಕಡ್ಡಾಯವಾಗಿ ಮಳೆನೀರು ಕೊಯ್ಲು ಅಳವಡಿಸಿಕೊಳ್ಳಲು ನಿರ್ದೇಶನ ನೀಡಬೇಕು. ಮಳೆ ನೀರು ಕೊಯ್ಲು ಅಳವಡಿಸಿಕೊಳ್ಳಲು ಒಪ್ಪಿಗೆ ನೀಡಿದವರಿಗೆ ಮಾತ್ರ ಅನುಮತಿ ನೀಡುವ ಜೊತೆಗೆ ಆಸ್ತಿ ತೆರಿಗೆ ರಿಯಾಯಿತಿ ನೀಡಲು ಚಿಂತನೆ ನಡೆಸಲು ಆಯುಕ್ತರಿಗೆ ತಿಳಿಸಿ ನಾಗರೀಕರು ಸಹ ತಮ್ಮ ಮನೆಗಳಿಗೆ ಮಳೆನೀರು ಕೊಯ್ಲು ಅಳವಡಿಸಿಕೊಳ್ಳಲು ಮುಂದೆ ಬರಬೇಕೆಂದರು. ಈ ಮೂಲಕ ನೀರನ್ನು ಮಿತವಾಗಿ, ಶುಚಿಯಾಗಿ ಬಳಸಿದಲ್ಲಿ ಪರಿಸರಕ್ಕೆ ನೀಡುವ ಬಹುದೊಡ್ಡ ಕೊಡುಗೆ ನಿಮ್ಮದಾಗಲಿದೆ.

ಮಳೆ ನೀರು ಕೊಯ್ಲಿನ ಕುರಿತು ಚರ್ಚಿಸಲು ಪ್ರತಿ ತಿಂಗಳು ಐದನೇ ತಾರೀಖಿನಂದು ಸಭೆ ಕರೆಯಲಾಗುತ್ತದೆ. ಈ ಸಭೆಯಲ್ಲಿ ಸಾರ್ವಜನಿಕರೂ ಭಾಗವಹಿಸುವರು. ಮೊದಲ ಹಂತದಲ್ಲಿ ಎಲ್ಲಾ ಹಾಸ್ಟೆಲ್ ಗಳಲ್ಲಿ ಮಳೆ ನೀರು ಕೊಯ್ಲು ಅಳವಡಿಸಿಕೊಳ್ಳಲು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮಮತಾ ಹೊಸಗೌಡರ್, ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ಆಯುಕ್ತೆ ರೇಣುಕಾ ಮತ್ತು ರೈತ ಮುಖಂಡರು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅರೆ ಕಾಲಿಕ ಶಿಕ್ಷಕರ ಸೇವೆಗೆ ಅರ್ಜಿ ಆಹ್ವಾನ

**ದಾವಣಗೆರೆ:** ಕೇಂದ್ರ ಸರ್ಕಾರದ ಮಿಷನ್ ವಾತ್ಸಲ್ಯ 2022ರ ಮಾರ್ಗಸೂಚಿಯಡಿ ಬಾಲಕ, ಬಾಲಕಿಯರ ಸರ್ಕಾರಿ ಬಾಲಮಂದಿರದ ಮಕ್ಕಳಿಗೆ 2025–26ನೇ ಸಾಲಿಗೆ ವಿಜ್ಞಾನ, ಗಣಿತ, ದೈಹಿಕ ಅಥವಾ ಯೋಗ, ಸಂಗೀತ, ಕ್ರಾಫ್ಟ್, ಮತ್ತು ಪಾಠ ಹೇಳುವ ಅರೆಕಾಲಿಕ ಶಿಕ್ಷಕರ ಸೇವೆಗೆ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಹತೆ ವಿವರ:

ವಿಜ್ಞಾನ, ಗಣಿತ ಮತ್ತು ಪಾಠ ಹೇಳುವ ಅರೆಕಾಲಿಕ ಶಿಕ್ಷಕರ ವಿಷಯದಲ್ಲಿ ತಲಾ 2 ಹುದ್ದೆಗಳಿದ್ದು, ಬಿಎಸ್ಸಿ, ಬಿಎಡ್ ಮತ್ತು ದೈಹಿಕ, ಯೋಗ ವಿಷಯದಲ್ಲಿ 2 ಹುದ್ದೆಗಳಿಗೆ ಸಿಪಿಎಡ್, ಬಿಪಿಎಡ್ ವಿದ್ಯಾರ್ಹತೆ ಹೊಂದಿರಬೇಕು. ಸಂಗೀತ, ಕ್ರಾಫ್ಟ್ ವಿಷಯದಲ್ಲಿ ಡಿಪ್ಲೋಮ, ಸಂಗೀತ, ಕ್ರಾಫ್ಟ್ ಮತ್ತು ಕಲೆಯಲ್ಲಿ ಪದವಿ ಪಡೆದಿರಬೇಕು. ಅಲ್ಲದೆ ಈ ಮೇಲ್ಕಂಡ ಹುದ್ದೆಗಳಿಗೆ 1 ವರ್ಷದ ಅನುಭವದೊಂದಿಗೆ 25 ರಿಂದ 55 ವರ್ಷದ ವಯೋಮಾನದೊಳಗಿನ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಬಾಲಕಿಯರ ಸರ್ಕಾರಿ ಬಾಲ ಮಂದಿರ ಸಂಸ್ಥೆಗಳಿಗೆ ಕಡ್ಡಾಯವಾಗಿ ಮಹಿಳಾ ಅಭ್ಯರ್ಥಿಗಳು ಇದೇ ಜೂನ್ 20ರ ಸಂಜೆ 5.30ರೊಳಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಅಪೂರ್ಣ ಮತ್ತು ವಿಳಂಬವಾಗಿ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಜಿಲ್ಲಾ ಮಟ್ಟದ ತ್ರೈಮಾಸಿಕ ಸಭೆ

**ದಾವಣಗೆರೆ;** ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜೂನ್ 5 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ತಂಬಾಕು ನಿಯಂತ್ರಣ ತನಿಖಾ ದಳದ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಸದಸ್ಯರುಗಳನ್ನೊಳಗೊಂಡಂತೆ ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಆಯೋಜಿಸಲಾಗಿದೆ.

## ಬಾಲಕಾರ್ಮಿಕರ ನೇಮಕಾತಿ ಕಂಡುಬಂದಲ್ಲಿ ಕಠಿಣ ಕ್ರಮ: ಜಿಲ್ಲಾಧಿಕಾರಿ



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್.ಮಾತನಾಡಿದರು

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ಯೋಗ ಅಥವಾ ಪ್ರಕ್ರಿಯೆಗಳಲ್ಲಿ ಹಾಗೂ ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಕ ಮಾಡಿಕೊಳ್ಳುವುದು ಕಂಡು ಬಂದಲ್ಲಿ ನಿಯಮಾನುಸಾರ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಬಾಲ ಕಾರ್ಮಿಕರ ಯೋಜನಾ ಸೊಸೈಟಿ ಅಧ್ಯಕ್ಷರಾದ ಸಿ.ಎನ್.ಮೀನಾ ನಾಗರಾಜ್ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಜಿಲ್ಲಾ ಕಾರ್ಮಿಕರ ಯೋಜನಾ ಸೊಸೈಟಿ ವತಿಯಿಂದ ಜಿಲ್ಲಾದ್ಯಂತ ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಸಂಬಂಧ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2024–25ನೇ ಸಾಲಿನ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಪ್ರಗತಿ ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಜಿಲ್ಲೆಯಲ್ಲಿ ಬಾಲ ಮತ್ತು ಕಿಶೋರ ಕಾರ್ಮಿಕರು ಕೆಲಸ ಮಾಡುವುದು ಕಂಡು ಬಂದಲ್ಲಿ ನೇಮಕ ಮಾಡಿಕೊಳ್ಳುವವರ ವಿರುದ್ದ ಕ್ರಮ ಕೈಗೊಳ್ಳಬೇಕು. ಅಂಗಡಿ, ಗ್ಯಾರೇಜ್, ಪ್ಲಾಂಟೇಷನ್, ಕೈಗಾರಿಕೆಗಳಲ್ಲಿ, ಹೋಟೆಲ್ ಮತ್ತಿತರ ಪ್ರದೇಶಗಳಲ್ಲಿ ಅನಿರೀಕ್ಷಿತ ದಾಳಿ ಮಾಡಿ ಈ ಬಗ್ಗೆ ಪತ್ತೆಗೆ ಕ್ರಮ ಕೈಗೊಳ್ಳಬೇಕು ಎಂದ ಅವರು, ಪತ್ತೆಯಾದ ಬಾಲ ಕಾರ್ಮಿಕರನ್ನು ಪುನಃ ವಿದ್ಯಾಭ್ಯಾಸಕ್ಕೆ ಒಳಪಡುವ ರೀತಿಯಲ್ಲಿ ಸಂರಕ್ಷಣೆ ಮಾಡಬೇಕು ಎಂದು ಹೇಳಿದರು.


ಪ್ರತಿ ಇಲಾಖೆ ಅಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಕಂಡುಬರುವ ಬಾಲಕಾರ್ಮಿಕರಿಗೆ ಪುನರ್ವಸತಿ ಹಾಗೂ ಸರ್ಕಾರದ ಸೌಲಭ್ಯ ಕಲ್ಪಿಸಿ ಶಾಲೆ ಬಿಟ್ಟ ಮಕ್ಕಳಿಗೆ ಹಾಸ್ಟೆಲ್ ಸೌಲಭ್ಯ ಒದಗಿಸಬೇಕು. ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಹಾಜರಾತಿ ಪರೀಕ್ಷೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ಶಾಲೆ ಬಿಟ್ಟ ಮಕ್ಕಳನ್ನು ಗುರುತಿಸಿ ಅವರಿಗೆ ಸರಿಯಾದ ಮಾರ್ಗದರ್ಶನ ಮಾಡಿ ಮುಂದಿನ ವಿದ್ಯಾಭ್ಯಾಸಕ್ಕೆ ಪ್ರೇರಣೆಯಾಗುವಂತೆ ಅರಿವು ಮೂಡಿಸುವ ಹಲವಾರು ಅಗತ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು, ಇದನ್ನು ಅನು?ನಗೊಳಿಸಲು ಅಧಿಕಾರಿಗಳು ಮುಂದಾಗಬೇಕು. ಎಸ್.ಇ.ಪಿ. ಮತ್ತು ಟಿ.ಎಸ್.ಪಿ. ಕಾರ್ಯಕ್ರಮಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ದೊರೆಯುವಂತೆ ಮಾಡಬೇಕು ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಹನುಮಂತಪ್ಪ ಅವರು ಮಾತನಾಡಿ, ಜಿಲ್ಲೆಯಲ್ಲಿ ಹಲವು ಮಕ್ಕಳು ಕಾಣೆಯಾಗಿರುವ ಬಗ್ಗೆ ತುರ್ತಾಗಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಶಾಲೆ ಬಿಟ್ಟ ವಿದ್ಯಾರ್ಥಿಗಳು ಹಾಗೂ ವಲಸೆ ಕಾರ್ಮಿಕರನ್ನು ಗುರುತಿಸಿ, ಗುರುತಿನ ಚೀಟಿ ಹಾಗೂ ಸರ್ಕಾರದ ಸೌಲಭ್ಯಗಳನ್ನು ನೀಡಲು ಯೋಜನೆಗಳನ್ನು ರೂಪಿಸಿಕೊಂಡು ಅನು?ನಗೊಳಿಸಬೇಕು ಎಂದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಬಿ.ಸಿ.ಸುರೇಶ್ ಹಾಗೂ ಸುಭಾ? ಆಲದಕಟ್ಟಿ, ಉಪವಿಭಾಗಾಧಿಕಾರಿ ದೇವರಾಜ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ವಯಂ ಸೇವಾ ಸಂಸ್ಥೆಯ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಉತ್ಖನನಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ಧರಾಮಯ್ಯ




**ಗದಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪ್ರ ಮೈಸೂರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಗದಗ ಇವರ ಸಹಯೋಗದಲ್ಲಿ ಮಂಗಳವಾರ(ಜೂ.3) ಲಕ್ಕುಂಡಿಯ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಉತ್ಖನನಕ್ಕೆ ಮಾನ್ಯ ಮುಖ್ಯಮಂತ್ರಿಯವರಾದ ಸಿದ್ಧರಾಮಯ್ಯ ಅವರು ಚಾಲನೆ ನೀಡಿದರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ, ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ,

ಸರ್ಕಾರದ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ಶಾಸಕರುಗಳಾದ ಸಿ.ಸಿ.ಪಾಟೀಲ, ಚಂದ್ರು ಲಮಾಣಿ,ಎನ್. ಎಸ್.ಕೋನರಡ್ಡಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಲಕ್ಕುಂಡಿ ಗ್ರಾಮ ಪಂಚಾಯತ ಅಧ್ಯಕ್ಷರಾದ ಕೆಂಚಪ್ಪ ಪೂಜಾರ, ಗ್ರಾಮ ಪಂಚಾಯತ ಉಪಾಧ್ಯಕ್ಷರು, ಸದಸ್ಯರುಗಳು, ಮಾಜಿ ಸಚಿವರಾದ ಎಸ್.ಎಸ್.ಪಾಟೀಲ, ಮಾಜಿ ಶಾಸಕ ಡಿ.ಆರ್.ಪಾಟೀಲ,ಮಾಜಿ ಸಂಸದ ಐ.ಜಿ.ಸನದಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ ಸಿ.ಇ.ಓ ಭರತ. ಎಸ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸೇರಿದಂತೆ ಗಣ್ಯರುಗಳು ಉಪಸ್ಥಿತರಿದ್ದರು.

## ಸಾರಿಗೆ ನಿಗಮದಿಂದ ವಿದ್ಯಾರ್ಥಿ ಬಸ್‌ಪಾಸ್ ವ್ಯವಸ್ಥೆ

**ಚಿಕ್ಕಮಗಳೂರು:** 2025–26ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಬಸ್ ಪಾಸ್ ಪಡೆಯಲು ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್(ಐಡಿ: ಗಖಐ–ಇಣಣಠಿ://ಜತಭಟಿಜಣಾಜಡಿತುಥಿಜ.ಇಚಿಡಿಟಿಚಿಣಚಿಞಚಿ.ರಠತ.ಟಿ/ಛಣಾಠಿಭೆಜಡಿತುಥಿಜ/) ನಲ್ಲಿ ಅರ್ಜಿ ಸಲ್ಲಿಸಬೇಕಿದ್ದು, ಸರ್ಕಾರದ ಆದೇಶದಂತೆ ಸಂಪೂರ್ಣ ಗಣಕೀಕೃತವಾಗಿ ವಿದ್ಯಾರ್ಥಿ ಬಸ್‌ಪಾಸ್‌ಗಳನ್ನು ವಿತರಿಸಲಾಗುವುದು. ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು. ಅಲ್ಲಿ ರೂ.30 ಸೇವಾ ಶುಲ್ಕ ಪಡೆಯಲು ಅವಕಾಶವಿದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ (<https://ksrtc.karnataka.gov.in/studentpass>) ನಲ್ಲಿ ಪಡೆಯಬಹುದು.


## ಚಿತ್ರದುರ್ಗದ ಸಾಹಿತಿ ಶ್ರೀಮತಿ ಸಿ ಬಿ ಶೈಲಾ ಜಯಕುಮಾರ್ ರವರ ಕಿರು ಪರಿಚಯ



**ಚಿತ್ರದುರ್ಗ:** ಹೆಸರಾಂತ ಸಾಹಿತಿ ಹಾಗೂ ನಿವೃತ್ತ ಉಪನ್ಯಾಸಕಿ ಶ್ರೀಮತಿ ಸಿ.ಬಿ ಶೈಲ ರವರು ಶ್ರೀ ಬಿ.ಟಿ. ಬಸವರಾಜಪ್ಪ ಹಾಗೂ ಶ್ರೀಮತಿ ವೀರ ಮಂಗಳಮ್ಮನವರ ಸುಪುತ್ರಿಯಾಗಿ ಬಳ್ಳಾರಿಯಲ್ಲಿ ಹುಟ್ಟಿದರು. ಇವರು ಎಂ.ಎ ಹಾಗೂ ಎಂ.ಇಡಿ ಪದವಿಯನ್ನು ಮೈಸೂರು ವಿಶ್ವವಿದ್ಯಾಲಯದಿಂದ ಪಡೆದಿದ್ದು ಜೊತೆಗೆ ಜರ್ನಲಿಸಂನಲ್ಲಿ ಡಿಪ್ಲೊಮಾ ಮಾಡಿದ್ದಾರೆ. ಚಿತ್ರದುರ್ಗದ ಬಾಲಕರ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆಸಲ್ಲಿಸಿ ನಿವೃತ್ತರಾಗಿದ್ದಾರೆ. ಇವರು ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಶಿಕ್ಷಕಿ ವಾಗ್ಮಿ ಸಾಹಿತಿ ಹೀಗೆ ಬಹುಮುಖ ಪ್ರತಿಭೆಯ ಶ್ರೀಮತಿ ಶೈಲ ರವರು ಲೇಖಕಿಯಾಗಿ ಹಲವಾರು ಕವನ ಸಂಕಲನ ಕಥಾ ಸಂಕಲನ ಸಾಮಾಜಿಕ ಕಳಕಳಿಯ ಲೇಖನಗಳು ಇತ್ಯಾದಿ ರಚಿಸಿದ ಪ್ರತಿಭಾವಂತೆ. ಇವರ ಸಂಪಾದನೆಯಲ್ಲಿ ಅನೇಕ ಕೃತಿಗಳು ಲೋಕಾರ್ಪಣೆಗೊಂಡಿವೆ. ಸಾಹಿತ್ಯದಲ್ಲಿ ಆಸಕ್ತಿಯುಳ್ಳ ಪತಿ ಜಯಕುಮಾರ್ ಬ್ಯಾಂಕಿನ ಅಧ್ಯಕ್ಷ ಮೇನೇಜರ್ ರಾಗಿ ಕಾರ್ಯನಿರ್ವಹಿಸಿ ಅವರೂ ಸಹ ನಿವೃತ್ತರಾಗಿದ್ದು ಅನ್ಯೋನ್ಯ ಜೀವನ ನಡೆಸುತ್ತಿದ್ದಾರೆ. ಈ ದಂಪತಿಗಳಿಗೆ ಈರ್ವರು ಮಕ್ಕಳು. ಮಗಳು ಅಪರ್ಣ ಎಂ.ಬಿ.ಎ ಪದವೀಧರೆಯಾಗಿದ್ದು ಈಗ ಬೆಂಗಳೂರಿನಲ್ಲಿ ನೆಮ್ಮದಿಯ ವೈವಾಹಿಕ ಜೀವನ ನಡೆಸುತಿದ್ದಾರೆ. ಮಗ ಹರ್ಷವರ್ಧನ ಸಾಫ್ಟವೇರ್ ಇಂಜಿನಿಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಒಂದು ರೀತಿಯಲ್ಲಿ ಶ್ರೀಮತಿ ಶೈಲಜಯರಾಮ್ ರವರದು ಆದರ್ಶ ಸಂಸಾರವಾಗಿದೆ.

ಚಿತ್ರದುರ್ಗ ಆಕಾಶವಾಣಿಯಲ್ಲಿ ಭಾಗವಹಿಸಿ ಪ್ರಸ್ತುತಪಡಿಸಿದ ನಲ್ನುಡಿಗಳನ್ನು ಸಂಗ್ರಹಿಸಿ ನುಡಿಗನ್ನಡಿ ಕೃತಿ ಪ್ರಕಟಿಸಿದ್ದಾರೆ. ಅಲ್ಲದೆ ಅವರಿಂದ ರಚಿತವಾದ ಉತ್ತರೆಯ ಸ್ವಗತ ಭಾವನೆಗಳ ಬೆನ್ನೇರಿ, ಅಶ್ವತ್ಥಾಮೋಹತಃ ಕಥಾ ಸಂಕಲನಗಳು ಪ್ರಕಟಗೊಂಡಿವೆ . ಅಹಲ್ಯಾಂತರಂಗ ಅವರೇ ಪ್ರಕಟಿತ ಕವನ ಸಂಕಲನವಾದರೆ ಏಕತೆಯಲ್ಲಿ ಅನೇಕತೆ ಪ್ರಬಂಧ ಸಂಕಲನವಾಗಿದೆ. ಜ್ಞಾನಪೀಠ ಪುರಸ್ಕತರ ಬಗೆಗೆ ರಸಪ್ರಶ್ನಾವಳಿ ರಚಿಸಿರುತ್ತಾರೆ. ಇವರಿಂದ ಚಿರಂಜೀವಿಗಳು, ಅಂತಃಕರಣದ ರಾಯಭಾರಿಗಳು ಸಂಕ್ಷಿಪ್ತ ವ್ಯಕ್ತಿ ಚಿತ್ರಣಗಳೂ ರಚಿಸಲ್ಪಟ್ಟಿವೆ. ಇವರ ಒಟ್ಟು 13 ಕೃತಿಗಳು ಪ್ರಕಟಗೊಂಡಿವೆ.ಇವರ ಪ್ರತಿಭೆಗೆ ಮೆಚ್ಚುಗೆಯಾಗಿ ಅನೇಕ ಪ್ರಶಸ್ತಿಗಳು ಅವರ ಮುಡಿಗೇರಿವೆ. ಮೈಸೂರು ವಿಶ್ವವಿದ್ಯಾನಿಲಯದಿಂದ ತೀನಂಶ್ರೀ ಸ್ವರ್ಣ ಪದಕ ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಚಿತ್ರದುರ್ಗಜಿಲ್ಲಾಡಳಿತದಿಂದ ನಾಗರಿಕ ಪ್ರಶಸ್ತಿ ಮುಂತಾದ ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದಾರೆ. ಇಂದಿಗೂ ಸಹ ಉತ್ತಮ ನಿರೂಪಕಿ. ಶ್ರೇಷ್ಠ ವಾಗ್ಮಿ ಹಾಗೂ ಲೇಖಕಿಯಾಗಿರುವ ಸರಳ ಸಜ್ಜನಿಕೆಯ ಶ್ರೀಮತಿ ಸಿ.ಬಿ. ಶೈಲಜಯಕುಮಾರ್ ರವರು ದಿನಾಂಕ 6 – 6 –2025 ರಂದು ನಗರದ ರೋಟರಿ ಬಾಲಭವನದಲ್ಲಿ ನಡೆಯಲಿರುವ ದಾವಣಗೆರೆ ಶಾಖೆಯ ಕರ್ನಾಟಕ ಲೇಖಕಿಯರ ಸಂಘದ 5 ನೇ ವಾರ್ಷಿಕೋತ್ಸವದಲ್ಲಿ.ಮುಖ್ಯ ಅತಿಥಿಯಾಗಿ ಆಗಮಿಸಿ ಲೇಖಕಿಯರ ಸಂಘದಿಂದ ರಚಿಸಲ್ಪಟ್ಟ ವನಿತೆ– ಕಥೆ –– ಕವಿತೆ ಕೃತಿಯನ್ನುಲೋಕಾರ್ಪಣೆಗೊಳಿಸಲಿದ್ದಾರೆ. ಅವರಿಗೆ ದಾವಣಗೆರೆಯ ಎಲ್ಲ ಸಾಹಿತ್ಯಾಸಕ್ತರಿಂದ ಹಾರ್ದಿಕ ಸ್ವಾಗತ.

## ಜೈನ್ ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಗೊಡುಗೆ



**ದಾವಣಗೆರೆ:–** ನಗರದ ಜೈನ್ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿಯ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಸಕ್ತ ಶೈಕ್ಷಣಿಕ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಮಂಗಳವಾರ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ಸೂಪರಿಂಟೆಂಡೆಂಟ್ ಇಂಜಿನಿಯರ್ ಮತ್ತು ವಾಟರ್ ಆಂಡ್ ಲ್ಯಾಂಡ್ ಮ್ಯಾನೆಜ್ಮೆಂಟ್ ಇನ್ಸಿಟ್ಯೂಟ್, ಧಾರವಾಡದ ಪ್ರೊ. ಬಿ.ವೈ. ಬಂಡಿವಾದರ್, ಕಾಲೇಜಿನ ಪ್ರಾಂಶುಪಾಲ ಡಾ. ಗಣೇಶ್ ಡಿ ಬಿ, ಸಲಹೆಗಾರರಾದ ಡಾ. ಮಂಜಪ್ಪ ಸಾರಥಿ, ಸಿವಿಲ್ ವಿಭಾಗದ ಮುಖ್ಯಸ್ಥ ಡಾ. ರಾಹುಲ್ ಪಾಟೀಲ್ ಮತ್ತು ಸಂಯೋಜಕ ದರ್ಶನ್ ಕೆ ಆರ್ ದೀಪ ಹಚ್ಚುವುದರ ಮೂಲಕ ನೆರವೇರಿಸಿದರು.

ನಂತರ ಮಾತನಾಡಿದ ಬಿ.ವೈ. ಬಂಡಿವಾದರ್ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿಷಯಗಳ ಜೊತೆಗೆ ಪ್ರಾಯೋಗಿಕವಾಗಿ ತಮ್ಮನ್ನು ತೊಡಗಿಸಿಕೊಳ್ಳಬೇಕು. ದೇಶ ನಿರ್ಮಾಣದಲ್ಲಿ ಸಿವಿಲ್ ಇಂಜಿನಿಯರ್‌ಗಳ ಪಾತ್ರ ಬಹುಮುಖ್ಯ. ಹಾಗು ಇತ್ತಿಚಿನ ದಿನಗಳಲ್ಲಿ ದೇಶದ ಮೂಲಸೌಕರ್ಯದ ಅಭಿವೃದ್ಧಿಗೆ ಯುವ ಸಿವಿಲ್ ಇಂಜಿನಿಯರ್‌ಗಳ ಪಾತ್ರ ಅತಿ ಅಗತ್ಯ ಎಂದು ಕರೆ ನೀಡಿದರು.

ಸಲಹೆಗಾರರಾದ ಡಾ. ಮಂಜಪ್ಪ ಸಾರಥಿ ಮತ್ತು ಪ್ರಾಂಶುಪಾಲರಾದ ಡಾ. ಗಣೇಶ್ ಡಿ ಬಿ ಮಾತಾನಾಡಿ ದೇಶವು ಪ್ರಸ್ತುತವಾಗಿ ಜಾಗತಿಕ ಅರ್ಥಿಕ ಅಭಿವೃದ್ದಿಯಲ್ಲಿ ನಾಲ್ಕನೆ ಸ್ಥಾನದಲ್ಲಿದ್ದು ಮುಂಬರುವ ದಿನಗಳಲ್ಲಿ ಸಮಾಜಕ್ಕೆ ಸಿವಿಲ್ ಇಂಜಿನಿಯರ್‌ಗಳ ಅವಶ್ಯಕತೆ ಬಗ್ಗೆ ವಿಸ್ತಾರವಾಗಿ ತಿಳಿಸಿದರು. ವಿಭಾಗದ ಮುಖ್ಯಸ್ಥ ಡಾ. ರಾಹುಲ್ ಪಾಟೀಲ್ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ತಿಳಿಸಿದರು.

## ಅಂಗನವಾಡಿ ಕೇಂದ್ರದ ಮಕ್ಕಳ ಆರೋಗ್ಯ ತಪಾಸಣೆ, ಜುಲೈನಲ್ಲಿ ಶಾಲಾ ಮಕ್ಕಳಿಗೆ ಲಸಿಕಾಕರಣ; ಸಿಇಓ ಸುರೇಶ್ ಬಿ.ಇಟ್ನಾಳ್

ದಾವಣಗೆರೆ; ಅಂಗನವಾಡಿ ಕೇಂದ್ರಗಳಲ್ಲಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆ ನಿಯಮಿತವಾಗಿ ನಡೆಯಬೇಕು ಮತ್ತು ಜುಲೈ ನಿಂದ ಶಾಲಾ ಮಕ್ಕಳಿಗೆ ಲಸಿಕೆ ಹಾಕಲು ಪ್ರಾರಂಭಿಸಬೇಕೆಂದು ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣಾ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ತಿಳಿಸಿದರು.

ಮಂಗಳವಾರ(ಜೂನ್.3) ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಕಾರ್ಯಕಾರಿ ಸಮಿತಿ ಸಭೆ ಮತ್ತು ಆರ್.ಬಿ.ಎಸ್.ಕೆ. ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಿಶು ಅಭಿವೃದ್ಧಿ ಯೊಜನಾಧಿಕಾರಿಗಳು ಅಂಗನವಾಡಿ ಕಾರ್ಯಕರ್ತೆಯರಿಂದ ಸರಿಯಾಗಿ ಕೆಲಸ ತೆಗೆಯಬೇಕು. ಮಕ್ಕಳ ಆರೋಗ್ಯ ಕಾಪಾಡುವಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆಯ ಜವಾಬ್ದಾರಿ ಹೆಚ್ಚು ಇದೆ. ಮಕ್ಕಳಿಗೆ ನೀಡುವ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಿ, ಆತ್ಮಸಾಕ್ಷಿಯಾಗಿ ಕರ್ತವ್ಯಗಳನ್ನು ನಿರ್ವಹಿಸಬೇಕು ಎಂದು ತಿಳಿಸಿದರು. ವಿಕಲಚೇತನರಿಗೆ ಪುನರ್ವಸತಿ ಕಲ್ಪಿಸಿ ಜಿಲ್ಲೆಯಲ್ಲಿ ಮಹತ್ವದ ಬದಲಾವಣೆ ಕಾಣಬಹುದು. ಈ ನಿಟ್ಟಿನಲ್ಲಿ ವೈದ್ಯರು, ಶಿಕ್ಷಕರು ಸೇರಿದಂತೆ ವಿಕಲಚೇತನರ ಕ್ಷೇತ್ರದಲ್ಲಿ ಕೆಲಸ ಮಾಡುವ ಪ್ರತಿಯೊಬ್ಬರೂ ಆತ್ಮಸಾಕ್ಷಿಯಾಗಿ ಅವರಿಗೆ ಒದಗಿಸಬೇಕಾದ ಸೌಲಭ್ಯಗಳು ಮತ್ತು ಪುನರ್ವಸತಿ ಬಗ್ಗೆ ಹೆಚ್ಚಿನ ಗಮನಹರಿಸಿ ಅವರ ಬಾಳಿನಲ್ಲಿ ಆಶಾಕಿರಣವಾಗಬೇಕೆಂದರು.

ವಿವಿಧ ತಾಲ್ಲೂಕುಗಳಲ್ಲಿ ಕೆಲಸ ಮಾಡುತ್ತಿರುವ ವೈದ್ಯರು ಮತ್ತು ಅಧಿಕಾರಿಗಳು ಮಕ್ಕಳ ಆರೋಗ್ಯ ತಪಾಸಣೆ ನಡೆಸಿದಾಗ ಕಂಡುಬರುವ ಕಿವಿ, ಕಣ್ಣು, ಬುದ್ಧಿಮಾಂದ್ಯತೆ, ಇತರೆ ನ್ಯೂನತೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಸಮರ್ಪಕವಾದ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ ಸೌಲಭ್ಯ ಒದಗಿಸಬೇಕು ಎಂದರು. ಹಾಗೆಯೇ ವೈದ್ಯರು ಕೂಡ ಆಪ್ತಸಮಾಲೋಚನೆ, ಚಿಕಿತ್ಸೆ ಸೇರಿದಂತೆ ಅವರಿಗೆ ಅಗತ್ಯವಾದ ಸೂಕ್ತ ಸೌಲಭ್ಯ ನೀಡಿದಲ್ಲಿ ಪ್ರತಿ ವರ್ಷ ಸಾಕಷ್ಟು ಜನರು ಇದರ ಪ್ರಯೋಜನ ಪಡೆದು ವರ್ಷದಿಂದ ವರ್ಷಕ್ಕೆ ಉತ್ತಮ ಬೆಳವಣಿಗೆ ಕಾಣಬಹುದೆಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ;ಷಣ್ಮುಖಪ್ಪ, ಆರ್‌ಸಿಹೆಚ್ ಅಧಿಕಾರಿ ಡಾ.ರೇಣುಕಾರಾಧ್ಯ, ಜಿಲ್ಲಾ ಸರ್ಜನ್ ಡಾ; ನಾಗೇಂದ್ರಪ್ಪ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೈಸೂರಿನ ಕಾವಾದಲ್ಲಿ ಅತಿಥಿ ಉಪನ್ಯಾಸಕ ಹುದ್ದೆಗಳು

**ಚಿಕ್ಕಮಗಳೂರು :** ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ವತಿಯಿಂದ 2025-26ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅತಿಥಿ ಉಪನ್ಯಾಸಕ, ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಇಚ್ಛಿಸುವ ಅಭ್ಯರ್ಥಿಗಳಿಂದ ಗೌರವ ಸಂಭಾವನೆ ಆಧಾರದ ಮೇಲೆ ಷರತ್ತು ಹಾಗೂ ನಿಬಂಧನೆಗಳ ಅನ್ವಯ ಕಾರ್ಯ ನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ.

ಬಿವಿಎ, ಎಂಬಿಎ ವಿದ್ಯಾರ್ಥಿಗಳು ಸೇರಿದಂತೆ ಪ್ರಾಯೋಗಿಕ ಥಿಯರಿ ಬೋಧನೆಯಲ್ಲಿ ಅನ್ವಯ ಕಲೆ, ಚಿತ್ರಕಲೆ, ಶಿಲ್ಪಕಲೆ, ಅಚ್ಚುಕಲೆ (ಗ್ರಾಫಿಕ್ಸ್), ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಷಯ ವಿಭಾಗ-ಕ್ಕೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸಂಬಂಧಪಟ್ಟ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಪೋಸ್ಟ್ ಡಿಪ್ಲೊಮಾದಲ್ಲಿ (ಪಿ.ಜಿ.ಡಿಪ್ಲೊಮಾ) ಕನಿಷ್ಠ ಶೇ.55 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಭಾಷಾ ವಿಷಯಗಳಲ್ಲಿ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸ್ನಾತಕೋತ್ತರ ಪದವಿಯನ್ನು ಪಡೆದಿದ್ದು, ಕನ್ನಡ, ಇಂಗ್ಲೀಷ್, ಹಿಂದಿ ಭಾಷಾ ವಿಷಯದಲ್ಲಿ ಶೇ.55 ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಭಾರತ ಮತ್ತು ಭಾರತೀಯ ಸಂವಿಧಾನ ಹಾಗೂ ಸಂವಿಧಾನದ ಮೌಲ್ಯಗಳು (ಎಸ್‌ಇಸಿ ಪೇಪರ್) ಈ ವಿಷಯಕ್ಕೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಎಲ್‌ಎಲ್‌ಎಂ ಸ್ನಾತಕೋತ್ತರ ಪದವಿ ಪಡೆದಿದ್ದು, ಕನಿಷ್ಠ ಶೇ.55 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಸೈಬರ್ ಸೆಕ್ಯುರಿಟಿ, ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಈ ವಿಷಯಕ್ಕೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸ್ನಾತಕೋತ್ತರ ಪದವಿ(ಎಂಎಸ್‌ಸಿ-ಐಟಿ)ಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.
ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲದ ವಿಳಾಸ ತಿತಿತಿ.ಟಥಿಂಡಿಜ.ಟುಭಿ.ಟಿ ಮತ್ತು ತಿತಿತಿ.ಥಿಚಿತಚಿಟಥಿಂಡಿಜ.ಇಚಿಡಿಟಚಿಣಚಿಞಚಿ.ರಂತ.ಟಿ ನಲ್ಲಿ ಮಾಹಿತಿಯನ್ನು ಪಡೆಯಬಹುದು. ಜೂನ್ 16ರ ಸಂಜೆ 5.30 ಗಂಟೆಯೊಳಗೆ ಅರ್ಜಿಯನ್ನು ಸಲ್ಲಿಸಬೇಕಾಗಿದ್ದು, ಜೂನ್ 26 ರಂದು ಬೆಳಿಗ್ಗೆ 11 ಗಂಟೆಗೆ ಸಂಸ್ಥೆಯಲ್ಲಿ ಸಂದರ್ಶನವನ್ನು ನಡೆಸಲಾಗುವುದು. ಹೆಚ್ಚಿನ ಮಾಹಿತಿಗೆ ದೂರವಾಣಿ 0821-2438931 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಕಾವಾದ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹನಿ ನೀರಾವರಿ ಘಟಕಕ್ಕೆ ಶೇ.90 ಸಹಾಯಧನ

**ಚಿಕ್ಕಮಗಳೂರು.ಮೇ.31:** ತೋಟಗಾರಿಕೆ ಇಲಾಖಾ ವತಿಯಿಂದ ಈ ಹಿಂದೆ ಅಳವಡಿಸಿಕೊಂಡಿದ್ದ ಸೂಕ್ಷ್ಮ ನೀರಾವರಿ ಪದ್ಧತಿ ಹಾಳಾಗಿದ್ದಲ್ಲಿ, ಘಟಕ ಕಾರ್ಯ ನಿರ್ವಹಿಸದೇ ಇದ್ದಲ್ಲಿ 7 ವರ್ಷಗಳ ನಂತರ ಅದೇ ಜಮೀನಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ (ಆರ್.ಕೆ.ವಿ.ವೈ) ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ತರಕಾರಿ ಹಾಗೂ ಇತರೆ ಬಹುವಾರ್ಷಿಕ ತೋಟಗಾರಿ-ಕೆ ಬೆಳೆಗಳಿಗೆ (ಕಾಫಿ, ಟೀ, ರಬ್ಬರ್ ಹೊರತುಪಡಿಸಿ) ಮತ್ತೊಮ್ಮೆ ಹನಿ ನೀರಾವರಿ ಘಟಕ ಅಳವಡಿಸಿಕೊಳ್ಳಲು ಸಹಾಯಧನ ನೀಡಲಾಗುವುದು.
ಹನಿ ನೀರಾವರಿ ಅಳವಡಿಸಿಕೊಳ್ಳಲು ನೀಡಬೇಕಾದ ದಾಖಲಾತಿಗಳ ವಿವರ: ಹೊಸ ಪಹಣಿ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್ ಪ್ರತಿ, ಎರಡು ಪಾಸ್ ಪೋರ್ಟ್ ಸೈಜ್ ಫೋಟೋ, ಮಣ್ಣು ಮತ್ತು ನೀರು ಪರೀಕ್ಷಾ ವರದಿ (ಕೃಷಿ ಇಲಾಖೆ ಪ್ರಯೋಗಾಲಯದಿಂದ), ಎಸ್.ಸಿ., ಎಸ್.ಟಿ. ಆಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ಜೆರಾಕ್ಸ್ ಪ್ರತಿ, ಜಂಟಿ ಖಾತೆ ಹೊಂದಿದ್ದಲ್ಲಿ 100 ರೂ.ನ ಛಾಪಾ ಕಾಗದದಲ್ಲಿ ಒಪ್ಪಿಗೆ ಪತ್ರ (ನೋಟರಿ), ಕೃಷಿ ಮತ್ತು ರೇಷ್ಮೆ ಇಲಾಖೆಯಿಂದ ನಿರಾಪೇಕ್ಷಣಾ ಪ್ರಮಾಣ ಪತ್ರ ಓಔಅ (ನಮೂನೆ 2) ಒದಗಿಸಬೇಕಾದ ದಾಖಲಾತಿಗಳು: ಕಚೇರಿಯಿಂದ ಪಡೆದ ಅರ್ಜಿ ನಮೂನೆ, ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪ್ರತಿ, ಆರ್.ಡಿ. ಸಂಖ್ಯೆಯ ಜಾತಿ ಪ್ರಮಾಣ ಪತ್ರದ ಪ್ರತಿ (ಎಸ್.ಸಿ.-ಎಸ್.ಟಿ. ಫಲಾನುಭವಿಗಳಿಗೆ ಮಾತ್ರ) ಹಾಗೂ ಇತರೆ ದಾಖಲೆಗಳನ್ನು ಸಲ್ಲಿಸುವುದು. ಎಫ್.ಐ.ಡಿ. ಹೊಂದಿರುವ ರೈತರು ಮೇಲೆ ತಿಳಿಸಿರುವ ದಾಖಲೆಗಳನ್ನು ಸಲ್ಲಿಸದೆ ಅರ್ಜಿಯಲ್ಲಿ ಎಲ್ಲಾ ವಿವರಗಳನ್ನು ನಮೂದಿಸಿ ಸಲ್ಲಿಸಬಹುದು.

## ಜೇನು ತುಪ್ಪಕ್ಕೆ ಝೇಂಕಾರ ಬ್ರಾಂಡ್ ಬಳಸಲು ಸಲಹೆ

**ಚಿಕ್ಕಮಗಳೂರು, ಮೇ 31:** ತೋಟಗಾರಿಕೆ ಇಲಾಖೆಯ ವತಿಯಿಂದ ಮಧುವನ ಹಾಗೂ ಜೇನು ಸಾಕಾಣಿ-ಕೆ ಅಭಿವೃದ್ಧಿ ಯೋಜನೆಯಡಿ ಸಹಾಯಧನ ಪಡೆದ ಎಲ್ಲಾ ವರ್ಗದ ಆಸಕ್ತ ರೈತರುಗಳು ತೋಟಗಾರಿಕೆ ಇಲಾಖೆ ಮಾಲೀಕತ್ವದ "ಝೇಂಕಾರ" ಎಂಬ ಜೇನುತುಪ್ಪದ ಬ್ರಾಂಡ್ ಹೆಸರು, ಲೋಗೋ ಮತ್ತು ಟ್ಯಾಗ್‌ಲೈನ್ ಅನ್ನು ಬಳಸಿಕೊಂಡು ಜೇನುತುಪ್ಪ ಉತ್ಪಾದಕರು ಜೇನುತುಪ್ಪ ಮತ್ತು ಜೇನಿನ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ.

# ಋತುಚಕ್ರದ ಅವಧಿಯಲ್ಲಿ ಜಂಕ್‌ಫುಡ್ ಬಳಕೆ ಬೇಡ : ಜಾನಕಿ



**ಚಿತ್ರದುರ್ಗ:** ಋತುಚಕ್ರದ ಅವಧಿಯಲ್ಲಿ ಯಾವುದೇ ಜಂಕ್‌ಫುಡ್ ಬಳಕೆ ಮಾಡಬಾರದು. ಪೌಷ್ಟಿಕಾಂಶವುಳ್ಳ ಆಹಾರ ಸೇವನೆ ಅತಿ ಮುಖ್ಯವಾದದ್ದು, ಇದರಿಂದ ರಕ್ತ ಹೀನತೆ ತಡೆಗಟ್ಟಬಹುದು ಎಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ ಹೇಳಿದರು.

ಬುದ್ಧ ನಗರ ಆರೋಗ್ಯ ಕೇಂದ್ರದಲ್ಲಿ ವಿಶ್ವ ಋತುಚಕ್ರ ನೈರ್ಮಲ್ಯ ದಿನದ ಅಂಗವಾಗಿ ಆರೋಗ್ಯ ಇಲಾಖೆ ವತಿಯಿಂದ ನಗರದ ಅಂಗನವಾಡಿ ಕಾರ್ಯಕರ್ತರಿಗೆ ಮತ್ತು ಹದಿಹರೆಯದ ಹೆಣ್ಣು ಮಕ್ಕಳಿಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಋತುಮತಿ ಆದ ಹುಡುಗಿ ಯುವತಿಯಾಗಿ ನಂತರ ಮಹಿಳೆಯಾಗಿ ಸಂತಾನೋತ್ಪತ್ತಿ ಕ್ರಿಯೆಗೆ ಅರ್ಹತೆ ಪಡೆಯುತ್ತಾಳೆ. ಪ್ರತಿ ತಿಂಗಳು 28 ರಿಂದ 30 ದಿನಗಳ ಒಳಗೆ ಆಗುವ ಋತುಚಕ್ರ ಮಹಿಳೆಗೆ ಗರ್ಭ ಧರಿಸಲು ಅತ್ಯಗತ್ಯ ಕ್ರಿಯೆ ಎಂದು ಹೇಳಿದರು.

9 ರಿಂದ 16 ವರ್ಷದೊಳಗಿನ ಹೆಣ್ಣು ಮಕ್ಕಳಲ್ಲಿ ಪ್ರಥಮವಾಗಿ ಋತುಸ್ರಾವ ಆರಂಭವಾಗುತ್ತದೆ ಇಂತಹ ಸಂದರ್ಭದಲ್ಲಿ ಮುಜುಗರವಿಲ್ಲದೆ ಪಾಲಕರ ಜೊತೆ ವಿಷಯ ಹಂಚಿಕೆ ಮಾಡಿಕೊಳ್ಳಬೇಕು. ಪೋಷಕರು ಸಹ ಅಂತಹ ಸಂದರ್ಭದಲ್ಲಿ ಹೆಣ್ಣುಮಕ್ಕಳ ಜೊತೆ ಸ್ನೇಹ ಭಾವಿಯಾಗಿ ವರ್ತಿಸಬೇಕು ಅವರಲ್ಲಿ ಆಗುವಂತಹ ಮಾನಸಿಕ, ದೈಹಿಕ, ಭಾವನಾತ್ಮಕ ಬದಲಾವಣೆಗಳನ್ನು ಗಮನಹರಿಸಿ ಅವರ ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಬೇಕು ಎಂದು ತಿಳಿಸಿದರು. ಹಾಗೂ ವೈಯುಕ್ತಿಕ ಸುಚಿತ್ವದ ಕಡೆ ಹೆಚ್ಚಿನ ಮಾಹಿತಿಯನ್ನು ನೀಡಿ ಸ್ವಚ್ಛತೆ ಬಗ್ಗೆ ಆದ್ಯತೆ ನೀಡಬೇಕು.

ಸ್ಯಾನಿಟರಿ ಪ್ಯಾಡ್‌ಗಳ ಬಳಕೆ ಬಗ್ಗೆ ತಿಳಿದು ಕೊಳ್ಳಬೇಕು. ಮುಟ್ಟಾದ ದಿನಗಳಲ್ಲಿ ಪ್ರತಿ ನಾಲ್ಕರಿಂದ ಆರು ಗಂಟೆಗಳಿಗೊಮ್ಮೆ ಪ್ಯಾಡ್‌ಗಳನ್ನು ಬದಲಾಯಿಸಲು ಮಾಹಿತಿಯನ್ನು ಪೋಷಕರು ಸಹ ಹೆಣ್ಣು ಮಕ್ಕಳಿಗೆ ತಿಳಿಸಿ ಗಮನಹರಿಸುವುದು ಹಾಗೂ ಹೇಗೆ ವಿಲೇವಾರಿ ಮಾಡಬೇಕು ಎಂಬುದರ ಬಗ್ಗೆ ಕೂಡ ತಿಳಿಸಬೇಕು ಹಾಗೂ ಒಂದು ವೇಳೆ ಋತುಚಕ್ರದ ವೇಳೆಯಲ್ಲಿ ಅಧಿಕ ರಕ್ತಸ್ರಾವದಿಂದ ಬಳಲುತ್ತಿದ್ದರೆ ತಕ್ಷಣ ತಜ್ಞವೈದ್ಯರಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಋತುಸ್ರಾವದ ಸಂದರ್ಭದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡದಿದ್ದರೆ ಗರ್ಭಕೋಶದ ಸೋಂಕಿಗೆ ತುತ್ತಾಗಬಹುದು. ಆದ್ದರಿಂದ ಹೆಚ್ಚಿನ ಆದ್ಯತೆ ನೀಡಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬುದ್ಧ ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುರೇಂದ್ರ, ಅಂಗನವಾಡಿ ಮೇಲ್ವಿಚಾರಕಿ ನಿರ್ಮಲ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್, ತಾಲ್ಲೂಕು ಆಶಾ ಬೋಧಕರಾದ ತಬಿತ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಗೀತಾ, ಏಕಾಂತಮ್ಮ, ಸುಜಾತ ಹಾಗೂ ಅಂಗನವಾಡಿ ಕಾರ್ಯಕರ್ತರು, ಹದಿಹರೆಯದ ಹೆಣ್ಣು ಮಕ್ಕಳು ಹಾಜರಿದ್ದರು.

# ಉತ್ತಮ ಪರಿಸರ ಮತ್ತು ನಮ್ಮವರ ಆರೋಗ್ಯ ದೃಷ್ಟಿಯಿಂದ ಜೇನು ಸಾಕೋಣ : ರಜನೀಕಾಂತ್



**ಚಿತ್ರದುರ್ಗ :** ಉತ್ತಮ ಪರಿಸರ ಮತ್ತು ನಮ್ಮವರ ಆರೋಗ್ಯ ದೃಷ್ಟಿಯಿಂದ ಜೇನು ಸಾಕೋಣ ಎಂದು ಬಬ್ಬೂರುಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ಆರ್.ರಜನೀಕಾಂತ್ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜಿಲ್ಲೆಯ ರೈತರಿಗೆ ಜೇನು ಕೃಷಿಯ ಕುರಿತು ಎರಡು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆಯ ಬೆಳೆ ವೈವಿಧ್ಯ ಸ್ವಾಭಾವಿಕ ಸಸ್ಯವರ್ಗ ಹವಾಮಾನ ಮತ್ತು ಹೇರಳ ಮಾನವ ಸಂಪನ್ಮೂಲಗಳು ಜೇನು ಕೃಷಿಗೆ ಪೂರಕವಾಗಿವೆ. ಎಲ್ಲ ರೈತರು ಜೇನು ಸಾಕಲು ಮುಂದಾದಾಗ ಯಾವ ಹೆಚ್ಚಿನ ಖರ್ಚು, ಹೊರಗಿನ ಸಾಮಗ್ರಿ ಇಲ್ಲದೆ ಬೆಳೆ ಇಳುವರಿಯನ್ನು ಕನಿಷ್ಟ ಶೇ. 10 ರಿಂದ ಶೇ. 70 ರಷ್ಟು ಹೆಚ್ಚಿಸಬಹುದಾಗಿದೆಂದರು.

ಜೇನನ್ನು ಭೂಲೋಕದ ಅಮೃತಕ್ಕೆ ಹೋಲಿಸುತ್ತಾ, ಪರಿಶುದ್ಧ ಜೇನುತುಪ್ಪವನ್ನು ನಿಂಬೆಹಣ್ಣಿನ ರಸ ಮತ್ತು ನೀರಿನೊಂದಿಗೆ ನಿಯಮಿತವಾಗಿ ಸೇವಿಸಿ 21 ದಿನ ಉಪವಾಸ ಮಾಡಿ ಬೊಜ್ಜು, ದೀರ್ಘಕಾಲಿಕ ಅಸ್ತಮಾ ಮತ್ತು ಗ್ಯಾಸ್ಟ್ರಿಕ್ ನಂತಹ ಕಾಯಿಲೆಯನ್ನು ಗುಣಪಡಿಸಿಕೊಂಡ ವಿಧವನ್ನು ತಮ್ಮ ಸ್ವ ಅನುಭವವನ್ನು ಹಾಜರಿದ್ದ ರೈತರೊಂದಿಗೆ ಹಂಚಿಕೊಂಡರು.

ಜೇನು ಒಂದು ಉತ್ತಮ ದಿವ್ಯ ಔಷಧಿಯಾಗಿದ್ದು, ರೋಗನಿರೋಧಕ ಶಕ್ತಿ ಹೆಚ್ಚಿಸಲು. ಮಲಬದ್ಧತೆ ನಿವಾರಣೆಗೆ ರಕ್ತಶುದ್ಧಿ ಮಾಡಲು, ಕೆಮ್ಮು, ಶೀತ, ನೆಗಡಿ, ಜ್ವರವನ್ನು ಉಪಶಮನ ಮಾಡಲು ಸಹಕಾರಿಯಾಗಿದೆ.. ಸಕಲ ಪೋಶಕಾಂಷಭರಿತ ಜೇನು ಅತ್ಯುತ್ತಮ ಶಿಶು ಆಹಾರವಾಗಿದ್ದು, ಮಕ್ಕಳ ಪೋಷಕಾಂಶ ಕೊರತೆ ನೀಗಿಸಲು ಗರ್ಭಿಣಿಯರಲ್ಲಿ ಕಬ್ಬಿಣದ ಕೊರತೆ ನೀಗಿಸಲು ಮತ್ತು ರಕ್ತದ ವೃದ್ಧಿಗೆ ಪರಿಣಾಮಕಾರಿಯಾಗಿದೆ.. ಜೇನನ್ನು ಮಕ್ಕಳಿಗೆ ಪ್ರತಿ ದಿನ 10-15 ಗ್ರಾಂ ಮತ್ತು ಯುವಕರು ಹಾಗೂ ವೃದ್ದರು 20-35 ಗ್ರಾಂ ಸೇವನೆ ಮಾಡಬಹುದು. ಪರಿಶುದ್ಧ ಜೇನು ಪಡೆಯಲು ಅತ್ಯಂತ ಸರಳ ಸುಲಭ ಮಾರ್ಗವೆಂದರೆ ನಮ್ಮ ಮನೆ, ಕೈತೋಟ, ತೋಟಗಳಲ್ಲಿ ಜೇನು ಸಾಕಾಣಿಕೆ ಮಾಡುವುದು. ಯಾರಿಗಾಗಿ ಅಲ್ಲವಾದರೂ ನಮಗಾಗಿ, ನಮ್ಮ ಮನೆ ಮಂದಿಯ ಆರೋಗ್ಯದ ಹಿತದೃಷ್ಟಿಯಿಂದ ಹವ್ಯಾಸದ ರೂಪದಲ್ಲಿಯಾದರೂ ಜೇನು ಸಾಕೋಣ. ಆದ ಪ್ರಯುಕ್ತ ಜೇನಿನ ಪ್ರಾಮುಖ್ಯತೆ ಮತ್ತು ಜೇನು ಸಾಕಾಣಿಕೆಯ ತಾಂತ್ರಿಕತೆಯ ಕುರಿತು ಅರಿವುಮೂಡಿಸುವುದು ಈ ತರಬೇತಿಯ ಉದ್ದೇಶವಾಗಿದ್ದು, ರೈತಬಾಂಧವರು ಸದರಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ವಿನಂತಿಸಿದರು.

ತಾಂತ್ರಿಕ ಅಧಿವೇಶನದಲ್ಲಿ ಜೇನು ತಜ್ಞರಾದ ಶಾಂತವೀರಯ್ಯ ಮಾತನಾಡಿ, ಜೇನು ತಳಿಗಳಲ್ಲಿ ಹೆಜ್ಜೇನು ಮತ್ತು. ಕೋಲ್ಜೇನುಗಳನ್ನು ಸಾಕಲು ಬರುವುದಿಲ್ಲ. ಆದರೆ ತುಡುವೆ ಜೇನು, ಮೆಲ್ಲಿಫೆರಾ ಮತ್ತು ಮುಝುಂಟಿ (ನಸರಿ) ಜೇನು ಸಾಕಲು ಯೋಗ್ಯವಾಗಿವೆ. ತುಡುವೆ ಜೇನು ಕೆಲಸಗಾರ ಜೇನು ನೊಣಗಳ ಆಹಾರ ತರುವ ಸಾಮರ್ಥ್ಯ ಕಾರ್ಯವ್ಯಾಪ್ತಿ ಗೂಡಿನಿಂದ 1-1.5 ಕಿ.ಮೀ. ದೂರ ತ್ರಿಜ್ಯದ ಕ್ಷೇತ್ರವಿದ್ದು, ಮೆಲ್ಲಿಫೆರ ಜೇನು ನೊಣಗಳು ಗೂಡಿನಿಂದ 2-3 ಕಿ.ಮೀ. ತ್ರಿಜ್ಯದ ಕ್ಷೇತ್ರದಿಂದ ಆಹಾರವನ್ನು ಹೊತ್ತು ತರುತ್ತವೆಂದರು. ಜೇನ್ನೊಣಗಳ ಜೀವನ ಚಕ್ರದಲ್ಲಿ ಮೊಟ್ಟೆ, ಮರಿ (ಲಾರ್ವಾ), ಕೋಶ ಮತ್ತು ಪ್ರೌಢ ಕೀಟವೆಂಬ ನಾಲ್ಕು ಹಂತಗಳಿವೆ. ಜೇನ್ನೊಣಗಳಲ್ಲಿ ಮೊಟ್ಟೆಗಳು ನಿರ್ಲಿಂಗ ರೀತಿಯಲ್ಲಿ ಉತ್ಪಾದನೆ ಆಗುತ್ತವೆ. ಅವು ವೀರ್ಯದಿಂದ ಫಲಿತಾಗಬಹುದು. ಆಗದಿರಬಹುದು. ಫಲಿತ ಮೊಟ್ಟೆಯಿಂದ ರಾಣಿ ಮತ್ತು ಕೆಲಸಗಾರ ಹೊರಬಂದರೆ ಅಫಲಿತ ಮೊಟ್ಟೆಯಿಂದ ಗಂಡು ಹುಟ್ಟುತ್ತದೆಂದರು.

ಜೇನು ನೊಣಗಳು 180 ಸೆಂಟಿಗ್ರೇಡಿನಿಂದ 360 ಸೆಂಟಿಗ್ರೇಡ್ ತಾಪಮಾನದಲ್ಲಿ ಸಮರ್ಪಕವಾಗಿ ಕೆಲಸ ಮಾಡುತ್ತವೆ. ಹೆಚ್ಚಾದರೂ, ಕಡಿಮೆಯಾದರೂ ಅವುಗಳ ಕೆಲಸದಲ್ಲಿ ಏರುಪೇರಾಗುತ್ತದೆ. ಚಿತ್ರದುರ್ಗದ ಹವಾಮಾನದಲ್ಲಿ ಬಿಸಿಲಿನ ನಿರ್ವಹಣೆ ಅತಿ ಮುಖ್ಯ ಜೇನುಗೂಡುಗಳನ್ನು ನೆರಳಿರುವ ಕಡೆ ಇಡಬೇಕು ಅಥವಾ ನೆರಳು ಮಾಡಬೇಕು ಇಲ್ಲವಾದರೆ, ತುಂಬಾ ಕೆಲಸಗಾರ ಜೇನು ನೊಣಗಳು ಮರಿಗಳಿಗೆ ಗಾಳಿಹಾಕಿ ಒಳಗಿನ ತಾಪ ತಣ್ಣಗಾಗಿಸುವ ಪ್ರಯತ್ನದಲ್ಲಿ ತೊಡಗುತ್ತವೆ. ಆಹಾರ ತರುವ ಕೆಲಸಕ್ಕೆ ಅಡ್ಡಿಯಾಗುತ್ತದೆ, ಕುಟುಂಬ ಬಡವಾಗುತ್ತದೆ ಇಲ್ಲವೆ ಪರಾ-ರಿಯಾಗುತ್ತದೆಂದರು.

# ಬೆಂಗಳೂರಿನ ಬಾನು ಸೇರಿದಂತೆ 15 ನರ್ಸ್‌ಗಳಿಗೆ ರಾಷ್ಟ್ರಪತಿಗಳಿಂದ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ಪ್ರದಾನ



**ನವದೆಹಲಿ:** ನರ್ಸಿಂಗ್‌ನಲ್ಲಿ ಪಿಎಚ್‌ಡಿ ಪದವಿ ಪಡೆದಿರುವ, ಪಠ್ಯಪುಸ್ತಕಗಳನ್ನು ಬರೆದಿರುವ, ಹಲವಾರು ಸಂಶೋಧನಾ ಲೇಖನಗಳನ್ನು ಪ್ರಕಟಿಸಿರುವ, ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ಸಹಾಯಕ ನರ್ಸಿಂಗ್ ಸೂಪರಿಂಟೆಂಡೆಂಟ್ ಆಗಿ ಸೇವೆ ಸಲ್ಲಿಸುತ್ತಿರುವ ಪ್ರತಿಭಾನ್ವಿತ ಶಿಕ್ಷಣ ತಜ್ಞ ಡಾ. ಬಾನು ಎಂ.ಆರ್ ಅವರು ಸೇರಿದಂತೆ 15 ನರ್ಸ್‌ಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರತಿಷ್ಠಿತ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ-2025 ಅನ್ನು ಶುಕ್ರವಾರ ಪ್ರದಾನ ಮಾಡಿದರು.

ಇಂದು ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನರ್ಸಿಂಗ್ ವೃತ್ತಿಪರರಿಗೆ ರಾಷ್ಟ್ರೀಯ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

ಕೋವಿಡ್-19 ಸಾಂಕ್ರಾಮಿಕ ರೋಗದ ಸಮಯದಲ್ಲಿ ಅನುಕರಣೀಯ ನಾಯಕತ್ವ ಪ್ರದರ್ಶಿಸಿದ್ದಕ್ಕಾಗಿ ಮತ್ತು ಇತರ ನರ್ಸ್‌ಗಳಿಗೆ ಮಾದರಿಯಾಗುವಂತ ಕೆಲಸ ಮಾಡಿದ ಡಾ. ಬಾನು ಅವರಿಗೆ ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎಎನ್‌ಎಂ ಆಗಿ ವೃತ್ತಿ ಜೀವನ ಆರಂಭಿಸಿ, ನಿರ್ವಹಣಾ ಬೋಧಕಿ ಸ್ಥಾನಕ್ಕೇರಿ ಈ ವರ್ಷ ನಿವೃತ್ತಿಯಾದ ಆರೋಗ್ಯ ಶಿಕ್ಷಕಿ ವಲಿವೇಟಿ ಸುಭಾವತಿ ಅವರು ಫ್ಲಾರೆನ್ಸ್ ನೈಟಿಂಗೇಲ್ ಪ್ರಶಸ್ತಿ ಸ್ವೀಕರಿಸಿದರು.

ತಮಿಳುನಾಡಿನ ಶ್ರೀವಿಲ್ಲಿಪುತೂರು ಉಪ-ಜಿಲ್ಲಾ ಆಸ್ಪತ್ರೆಯ ಸರ್ಕಾರಿ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿರುವ ಕೆ ಅಲಮೇಲು ಮಂಗಯಾರ್ಕರಸಿ, ದೆಹಲಿಯ ಇಬ್ಬರು ಮತ್ತು ಪುದುಚೇರಿಯ ಒಬ್ಬರು ದಾದಿಯರು ಪ್ರಶಸ್ತಿಯನ್ನು ಸ್ವೀಕರಿಸಿದರು.

ಅಂಡಮಾನ್ ಮತ್ತು ನಿಕೋಬಾರ್, ಲಕ್ಷದ್ವೀಪ, ದಾದರ್ ಮತ್ತು ನಗರ ಹವೇಲಿ, ದಮನ್ ಮತ್ತು ಡಿಯು, ಮಹಾರಾಷ್ಟ್ರ, ಅಸ್ಸಾಂ, ಅರುಣಾಚಲ ಪ್ರದೇಶ, ಮಣಿಪುರ, ಮಿಜೋರಾಂ ಮತ್ತು ಪಶ್ಚಿಮ ಬಂಗಾಳದಿಂದ ತಲಾ ಒಬ್ಬರು ದಾದಿಯರನ್ನು ಈ ಪ್ರತಿಷ್ಠಿತ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ದಾದಿಯರು ಮತ್ತು ನರ್ಸಿಂಗ್ ವೃತ್ತಿಪರರು ಸಮಾಜಕ್ಕೆ ಸಲ್ಲಿಸಿದ ಅತ್ಯುತ್ತಮ ಸೇವೆಗಳನ್ನು ಗುರುತಿಸುವ ಸಂಕೇತವಾಗಿ 1973 ರಲ್ಲಿ ಕೇಂದ್ರ ಆರೋಗ್ಯ ಸಚಿವಾಲಯವು ಈ ಪ್ರಶಸ್ತಿಯನ್ನು ಸ್ಥಾಪಿಸಿತು.

## ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿತ್ರದುರ್ಗ :** 2025-26ನೇ ಸಾಲಿಗೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಡಾ.ಬಿ.ಆರ್.ಅಂಬೇಡ್ಕರ್, ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶಾತಿ ಬಯಸುವ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನ.
ಸಂಬಂಧಪಟ್ಟ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಲು ಇಲಾಖಾ ಆನ್‌ಲೈನ್ ವೆಬ್‌ಸೈಟ್‌ನಲ್ಲಿ ತಿತಿಶ.ತಿ.ಇಚಿಡಿ.ಟುಭಿ.ಟಿ ರಲ್ಲಿ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಹಾಗೂ ಇತರೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಆಯಾ ತಾಲ್ಲೂಕು ಸಮಾಜ ಕಲ್ಯಾಣ ಇಲಾಖಾ ಸಹಾಯಕ ನಿರ್ದೇಶಕರ ಕಛೇರಿ ಅಥವಾ ಹತ್ತಿರದ ವಿದ್ಯಾರ್ಥಿನಿಲಯದ ವಾರ್ಡನ್ ಅವರನ್ನು ಸಂಪರ್ಕಿಸಬಹುದಾಗಿದೆ.
ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಬೇಕಾಗುವ ಅಗತ್ಯ ದಾಖಲಾತಿಗಳು: ವಿದ್ಯಾರ್ಥಿ ಎಸ್‌ಎಟಿಎಸ್ ನಂಬರ್‌ನ ಜೆರಾಕ್ಸ್ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್‌ಬುಕ್, ಆಧಾರ್ ಕಾರ್ಡ್, ಹಿಂದಿನ ತರಗತಿಯಲ್ಲಿ ಪಾಸ್‌ಆದ ಅಂಕಪಟ್ಟಿಯ ಜೆರಾಕ್ಸ್ ಪ್ರತಿಗಳು ಸೇರಿದಂತೆ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಎನ್‌ಪಿಸಿಐನಲ್ಲಿ ಆಧಾರ್ ಜೋಡಣೆ ಮಾಡಿರಬೇಕು. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು.
ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಬೇಕಾಗುವ ಅಗತ್ಯ ದಾಖಲಾತಿಗಳು : ವಿದ್ಯಾಥಿಯ ಕಾಲೇಜು ದಾಖಲಾತಿ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್‌ಬುಕ್, ಆಧಾರ್ ಕಾರ್ಡ್, ಹಿಂದಿನ ತರಗತಿಯಲ್ಲಿ ಪಾಸ್ ಆದ ಅಂಕಪಟ್ಟಿಯ ಜೆರಾಕ್ಸ್ ಪ್ರತಿ, ಸೇರಿದಂತೆ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಎನ್‌ಪಿಸಿಐನಲ್ಲಿ ಆಧಾರ್ ಜೋಡಣೆ ಮಾಡಿರಬೇಕು. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ವಿದ್ಯಾರ್ಥಿಯ ದೂರದ ಪ್ರಮಾಣ ಪತ್ರ ಹಾಗೂ ವಿದ್ಯಾರ್ಥಿಯ ಎಸ್‌ಎಸ್‌ಪಿ ವಿವರ ಹಾಗೂ ಇತರೆ ಅಗತ್ಯ ದಾಖಲಾತಿಗಳನ್ನು ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

## ದೇಸಿ ತಳಿ ಬೆಳೆಗಳ ಸಂರಕ್ಷಣೆ: ರೈತರು ವಿವರ ನಮೂದಿಸಲು ಮನವಿ

**ಬಳ್ಳಾರಿ:** ರಾಜ್ಯ ಸರ್ಕಾರವು 2025 ರ ಆಯವ್ಯಯದಲ್ಲಿ ಘೋಷಿತ ಕಾರ್ಯಕ್ರಮವಾದ ದೇಶಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದಡಿ ದೇಶಿ ತಳಿಗಳನ್ನು ಸಂರಕ್ಷಿಸುತ್ತಿರುವ ರೈತರ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ದೇಶಿ ತಳಿಗಳನ್ನು ಬೆಳೆದು ಸಂರಕ್ಷಿಸುತ್ತಿರುವ ಜಿಲ್ಲೆಯ ರೈತರು ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ತಾವು ಬೆಳೆಯುವ ದೇಶಿ ತಳಿಗಳ ವಿವರವನ್ನು ನೋಂದಾಯಿಸಬೇಕು.
ಕಣ್ಮರೆಯಾಗುತ್ತಿರುವ ಹಾಗೂ ನಶಿಸಿ ಹೋಗುತ್ತಿರುವ ಸ್ಥಳೀಯ ಬೆಳೆಗಳ ತಳಿಗಳನ್ನು ಸಂಗ್ರಹಿಸುವ ಮತ್ತು ಸಂರಕ್ಷಿಸುವ ಉದ್ದೇಶಕ್ಕೆ ಕೈ ಜೋಡಿಸಬೇಕು. ಕೃಷಿ ಇಲಾಖೆಯ ಅಧಿಕೃತ ಪೋರ್ಟಲ್ ನಲ್ಲಿ ನೋಂದಣಿ ಕಡ್ಡಾಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಕೆ.ಎಂ. ಸೋಮಸುಂದರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 3 ರಂದು ವಸತಿ ಶಾಲೆ ಆಯ್ಕೆಗೆ ಕೌನ್ಸಲಿಂಗ್ ಪ್ರಕ್ರಿಯೆ

**ಬಳ್ಳಾರಿ:** ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಸಕ್ತ ಸಾಲಿನ 6ನೇ ತರಗತಿ ದಾಖಲಾತಿಗೆ ಈಗಾಗಲೇ ಪ್ರವೇಶ ಪರೀಕ್ಷೆ ನಡೆದಿದ್ದು, ಆಯ್ಕೆಯಾದ ವಿದ್ಯಾರ್ಥಿಗಳಿಗೆ ಜೂನ್ 03 ರಂದು ಕೌನ್ಸಲಿಂಗ್ ಪ್ರಕ್ರಿಯೆ ಏರ್ಪಡಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.
ನಗರದ ಹೊಸಪೇಟೆ ರಸ್ತೆಯ ಅಲ್ಲಿಪುರದ ಬಿಐಟಿಎಂ ಕಾಲೇಜು ಹತ್ತಿರ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಜೂ 03 ರಂದು ಬೆಳಿಗ್ಗೆ 10 ಗಂಟೆಗೆ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಕೌನ್ಸಲಿಂಗ್ ಮೂಲಕ ಪ್ರವೇಶದ ಸೀಟ್‌ನ್ನು (ವಸತಿ ಶಾಲೆಯನ್ನು) ಆಯ್ಕೆ ಮಾಡಿಕೊಳ್ಳಬಹುದಾಗಿದೆ.

***ಕೌನ್ಸಲಿಂಗ್‌ಗೆ ಬೇಕಾದ ದಾಖಲೆಗಳು:***

ಆಧಾರ್‌ಕಾರ್ಡ್, ವಿದ್ಯಾರ್ಥಿಯ 5 ಭಾವಚಿತ್ರ, 5ನೇ ತರಗತಿ ಅಂಕಪಟ್ಟಿ, ಹಾಲ್ ಟಿಕೆಟ್ (ಪ್ರವೇಶ ಪತ್ರ), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿಶೇಷ ಕೋಟಾದಲ್ಲಿ ಆಯ್ಕೆಯಾದ ಪ್ರಮಾಣ ಪತ್ರ ಸೇರಿದಂತೆ ಎಲ್ಲಾ ದಾಖಲೆಗಳನ್ನು ದ್ವಿ ಪ್ರತಿಯ ಝೆರಾಕ್ಸ್‌ಗಳನ್ನು ಹಾಜರುಪಡಿಸಬೇಕು.

# ರಾಜ್ಯ ಸರ್ಕಾರ ಜನೌಷಧಿ ಕೇಂದ್ರಗಳನ್ನು ಬಂದ್ ಮಾಡಿ ದ್ವೇಷ ರಾಜಕಾರಣ ಮಾಡುತ್ತಿದೆ ; ವೀರೇಶ್ ಹನಗವಾಡಿ ಆಕ್ರೋಶ




**ಹರಿಹರ :** ರಾಜ್ಯ ಸರ್ಕಾರ ಜನ ಔಷಧಿ ಕೇಂದ್ರಗಳನ್ನು ಬಂದ್ ಮಾಡಿ ದ್ವೇಷ ರಾಜ-ಕಾರಣ ಮಾಡುತ್ತಾ ಬಡವರ ಹೊಟ್ಟೆಯ ಮೇಲೆ ಬರೆ ಎಳೆಯುತ್ತಿದೆ ಎಂದು ಭಾರತೀಯ ಜನತಾ ಪಾರ್ಟಿ ಜಿಲ್ಲಾ ಮಾಜಿ ಅಧ್ಯಕ್ಷ ಎಸ್.ಎಂ.ವೀರೇಶ್ ಹನಗವಾಡಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಸಾರ್ವಜನಿಕ ಆಸ್ಪತ್ರೆಯ ಮುಂಭಾಗದಲ್ಲಿ ಭಾರತೀಯ ಜನತಾ ಪಕ್ಷದ ತಾಲೂಕು ಘಟಕದ ವತಿಯಿಂದ ಆಸ್ಪತ್ರೆಗಳ ಬಳಿ ಇರುವ ಜನೌಷಧಿ ಕೇಂದ್ರಗಳ ಬಂದ್ ಮಾಡಿರುವುದರ ವಿರುದ್ಧ ಹಮ್ಮಿಕೊಂಡಿದ್ದ ಮೌನ ಪ್ರತಿಭಟನೆಯ ವೇಳೆ ಮಾತನಾಡಿದ ಅವರು, ದೇಶದಲ್ಲಿ ಕೇಂದ್ರ ಸರ್ಕಾರ ಬಡವರಿಗೆ ಅನುಕೂಲದ ದೃಷ್ಟಿಯಿಂದ ಜೀವ ರಕ್ಷಕ ಔಷಧಿಗಳು 20 ರಿಂದ 90%ರಿಯಾಯಿತಿ ದರದಲ್ಲಿ ನೀಡಲು ಜಾರಿಗೆ ತಂದ ಜನೌಷಧಿ ಕೇಂದ್ರಗಳನ್ನು ಮುಚ್ಚುವ ನಿರ್ಧಾರ ಕೇವಲ ದ್ವೇಷದ ರಾಜಕಾರಣವಾಗಿದೆ.

ಹಲವು ಕಾಯಿಲೆಗಳಿಂದ ಬಳಲುತ್ತಿರುವ ಬಡ ಜನರು ರಿಯಾಯಿತಿ ದರದಲ್ಲಿ ಜನೌಷಧಿ ಕೇಂದ್ರಗಳಲ್ಲಿ ಔಷಧಿ ಖರೀದಿಸಿ ಗುಣಮುಖರಾಗುತ್ತಿದ್ದರು ಆದರೆ ರಾಜ್ಯ ಸರ್ಕಾರ ಬಡವರಿಗೆ ಔಷಧಿಗಳನ್ನು ಉಚಿತವಾಗಿ ನೀಡುತ್ತೇವೆ ಎಂದು ಹೇಳಿದೆ ಆದರೂ ಆಸ್ಪತ್ರೆಗಳಲ್ಲಿ ಸಾಕಷ್ಟು ದಾಸ್ತಾನು ಇರುವುದಿಲ್ಲ ಮೊದಲು ಔಷಧಿಗಳ ದಾಸ್ತಾನನ್ನು ಹೆಚ್ಚು ಮಾಡಿ ಎಂದು ಸರ್ಕಾರವನ್ನು ಒತ್ತಾಯಿಸಿದರು.

ರಾಜ್ಯ ರಾಜ್ಯ ಸರ್ಕಾರ ಉಚಿತ ಯೋಜನೆಗಳನ್ನು ಜಾರಿಗೊಳಿಸಿ ಶ್ರೀಸಾಮಾನ್ಯರನ್ನು ವಂಚಿಸುತ್ತಿದೆ. ಗೃಹಲಕ್ಷ್ಮಿ ಯೋಜನೆಯಲ್ಲಿ ಬಹಳಷ್ಟು ಜನ ಮಹಿಳೆಯರಿಗೆ ಕೆಲವು ತಿಂಗಳುಗಳಿಂದ ಹಣವೇ ಬಂದಿಲ್ಲ, ಶಕ್ತಿ ಯೋಜನೆಯಲ್ಲಿ ಮಹಿಳೆಯರಿಗೆ ಉಚಿತ ಬಸ್ ವ್ಯವಸ್ಥೆ ಮಾಡಿ ತಾಲೂಕಿನ ಅನೇಕ ಹಳ್ಳಿಗಳಿಗೆ ಈಗಲೂ ಬಸ್ಸಿನ ಸಂಪರ್ಕ ಸಾಧ್ಯವಾಗಿಲ್ಲ ಇದನ್ನು ಸರಿಪಡಿಸಬೇಕು.

ಗೃಹಜ್ಯೋತಿ ಯೋಜನೆಯಲ್ಲಿ ಉಚಿತ ವಿದ್ಯುತ್ ನೀಡುವ ನೆಪದಲ್ಲಿ ಹೇಳು ಬಾರಿ ವಿದ್ಯುತ್ ತರವನ್ನು ಹೆಚ್ಚಿಸಿದೆ, ಅಲ್ಲದೆ ರೈತರಿಗೆ ಕೊಡುವ ಪಹಣಿ, ಸ್ಟ್ಯಾಂಪ್ ಡ್ಯೂಟಿ ಶುಲ್ಕವನ್ನು ಹೆಚ್ಚಿಸಿದೆ ಜೊತೆಗೆ ರೈತರ ಪಂಪ್ ಸೆಟ್ ಗಳಿಗೆ ನೀಡುವ ಟ್ರಾನ್ಸ್‌ಫಾರ್ಮರ್ ಗಳ ಶುಲ್ಕವನ್ನು ನಮ್ಮ ಸರ್ಕಾರ ಇದ್ದಾಗ 15-20 ಸಾವಿರ ಇದ್ದುದ್ದನ್ನು ಈಗ 2-3 ಲಕ್ಷಕ್ಕೆ ಏರಿಕೆ ಮಾಡಿದ್ದಾರೆ. ವಿದ್ಯಾನಿಧಿ ಯೋಜನೆಯಿಂದ ಇದುವರೆಗೂ ತಾಲೂಕಿನಲ್ಲಿ ಯಾವುದೇ ವಿದ್ಯಾರ್ಥಿಗಳಿಗೆ ಹಣ ಬಂದಿಲ್ಲ ಎಂದು ವ್ಯಂಗ್ಯವಾಡಿದರು.

ರಾಜ್ಯ ಸರ್ಕಾರ ಸಾರ್ವಜನಿಕ ಆಸ್ಪತ್ರೆಗಳ ಬಳಿ ಇರುವ ಜನೌಷಧಿ ಕೇಂದ್ರಗಳನ್ನು ರದ್ದುಪಡಿಸುವ ನಿರ್ಧಾರವನ್ನು ಕೂಡಲೇ ಹಿಂಪಡೆಯಬೇಕು ತಪ್ಪಿದಲ್ಲಿ ಮುಂಬರುವ ದಿನಗಳಲ್ಲಿ ಬಿಜೆಪಿ ಪಕ್ಷದಿಂದ ಉಗ್ರವಾದ ಹೋರಾಟವನ್ನು ನಡೆಸಲಾಗುವುದು ಎಂದು ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವನ್ನು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಚಂದ್ರಶೇಖರ್ ಪೂಜಾರ್ ಮಾತನಾಡಿ ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಕೇವಲ ಕೆಟ್ಟ ನಿರ್ದಾರಗಳನ್ನು ತೆಗೆದುಕೊಳ್ಳುತ್ತಾ ಬಡಜನರ ಮೇಲೆ ಬೆಲೆ ಏರಿಕೆಯ ಬರೆಯನ್ನು ಎಳೆಯುತ್ತಲೇ ಬಂದಿದೆ. ಇದೊಂದು ಬಂಡ ಸರ್ಕಾರವಾಗಿದ್ದು ಬಡಜನರ ಪರ ಇಲ್ಲದೆ ಜನ ರೋಸಿ ಹೋಗಿದ್ದಾರೆ. ಇಂದಿನ ಮೌನ ಹೋರಾಟ ಮುಂದೆ ಉಗ್ರ ಹೋರಾಟವಾಗಿ ಬದಲಾಗುವ ಮೊದಲೇ ರಾಜ್ಯ ಸರ್ಕಾರ ಬಂದ್ ಮಾಡುವ ಆದೇಶವನ್ನು ವಾಪಸ್ ಪಡೆಯಬೇಕು.

ಅತಿ ಕಡಿಮೆ ದರದಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಅವರು ಜಾರಿಗೆ ತಂದಿದ್ದ ಜನೌಷಧಿ ಕೇಂದ್ರ ಗಳನ್ನು ಮುಚ್ಚುತ್ತಿರುವುದು ತುಂಬಾ ಖಂಡನೀಯವಾಗಿದೆ. ಬಡ ಜನರ ಬಗ್ಗೆ ಕಿಂಚಿತ್ತು ಕಾಳಜಿ ಕರುಣೆ ಇಲ್ಲದ ಸರ್ಕಾರ ಇದಾಗಿದೆ ಆರ್ಥಿಕ ಹೊರೆಯನ್ನು ಬಡವರ ಮೇಲೆ ಹೊರಿಸಿ ತಾನು ಮಜಾ ಮಾಡುತ್ತಿದೆ ಇದೆಲ್ಲದರ ಪರಿಣಾಮವನ್ನು ಮುಂದೆ ಜನ ಅವರಿಗೆ ತೋರಿಸುವರು ಎಂದು ಹೇಳಿದರು.

ಈ ಸಮಯದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಣ್ಣಪ್ಪ ಐರಣಿ, ಮುಖಂಡರಾದ ನಗರ ಘಟಕದ ಅಧ್ಯಕ್ಷ ಅಜಿತ್ ಸಾವಂತ್, ತಾಲೂಕು ಗ್ರಾಮಾಂತರ ಅಧ್ಯಕ್ಷ ಎಂ.ಪಿ.ಲಿಂಗರಾಜ್, ಪ್ರಧಾನ ಕಾರ್ಯದರ್ಶಿಗಳಾದ ಎಚ್.ಮಂಜಾನಾಯ್ಕ್, ತುಳಜಪ್ಪ ಭೂತೆ, ನಗರಸಭೆ ಸದಸ್ಯರಾದ ಆಟೋ ಹನುಮಂತಪ್ಪ, ಅಶ್ವಿನಿ ಕೃಷ್ಣ, ಎಸ್ಸಿ ಮೋರ್ಚಾ ಅಧ್ಯಕ್ಷ ಸಂತೋಷ ಗುಡಿಮನಿ, ಮುಖಂಡರಾದ ರಾಜು ರೋಖಡೆ, ಬಾತಿ ಚಂದ್ರಶೇಖರ್ ,ಮಹಾಂತೇಶ್ ಬಂಢಾರಿ, ರೂಪಾ ಕಾಟ್ವೆ, ಸಾಕ್ಷಿ ಸಿಂಧೆ, ಅಂಬುಜಾ ರಾಜೋಳಿ, ಅಂಬುಜಾ ಕಾಟ್ವೆ, ರಶ್ಮಿ, ಸುಧಾ, ನಲ್ಲಿ ಮಂಜುನಾಥ, ಶಾಂತರಾಜ ಕೆಂಚನಹಳ್ಳಿ, ಆಟೋ ರಾಜು, ಗೋಪಾಲಿ, ಶೇರಾಪೂರ ಅಜ್ಜಪ್ಪ, ಸಿದ್ದಪ್ಪ, ನವೀನ್ ಬೀರೇಶ್ ನಾಗೇನಹಳ್ಳಿ ಸೇರಿದಂತೆ ಬಿಜೆಪಿಯ ಹಲವಾರು ಮುಖಂಡರುಗಳು ಭಾಗಿಯಾಗಿದ್ದರು.




# ಅಂಕಸಮುದ್ರ ಕೆರೆ ರಾಮ್‌ಸಾರ್ ತಾಣ

ತುಂಗಭದ್ರಾ ಜಲಾಶಯದ ಹಿನ್ನೀರು ಪ್ರದೇಶದಿಂದ ಕೂಗಳತೆ ದೂರದಲ್ಲಿ ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಅಂಕಸಮುದ್ರ ಎಂಬ ಗ್ರಾಮವಿದೆ. ಇಲ್ಲಿ 244 ಎಕರೆ ವಿಸ್ತಾರವಾದ ಕೆರೆಯೂಇದೆ. ಕೆರೆಯಲ್ಲಿ ಹರಡಿರುವ ಕರಿಜಾಲಿ ಮರಗಳು ಅಪರೂಪದ, ದೇಶ□ವಿದೇಶದ ಸಹಸ್ರಾರು ಬಾನಾಡಿಗಳಿಗೆ ಆಶ್ರಯತಾಣವಾಗಿವೆ. ಹೀಗಾಗಿ ವಿಶಾಲವಾದ ಕೆರೆಯೊಂದು ಪಕ್ಷಿಧಾಮ ಎಂದು ಹೆಗ್ಗಳಿಕೆ ಪಡೆದಿದೆ. ಇದು ಕಲ್ಯಾಣ ಕರ್ನಾಟಕದ ಮೊದಲ ಪಕ್ಷಿಧಾಮ.

ಕೆರೆ ಮಧ್ಯದಲ್ಲಿ ನಿರ್ಮಿಸಿರುವ 50ಕ್ಕೂ ಹೆಚ್ಚು ಕೃತಕ ನಡುಗಡ್ಡೆಗಳಲ್ಲಿ ಎತ್ತರದ ಮತ್ತು ನೆಲಕ್ಕೊರಗಿದ ಗಿಡಮರಗಳಲ್ಲಿ ಪಕ್ಷಿಗಳು ಬೀಡುಬಿಟ್ಟಿವೆ. ಜೊತೆಗೆ ನೀರಿನಲ್ಲಿ ಹೇರಳವಾಗಿ ದೊರೆಯುವ ಆಹಾರ ಕೂಡ ಅವುಗಳಿಗೆ ವರದಾನವಾಗಿದೆ. ತುಂಗಭದ್ರಾ ಹಿನ್ನೀರಿನಿಂದ ಯಂತ್ರಗಳ ಸಹಾಯದಿಂದ ಕೆರೆಗೆ ನೀರು ಹರಿಸಿದ್ದು ಮತ್ತುಉತ್ತಮ ಮುಂಗಾರಿನಿಂದಾಗಿ ಕೆರೆ ಸಂಪೂರ್ಣ ಭರ್ತಿಯಾಗಿದ್ದು ಸೊಬಗು ಹೆಚ್ಚಾಗಿದೆ.

ವಿಜಯನಗರ–ಬಳ್ಳಾರಿ ಜಿಲ್ಲೆಯ ಪಕ್ಷಿ ತಜ್ಞರು, ಪಕ್ಷಿ ಪ್ರೇ ಮಿಗಳು, ಅಂಕಸಮುದ್ರದಯುವ ಬ್ರಿಗೇಡ್ ಸದಸ್ಯರು, ಹಗರಿಬೊಮ್ಮನಹಳ್ಳಿಯ ಗ್ರೀನ್ ಎಚ್ಬಿಎಚ್ ತಂಡದ ಸದಸ್ಯರ ಕಾಳಜಿ ಮತ್ತು ನಿರಂತರ ಶ್ರಮ, ರಾಜ್ಯ ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದ ಪರಿಣಾಮವಾಗಿ ಬಾನಾಡಿಗಳಿದ್ದ ಈ ಕೆರೆ ಪಕ್ಷಿಧಾಮವಾಗುವ ಮೂಲಕ ಪಕ್ಷಿಪ್ರೇಮಿಗಳು ಕಂಡಿದ್ದ ಕನಸು ನನಸಾಗಿದೆ. 2016ರ ಸೆಪ್ಟೆಂಬರ್‌ನಲ್ಲಿ ರಾಜ್ಯ ವನ್ಯಜೀವಿ ಸಲಹಾ ಮಂಡಳಿಯಲ್ಲಿ ಪಕ್ಷಿಧಾಮಕ್ಕಾಗಿ ಪಕ್ಷಿತಜ್ಞ ಸಮದ್ ಕೊಟ್ಟೂರು, ವಿಜಯ್ ಇಟ್ಟಿಗಿ ಮತ್ತು ತಂಡ ಸಲ್ಲಿಸಿದ್ದ ಪ್ರಸ್ತಾವನೆ ಅಂಗೀಕಾರಗೊಂಡಿತು. 2017ರ ಫೆಬ್ರುವರಿಯಲ್ಲಿ ಅಂಕಸಮುದ್ರ ಕೆರೆ ಪಕ್ಷಿಗಳ ಸಂರಕ್ಷಿತ ಪ್ರದೇಶವೆಂದು ಘೋಷಣೆ ಆಯಿತು. ಈ ಪ್ರದೇಶ ಅರಣ್ಯ ಇಲಾಖೆಯ ಸುಪರ್ದಿಗೆ ಸೇರಿತು. ಒಂದೊಂದೇ ಮೂಲಸೌಕರ್ಯಗಳು ಬರತೊಡಗಿದವು. ಒತ್ತುವರಿಯಾಗಿದ್ದ ಕೆರೆ ಪ್ರದೇಶವನ್ನು ತೆರವುಗೊಳಿಸಲಾಯಿತು. ವೀಕ್ಷಣಾ ಗೋಪುರ ನಿರ್ಮಾಣಗೊಂಡಿತು. ನಾಲ್ಕು ಜನ ಕಾವಲುಗಾರರ ನೇಮಕವೂ ಆಯಿತು. ಮೀನುಗಾರರ ಬಲೆಗಳು ಪಕ್ಷಿಗಳ ಪ್ರಾಣಕ್ಕೆ ಕಂಟಕವಾಗಿತ್ತು. ಇದನ್ನು ತಡೆಯುವುದಕ್ಕೂ ಸಾಧ್ಯವಾಯಿತು.

ಜೀವವೈ ವಿಧ್ಯದ ದೃಷ್ಟಿಯಿಂದ ತುಂಬಾ ಮಹತ್ವವಾದ ಕೆರೆ, ಸರೋ ವರ, ಜಲಾಶಯ, ಅಳಿವೆಗಳನ್ನು ಗುರುತಿಸಿ ಅವುಗಳಿಗೆ ರಾಮ್ಸಾರ್ ಜಾಗತಿಕ ಮನ್ನಣೆಯನ್ನು ನೀಡಲಾಗುತ್ತದೆ. ಈ ಗೌರವ ಮತ್ತು ಭದ್ರತೆಗೆ ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಅಂಕಸಮುದ್ರ ಪಕ್ಷಿ ಸಂರಕ್ಷಣಾ ಮೀಸಲು ಪ್ರದೇಶ ಕಳೆದ ವರ್ಷ ಪಾತ್ರವಾಗಿದೆ. ಇಲ್ಲಿರುವ 50 ಸಾವಿರಕ್ಕೂ ಹೆಚ್ಚು ಪಕ್ಷಿಗಳು ವಿಶೇಷವಾಗಿ ಅಲಾಸ್ಕ, ಸೈಬೀರಿಯಾ,ಯುರೋಪ್ ಸೇರಿದಂತೆ ದೇಶ□ವಿದೇಶಗಳಿಂದ ಆಹಾರ ಅರಸಿ ವಲಸೆ ಬಂದಿವೆ.



ಐಯುಸಿಎನ್ (ಇಂಟರ್ನ್ಯಾಷನಲ್ಯೂನಿಯನ್ ಫಾರ್ ಕನ್ಸರ್ವೇಶನ್ ಆಫ್ ನೇಚರ್)ನ ವರದಿಯಂತೆ ಅಳಿವಿನಂಚಿನಲ್ಲಿರುವ ದೇಶಿಯ ಹೆಜ್ಜಾರ್ಲೆ ಸಂತತಿ ಹೆಚ್ಚಿಸಿಕೊಂಡಿರುವುದು ಇಲ್ಲಿನ ವೈಶಿಷ್ಟ್ಯ . ಇಲ್ಲಿ ಹೇರಳವಾಗಿ ದೊರೆಯುವ ಮೀನು ಮತ್ತಿತರ ಜಲಚರಗಳನ್ನು ಪಕ್ಷಿಗಳು ಹಿಡಿಯುವ ಬಗೆ ಮತ್ತು ತುಂಗಭದ್ರಾ ಹಿನ್ನೀರು ಪ್ರದೇಶದಲ್ಲಿನ ಸಮೃದ್ಧ ಆಹಾರ ಅರಸಿ ಪಕ್ಷಿಗಳು ಗುಂಪುಗುಂಪಾಗಿ ಬೆಳಗಿನ ಜಾವ ತೆರಳುವ, ಸಂಜೆ ವೇಳೆ ಆಗಮಿಸುವ ದೃಶ್ಯವನ್ನು ನೋಡುವುದೇ ಚಂದ. ಅದೊಂದು ದೃಶ್ಯ ಕಾವ್ಯವೇ ಸರಿ.

2024 ಫೆಬ್ರುವರಿಯಲ್ಲಿ ಪಕ್ಷಿ ತಜ್ಞರು ನಡೆಸಿದ ಗಣತಿಯಲ್ಲಿ ಸ್ಥಳೀಯ ಮತ್ತು ದೇಶ–ವಿದೇ ಶಗಳ 168 ಪ್ರಭೇದಗಳ 48,825 ಪಕ್ಷಿಗಳು ಇದ್ದವು. ಈ ವರ್ಷ ಜನವರಿ 25 ರಂದು ನಡೆಸಿದ ಗಣತಿಯಲ್ಲಿ 132 ಪ್ರಭೇದಗಳ 50 ಸಾವಿರಕ್ಕೂ ಹೆಚ್ಚು ಬಾನಾಡಿಗಳು ಕಂಡುಬಂದಿವೆ. ನವೆಂಬರ್ ತಿಂಗಳಿನಿಂದ ಮಾರ್ಚ್‌ವರೆಗೂ ಜಲಪಕ್ಷಿಗಳ ಈ ಆವಾಸಸ್ಥಾನ ಸದಾ ಜೀವಂತಿಕೆಯಿಂದ ಕೂಡಿರುತ್ತದೆ. ಈ ಪ್ರದೇಶವನ್ನು ಸುಂದರಗೊಳಿಸಿ ಹೆಚ್ಚು ಪ್ರಭೇದಗಳ ಪಕ್ಷಿಗಳು ಇಲ್ಲಿಗೆ ಬರುವಂತೆಮಾಡಿದ್ದರ ಫಲವೇ 2024ರ ಜನವರಿ 31ರಂದು ರಾಮ್ಸಾರ್ ಎನ್ನುವ ಅಪರೂಪದ ಜೀವವೈ ವಿಧ್ಯಹೊಂದಿರುವ ಜಾಗತಿಕ ಮನ್ನಣೆ ಪಡೆದ ತಾಣವಾಯಿತು. ಇದೇ ವೇಳೆ ಗದಗ ಜಿಲ್ಲೆಯ ಮಾಗಡಿ ಕೆರೆ ಸಂರಕ್ಷಣಾ ಮೀಸಲು ಪ್ರದೇಶ, ಉತ್ತರ ಕನ್ನಡ ಜಿಲ್ಲೆಯ ಅಘನಾಶಿನಿ ನದೀಮುಖ ಸಹ ಈ ಮನ್ನಣೆ ಪಡೆದವು.

ಕರ್ನಾಟಕದ ಮೊದಲ ಸಂರಕ್ಷಿತ ಜೌಗು ಪ್ರದೇಶವಾದ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ರಂಗನತಿಟ್ಟು ಪಕ್ಷಿಧಾಮಕ್ಕೆ ರಾಮ್ಸರ್ ಟ್ಯಾಗ್ ದೊರೆತ ಎರಡು ವರ್ಷಗಳ ನಂತರ ಕರ್ನಾಟಕದ ಈ ತಾಣಗಳಿಗೆ ಮನ್ನಣೆ ಸಿಕ್ಕಿದೆ.

ಅಂಕಸಮುದ್ರ ಕೆರೆಯಲ್ಲಿ ಕೋಂಬ್ ಡಕ್ ಇಲ್ಲಿ ಪ್ರತಿವರ್ಷ ಚಳಿಗಾಲದಲ್ಲಿ ಬಾನಾಡಿಗಳ ಮಹಾಸಂಗಮವಾಗುತ್ತದೆ. ವಲಸೆ ಬರುವ ಬಾರ್ನ್ ಸ್ವಾಲೋ (ಕವಲು ತೋ ಕೆ), ರೋಸಿ ಸ್ಟಾರ್ಲಿಂಗ್ (ಗುಲಾಬಿ ಕಬ್ಬಕ್ಕಿ), ಓಸ್ಪ್ರೆ (ಮೀನು ಡೇಗೆ), ವಿಸ್ಕರ್ಡ್ ಟರ್ನ್ (ಮೀಸೆ ರೀವ), ಗ್ರೀನಿಷ್ ವಾರ್ಬಲರ್ (ಹಸಿರು ಎಲೆ ಉಲಿಯಕ್ಕಿ), ಗ್ರೇವಾಗ್ಟೆಲ್ (ಬೂದು ಸಿಪಿಲೆ),ಮಾರ್ಷ್ ಹ್ಯಾರಿಯರ್ (ಜಾಗು ಸೆಳೆವ), ಚೆಸ್ನೆಟ್ ಟೇಲ್ಡ್ ಸ್ಟಾರ್ಲಿಂ ಗ್, ಕಾಮನ್ ಸ್ಯಾಂಡ್ಪೈಪರ್ (ಗದ್ದೆಗೊರವ), ಬ್ರೌನ್ ಶ್ರೈಕ್ (ಕಂದು ಕಳಿಂಗ), ಕಾಮನ್ ಸ್ಟೋ ನ್ಚಾಟ್ (ಕಲ್ಲು ಚಟಕ), ವುಡ್ ಸ್ಯಾಂಡ್ಪೈಪರ್ (ಚುಕ್ಕೆ ಗದ್ದೆಗೊರವ), ಬ್ಲಾಕ್ ಹೆಡೆಡ್ ಬಂಟಿಂಗ್ (ಕಪ್ಪು ತಲೆಯ ದೊಡ್ಡ ಗುಬ್ಬಚ್ಚಿ), ಸ್ಪೋಟೆಡ್ ರೆಡ್ಶ್ಯಾಂಕ್,ಯುರೆಸಿಯನ್ ವಿಜಿಯನ್, ನಾರತನ್ ಪಿನ್ಟೆಲ್, ರೂಡಿ ಶೆಲ್ಡಕ್, ಗಾರ್ಗನಿ (ಬಿಳಿ ಹುಬ್ಬಿನ ಬಾತು), ನಾರ್ಥರ್ನ್ ಶೋವಲರ್ (ಚಲುಕ ಬಾತು), ಕಾಮನ್ ಟೆಲ್□ಹೀಗೆ ಬಾನಾಡಿಗಳ ಪ್ರಭೇದಗಳ ಸಂಖ್ಯೆ ಬೆಳೆಯುತ್ತಲೇ ಹೋಗುತ್ತದೆ. ಸಂತಾನೋತ್ಪತ್ತಿ ನಡೆಸುವುದಕ್ಕಾಗಿ ಬರುವ 80ಕ್ಕೂ ಹೆಚ್ಚು ಪ್ರಭೇದಗಳಲ್ಲಿ ಮುಖ್ಯವಾಗಿ ಪೇಂಟೆಂಡ್ ಸ್ಟಾರ್ಕ್ (ಬಣ್ಣದ ಕೊಕ್ಕರೆ) ಸ್ಪಾಟ್ ಬಿಲ್ಡ್ ಪೆಲಿಕಾನ್ (ಹೆಜ್ಜಾರ್ಲೆ), ಕೋಂಬ್‌ಡಕ್ (ಬಾಚಣಿಗೆ ಬಾತುಕೋ ಳಿ), ಇಂ ಡಿಯನ್ ಕಾರ್ಮೊರೆಂಟ್ ( ಉದ್ದಕೊಕ್ಕಿನ ಕಾಗೆ), ಡಾರ್ಟರ್ (ಹಾವಕ್ಕಿ), ಲೆಸರ್ ವಿಸಿಲಿಂಗ್ ಡಕ್ (ಚಿಕ್ಕ ಸಿಳ್ಳೆಬಾತು), ಲಿಟಲ್ ಕಾರ್ಮೊರೆಂಟ್ (ಸಣ್ಣ ನೀರು ಕಾಗೆ), ಲಾರ್ಜ್ ಕಾರ್ಮೊರೆಂಟ್ (ದೊಡ್ಡ ನೀರುಕಾಗೆ), ಗ್ಲೋಸಿ ಐಬೀಸ್ (ಮಿಂಚು ಕೆಂಬರಲು), ಕಾಮನ್ ಟೇಲರ್ ಬರ್ಡ್ (ಸಿಂಪಿಗೆ), ರೆಡ್ ವೆಂಟೆಡ್ ಬುಲ್ಬುಲ್ (ಕೆಂಪು ಚಿಬ್ಬೊಟ್ಟೆಯ ಪಿಕಳಾರ), ಲಾರ್ಜ್ ಗ್ರೇಬಾಬ್ಲರ್, ಕಾಪರ್ಸ್ಮಿತ್ ಬರ್ಬೆಟ್ ಸೇರಿದಂತೆ ಇಲ್ಲಿನ ಪ್ರದೇಶವನ್ನು ಹೆರಿಗೆ ಮನೆಯನ್ನಾಗಿಸಿಕೊಂಡಿವೆ.

ನೀ ರುನಾಯಿಗಳು ಚಿನ್ನಾಟ...

ಪಕ್ಷಿಪ್ರಿಯರನ್ನು ಆಕರ್ಷಿಸುವ ಈ ಪ್ರದೇಶದಲ್ಲಿ ನೀರುನಾಯಿಗಳ ತುಂಟಾಟ ನೋಡಲು ಬಲು ಚೆಂದ. ತುಂಗಭದ್ರಾ ಹಿನ್ನೀರು ಮತ್ತು ಕೆರೆಯ ಪ್ರದೇಶದ ನಡುವೆ ಕೇವಲ 500 ಮೀ ಟರ್ ಅಂತರವಿದೆ. ಅಲ್ಲಿಂದ ಬಂದಿರುವ ನೀರುನಾಯಿಗಳು ಕಳೆದ ವರ್ಷ ಆರು ಇದ್ದವು. ಈ ವರ್ಷವೂ ಇಲ್ಲಿಯೇ ಇವೆ. ಪಕ್ಷಿಧಾಮದಲ್ಲಿ ದೊರೆಯುವ ಕ್ಯಾಟ್ ಫಿಷ್ (ಮುರುಗೋ ಡ) ಇವುಗಳಿಗೆ ಭರ್ಜರಿ ಭೋಜನ ಒದಗಿಸುತ್ತಿವೆ. ಬಾನಾಡಿಗಳ ಜೀವವೈ ವಿಧ್ಯಕ್ಕೆ ಕಂಟಕವಾಗಿರುವ ಕ್ಯಾಟ್ಫಿಷ್ಗಳಿಗೆ, ಅವುಗಳ ಉಪಟಳಕ್ಕೆ ಬ್ರೇಕ್ ಹಾಕಲು ಪ್ರಕೃತಿಯೇ ನೀರುನಾಯಿಗಳನ್ನು ಸ್ವಾಗತಿಸಿದಂತಿದೆ.







# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ, ಶುದ್ಧತೆಗೆ ಆದ್ಯತೆ ಇರಲಿ

**ಯಾವದ್ ಭೂಮಂಡಲಂ ಧತ್ತೆ ಸಶೈಲ ವನಕಾನನಂ।**
**ತಾವತ್ ತಿಷ್ಠತಿ ಮೇದಿನ್ಯಾಂ ಸಂತತಿಪುತ್ರ ಪೌತ್ರಕೀ॥**



ಸಂಸ್ಕೃತದಲ್ಲಿರುವ ಈ ಶ್ಲೋಕದ ಅರ್ಥ "ಈ ಭೂಮಂಡಲದಲ್ಲಿ ಕಾಡುಮೇಡುಗಳು ಇರುವವರೆಗೆ ಮಾನವ ಸಂತತಿ, ಪ್ರಾಣಿ, ಪಶುಪಕ್ಷಿಗಳು ಇರುತ್ತವೆ". ಎಂಬುದಾಗಿದೆ. ಪರಿಸರದ ಗಿಡಮರಗಳು, ಸಸ್ಯಗಳನಾಶ ನಮ್ಮ ನಾಶ. ಅನೇಕ ನಾಗರಿಕತೆಗಳು, ನಮ್ಮ ಸಿಂಧೂ ಬಯಲಿನ ನಾಗರಿಕತೆ ಕೂಡ ಸಸ್ಯನಾಶದಿಂದ ಉಂಟಾಗಿದೆ ಎಂಬುದಾಗಿ ವಿಜ್ಞಾನಿಗಳು, ವಿಜ್ಞಾನ ಹೇಳುತ್ತದೆ. ಹೀಗಾಗಿ ಹಸಿರಿಲ್ಲವಾದಾಗ ಉಸಿರಿಲ್ಲ. ಆಗ ಬದುಕೂ ಇಲ್ಲ. ಸಂಸ್ಕೃತಿಯೂ ಇಲ್ಲ. ನಾಗರಿಕತೆಯೂ ಇಲ್ಲ. ನಮ್ಮ ಉತ್ತಮ ಆರೋಗ್ಯಕ್ಕೆ ನಿರ್ಮಲ ಅಥವಾ ಪರಿಶುದ್ಧ ಪರಿಸರ, ಶುದ್ಧಗಾಳಿ, ಶುದ್ಧನೀರು, ಬೆಳಕು ಅತ್ಯವಶ್ಯಕ. ಇದನ್ನು ಅರಿತು ನಾವು ವಾಸಿಸುತ್ತಿರುವ ಮನೆ, ಕಲಿಯುವ ಶಾಲಾ-ಕಾಲೇಜು, ವಿಶ್ವವಿದ್ಯಾಲಯ, ಕೆಲಸ ಮಾಡುವ ಕಛೇರಿ, ಆಸ್ಪತ್ರೆ, ಬ್ಯಾಂಕ್ ಮೊದಲಾದವುಗಳ ಪರಿಸರವನ್ನು ನಾವಿಂದು ಎಷ್ಟು ಸ್ವಚ್ಛವಾಗಿಟ್ಟುಕೊಂಡಿದ್ದೇವೆ? ನಮ್ಮಲ್ಲಿ ಎಷ್ಟು ಪ್ರಮಾಣದ ಸ್ವಚ್ಛತಾ ಕಾಳಜಿ ಇದೆ? ಎಂಬುದು ನಮ್ಮ ಆತ್ಮಾವಲೋಕನದ ಸಂಗತಿಯಾಗಿದೆ.

**ವಿಶ್ವಪರಿಸರ ದಿನಾಚರಣೆ:**

ವಿಶ್ವಪರಿಸರ ದಿನವನ್ನು ಜೂನ್ 5ರಂದು ಆಚರಿಸಲಾಗುತ್ತಿದೆ. ಸಮುದ್ರದ ಮಾಲಿನ್ಯ, ಅಧಿಕ ಜನಸಂಖ್ಯೆ, ಜಾಗತಿಕ ತಾಪಮಾನ ಏರಿಕೆ, ಸುಸ್ಥಿರ ಅಭಿವೃದ್ಧಿ, ವನ್ಯಜೀವಿ ಅಪರಾಧಗಳಂತಹ ಪರಿಸರ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗತಿಕ ವೇದಿಕೆಯಾಗಿದ್ದು. 143 ದೇಶಗಳು ಈ ದಿನಾಚರಣೆಯಲ್ಲಿ ಭಾಗವಹಿಸುತ್ತವೆ. ವಿಶ್ವಪರಿಸರ ದಿನವನ್ನು ವಿಶ್ವಸಂಸ್ಥೆಯ ಮಾನವ ಪರಿಸರದ ಸ್ಟಾಕ್ ಹೋಮ್ ಸಮ್ಮೇಳನದಲ್ಲಿ 1972 ಜೂನ್ 5ರಂದು ಸ್ಥಾಪಿಸಿತು. ಮೊದಲಬಾರಿಗೆ ಜೂನ್ 5-1973 ರಂದು 51 ವರ್ಷಗಳ ಹಿಂದೆ ಮೊದಲ ಬಾರಿಗೆ ಭಾರತದಲ್ಲಿ ಆಚರಿಸಲಾಯಿತು. ವಿಶ್ವಪರಿಸರ ದಿನದ ಥೀಮ್ ಪ್ರತಿವರ್ಷ ಬದಲಾಗುತ್ತಾ ಬಂದಿದೆ. 2023ರ ಥೀಮ್ ಪ್ಲಾಸ್ಟಿಕ್ ಮಾಲಿನ್ಯಕ್ಕೆ ಪರಿಹಾರವಾದರೆ. 2024 'ನಮ್ಮ ಭೂಮಿ' ಎಂಬ ಘೋಷಣೆಯಾಗಿದೆ.

**ಪರಿಸರ ಪ್ರಜ್ಞೆ ಇದ್ದಲ್ಲಿ ಸುಂದರ ಪರಿಸರ:**

ಪರಿಸರ ಪ್ರಜ್ಞೆ, ಆರೋಗ್ಯಕರ ಪರಿಸರ ನಿರ್ಮಾಣ ಎಲ್ಲರ ಆಶಯವಾಗಬೇಕು. ನಮ್ಮ ಭೌಗೋಳಿಕ ಪರಿಸರವು ಸುಂದರ ಪರಿಸರ ಎಂಬ ಹೆಗ್ಗಳಿಕೆ ಪಡೆದಿರುವಂತೆ ನಮ್ಮ ಪೂರ್ವಜರು ಸೂಕ್ತ ಆಲೋಚನೆವುಳ್ಳವರಾಗಿ ಸಸ್ಯ ಸಂಪತ್ತಿಗೆ ಮಹತ್ವ ನೀಡಿದ್ದರು. ಗರಿಕೆಯಿಂದ ಬೃಹತ್ ಮರದವರೆಗೆ ಎಲ್ಲವೂ ಉಪಯುಕ್ತವೆನಿಸಿದ್ದವು. ಗಿಡಮರಗಳಿಗೆ ಗೌರವ, ಪೂಜ್ಯ ಭಾವನೆ ಇತ್ತು. ಸಸ್ಯಗಳಲ್ಲಿಯ ಔಷಧೀಯಗುಣ ಅರಿತಿದ್ದರು. ಶಮಿ, ಶ್ರೀಗಂಧ, ಬನ್ನಿ, ಆಲ, ಅರಳಿ, ಬಿಲ್ವ, ತುಳಸಿ, ಬೇವು, ತೆಂಗು, ಬಾಳೆ, ಗರಿಕೆ, ತುಂಬೆ ಮೊದಲಾದವುಗಳು ಶ್ರೇಷ್ಠವಾಗಿದ್ದವು. ಮಾನವ ಬದುಕಿನಲ್ಲಿ ಸಸ್ಯಸಂಕುಲ ಹಾಸುಹೊಕ್ಕಾಗಿ ಸೇರಿದೆ. ಆದರೆ ಇಂದು ನಮ್ಮ ಭೌಗೋಳಿಕ ಪರಿಸರವನ್ನು ವಿರೂಪಗೊಳಿಸಲಾಗಿದೆ.

ಜಾಗತಿಕ ಸಮಸ್ಯೆಯಾಗಿರುವ ಪರಿಸರ ಮಾಲಿನ್ಯ:

ಪರಿಸರ ಮಾಲಿನ್ಯವು ಕೇವಲ ಭಾರತ ದೇಶಕ್ಕೆ ಮಾತ್ರ ಸಮಸ್ಯೆಯಾಗಿರದೆ ಇಡೀ ವಿಶ್ವವನ್ನೇ ಬಹಳವಾಗಿ ಕಾಡುತ್ತಿರುವ ಪ್ರಮುಖ ಸಮಸ್ಯೆಯಾಗಿದೆ. ಇದೊಂದು ಜಾಗತಿಕ ಸಮಸ್ಯೆಯಾಗಿದೆ. ನಮ್ಮ ಸುತ್ತ ಮುತ್ತಲಿನ ಪರಿಸರವು ಶುದ್ಧವಾಗಿರದೆ ಮಲಿನತೆಯನ್ನು ಹೊಂದಿರುವುದಾದರೆ ಅದು 'ಪರಿಸರ ಮಾಲಿನ್ಯ' ಎನಿಸಿಕೊಳ್ಳುತ್ತದೆ. ಮಾಲಿನ್ಯ ಎಂದರೆ ಮಲಿನತೆ, ಕಲ್ಮಶ, ಕೊಳೆ, ದೋಷ ಎಂಬುದಾಗಿದೆ. ಸಾಮಾನ್ಯವಾಗಿ ಜೀವಿಯ ಮೇಲೆ ಹಾನಿಕಾರಕ ಪರಿಣಾಮ ಬೀರುವ ಇಲ್ಲವೇ ಯಾವುದೇ ಜೀವಿಯ ಆರೋಗ್ಯಕ್ಕೆ ಸಂಭವನೀಯ ಅಪಾಯ ತರುವ ಪರಿಸರದ ನೆಲ, ಜಲ, ಶಬ್ದ, ವಾಯು ಮೊದಲಾದವುಗಳೆಲ್ಲಾಗುವ ಯಾವುದೇ ಬಗೆಯ ಭೌತಿಕ, ರಾಸಾಯನಿಕ, ಇಲ್ಲವೇ ಜೈವಿಕ ಗುಣಗಳಲ್ಲಿನ ಅಹಿತಕರ ಬದಲಾವಣೆಗಳಿಗೆ ಪರಿಸರ ಮಾಲಿನ್ಯ ಎನ್ನುತ್ತೇವೆ. ವಿಶ್ವ ಆರೋಗ್ಯ ಸಂಸ್ಥೆ ತಿಳಿಸುವಂತೆ "ಜೀವ ಮಂಡಲದ ಯಾವುದೇ ಘಟಕದಲ್ಲಿ ಪ್ರತ್ಯಕ್ಷ ಇಲ್ಲವೇ ಪರೋಕ್ಷ ಬದಲಾವಣೆಯಾಗಿ ಅಲ್ಲಿನ ಜೀವಿಗಳಿಗೆ ವಿಶೇಷವಾಗಿ ಮಾನವ ಜನಾಂಗಕ್ಕೆ ಹಾನಿ ಉಂಟುಮಾಡುವ ಅಹಿತಕರ ಪರಿಸ್ಥಿತಿಯನ್ನು ಪರಿಸರ ಮಾಲಿನ್ಯ ಎನ್ನಲಾಗಿದೆ.

**ಪರಿಸರದ ಪರಿಸ್ಥಿತಿ ಅಶುದ್ಧತೆಯೇ ಆಗಿದೆ:**

ಪ್ರಸ್ತುತ ಸನ್ನಿವೇಶದಲ್ಲಿ ಶುದ್ಧ ಪರಿಸರದ ಮಹತ್ವದ ಅರಿವು ನಮಗೆ ಅಗತ್ಯವಾಗಿದೆ. ಇಂದು ಪರಿಸರದ ಪರಿಸ್ಥಿತಿ ಬಿಗಡಾಯಿಸುತ್ತಿದೆ. ಬಗೆ ಬಗೆಯ ರೋಗ-ರುಜಿನಗಳನ್ನು ಹರಡಬಲ್ಲ ವಿವಿಧ ಬಗೆಯ ವಿಷಾಯುಕ್ತ ರಾಸಾಯನಿಕಗಳು ಅಧಿಕಗೊಳ್ಳುತ್ತಿವೆ. ಕುಡಿಯುವ ಶುದ್ಧ ನೀರು, ಗಾಳಿ, ಆಹಾರ ದುರ್ಲಭವಾಗುತ್ತಿದೆ. ಭೂಮಿಯು ಕಾವೇರುತ್ತಿದೆ. ಹವಾಮಾನದಲ್ಲಿ ಅನಿರೀಕ್ಷಿತ ಸ್ಥಿತ್ಯಂತರಗಳಾಗುತ್ತಿವೆ. ಬಿಸಿಲಿನ ತಾಪಮಾನ ಹೆಚ್ಚುತ್ತಿದೆ. ಇದರ ಜೊತೆಗೆ ಅರಣ್ಯನಾಶ, ವಾಹನ ಉಗುಳುವ ಹೊಗೆ, ಕಾರ್ಖಾನೆಗಳು ಹೊರಹಾಕುವ ತ್ಯಾಜ್ಯಗಳು ಜೀವಸಂಕುಲದ ನೆಮ್ಮದಿಯ ಬದುಕಿಗೆ ಕುತ್ತುತಂದಿವೆ. ಕಲುಷಿತ ಕುಡಿಯುವ ನೀರು, ಚರ್ಮರೋಗ, ಅಲರ್ಜಿ, ಕರಳುಬೇನೆ, ಶ್ವಾಸಕೋಶದ ತೊಂದರೆ, ಯಕೃತ್ ರೋಗ, ಕೈಕಾಲು ಊತಕ್ಕೂ ಕಾರಣವಾಗಿದೆ. ಹೀಗಾಗಿ ಹಲವು ಬಗೆಯ ಕಾಯಿಲೆಗಳು, ರೋಗರುಜಿನಗಳು ನಮ್ಮನ್ನು ಕಾಡುತ್ತಿವೆ ಇದಕ್ಕೆ ಕಾರಣ ಪರಿಸರದ ಅಶುದ್ಧತೆಯೇ ಆಗಿದೆ.

**ಪರಿಸರ ಸಂರಕ್ಷಣೆ ಮತ್ತು ಚಳುವಳಿಗಳು:**

ಪ್ರಸ್ತುತ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ ಸುಲಭಸಾಧ್ಯವಾದ ಕಾರ್ಯವಲ್ಲ. ಅದಕ್ಕೆ ಸೂಕ್ತ ಪರಿಸರ ಶಿಕ್ಷಣ, ಜಾಗೃತಿ, ನಿರಂತರ ಕಟ್ಟೆಚ್ಚರ ಹಾಗೂ ನಮ್ಮ ಬದ್ಧತೆ ಅಗತ್ಯವಾಗಿದೆ. ಅಮೇರಿಕಾ ಸಂಯುಕ್ತ ಸಂಸ್ಥಾನದ ರಾಷ್ಟ್ರೀಯ ಭೌಗೋಳಿಕ ಸಮಾಜ, ಮಲೇಶಿಯಾದ ಭೂ ಗೆಳೆಯರು, ಯುರೋಪಿನ ಗ್ರೀನ್‌ಪೀಸ್ ಸಂಘಟನೆ, ಕ್ಲಬ್ ಆಫ್ ರೋಮ್ ಮೊದಲಾದ ಸಂಘ-ಸಂಸ್ಥೆಗಳು ಪರಿಸರ ಸಂರಕ್ಷಣೆಗಾಗಿ ದುಡಿಯುತ್ತಿವೆ. ಜನರಲ್ಲಿ ಪರಿಸರ ಕುರಿತು ಜಾಗೃತಿ ಮೂಡಿಸುತ್ತಿವೆ. ನಮ್ಮ ದೇಶದಲ್ಲಿ ಪರಿಸರ ಸಂರಕ್ಷಣೆಗಾಗಿ ಅಪಾರವಾಗಿ ದುಡಿಯುತ್ತಿರುವ ಸಂಘ-ಸಂಸ್ಥೆಗಳೆಂದರೆ ದೆಹಲಿಯಲ್ಲಿರುವ ವಿಜ್ಞಾನ ಮತ್ತು ಪರಿಸರ ಕೇಂದ್ರ, ಮುಂಬಯಲ್ಲಿರುವ ಪ್ರಕೃತಿ ವಿಜ್ಞಾನ ಸಮಾಜ, ಕೇರಳದ ಕೇರಳಶಾಸ್ತ್ರ ಸಾಹಿತ್ಯ ಪರಿಷತ್ತು, ಉತ್ತರ ಪ್ರದೇಶದ ಚಿಪ್ಕೊ ಚಳುವಳಿ, ನಮ್ಮ ಕರ್ನಾಟಕದ ಅಪ್ಪಿಕೊಚಳುವಳಿ, ಮುಂತಾದವುಗಳಿವೆ.


ಹಸಿರು ಬಳಗಗಳಿಂದ ಪರಿಸರ ರಕ್ಷಣೆ:

ಆಧುನಿಕತೆ, ಕೈಗಾರಿಕೀರಣ, ನಗರೀಕರಣ ಮತ್ತು ಜನಸಂಖ್ಯೆ ಬೆಳೆದಂತೆ ಪರಿಸರ ಸಂರಕ್ಷಣೆ ಒಂದು ಬೃಹತ್ ಸಮಸ್ಯೆಯಾಗಿದೆ. ನಾಗರಿಕತೆಯ ಹೆಸರಿನಲ್ಲಿ ಅವಶ್ಯಕತೆಗಿಂತ ಹೆಚ್ಚು ಪ್ರಕೃತಿದತ್ತ, ನಿಸರ್ಗಜನ್ಯ ಸಂಪನ್ಮೂಲಗಳ ಬಳಕೆ ಹೆಚ್ಚುತ್ತಿದೆ. ಮುಂದಿನ ಪೀಳಿಗೆಗೆ ನಿಸರ್ಗದ ಒಡಲು ಬರಿದಾಗ ಬಹುದಾದ ಸಾಧ್ಯತೆ ಇದೆ. ಹೀಗಾಗಿ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಬೇಕು. ಶಾಸನಗಳ ಮೂಲಕ ಪರಿಸರ ಸಂರಕ್ಷಣೆ ಸಾಧ್ಯವೆ? ಜನತೆ ತಮ್ಮ ಅತಿ ಬಳಕೆಗೆ ಕಡಿವಾಣ ಅವಶ್ಯ. ಅಮೇರಿಕಾ ಮತ್ತು ಐರೋಪ್ಯ ರಾಷ್ಟ್ರಗಳಲ್ಲಿ 'ಹಸಿರುಬಳಗ', 'ಹಸಿರುಸಂಕುಲ' ಅಥವಾ ಗ್ರೀನ್ ಕಮ್ಯೂನ್ ಎಂಬ ಹೆಸರಿನಲ್ಲಿ ಪರಿಸರವಾದಿಗಳು ಸಂಘಟಿತರಾಗಿ ಕಾರ್ಯೋನ್ಮುಖರಾಗಿದ್ದಾರೆ. ಈ ಚಿಂತನೆಯತ್ತ ಪರಿಸರ ಮಾಲಿನ್ಯ ಸಮಸ್ಯೆ ಎದುರಿಸುತ್ತಿರುವ ಭಾರತವೂ ಗಮನಹರಿಸುವುದು ಸೂಕ್ತವಾಗಿದೆ. ಔದ್ಯೋಗಿಕರಣದ ನಂತರ ಬಂಡವಾಳ ಶಾಹಿಗಳು ಹುಟ್ಟುಹಾಕಿರುವ ಪ್ರವೃತ್ತಿಗಳನ್ನು ವಿರೋಧಿಸುತ್ತಾ ಸ್ವಾವಲಂಬನೆಯನ್ನು ಪ್ರತಿಪಾದಿಸುವುದು, ಎಲ್ಲಾ ಕ್ಷೇತ್ರಗಳಲ್ಲೂ ಸಹಕಾರ, ಸ್ವಾವಲಂಬನೆ, ಅನ್ಯೋನ್ಯ ಮಾನವೀಯ ಸಂಬಂಧಗಳು, ಪ್ರಜಾಸತ್ತಾತ್ಮಕ ನಿರ್ಧಾರಗಳು, ಹಸಿರು ಬಳಗಗಳ ಪ್ರಮುಖ ರೂಪುರೇಷೆಗಳು. ಈ ಬಳಗದ ಜೀವನಸೂತ್ರ ಸರಳತೆ, ನೈಸರ್ಗಿಕ ಆಹಾರ ಸೇವನೆ, ಹಸಿತಿಂಡಿ, ತಿನಿಸುಗಳ 40 ಬಗೆಯ ವಿಶೇಷ ಮೆನು ಇವರಲ್ಲಿದೆ. ಗಿಡಬಳ್ಳಿಗಳನ್ನು ಬೆಳೆಸುವುದು. ನೀರು ಶುದ್ಧೀಕರಿಸುವ ಮಣ್ಣಿನ ತಪ್ಪಲೆಗಳ ಬಳಕೆ, ಪೆಟ್ರೋಲ್, ಡೀಸೆಲ್, ಗ್ಯಾಸ್, ವಿದ್ಯುಚ್ಛಕ್ತಿ, ಇಂಧನಗಳಿಗೆ ಬದಲಾಗಿ ಸೌರಶಕ್ತಿ, ಜೈವಿಕ ವಸ್ತುಗಳ ಉಪಯೋಗ, ಆರೋಗ್ಯ ಸಂರಕ್ಷಣೆಗೆ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಯೋಗ, ಧ್ಯಾನ ಮುಂತಾದವುಗಳಿಗೆ ಆದ್ಯತೆ. ಅನಿವಾರ್ಯಸಂದರ್ಭಗಳಲ್ಲಿ ಮಾತ್ರ ಅಲೋಪತಿ ಔಷಧಿ ಮತ್ತು ಚಿಕಿತ್ಸೆಗಳಿಗೆ ಮೊರೆ ಹೋಗುತ್ತಿದ್ದಾರೆ. ಸಸ್ಯಹಾರಿಗಳ ಕ್ಲಬ್, ಹಸಿತಿಂಡಿ ತಿನಿಸುಗಳ ಕ್ಲಬ್‌ಗಳು ಹೆಚ್ಚು ಪ್ರಚಲಿತವಾಗಿವೆ. ಹಸಿರು ಬಳಗಗಳು ಬಹುತೇಕ ನೈಸರ್ಗಿಕ ಆಹಾರ ಸೇವನೆಯನ್ನು ಪ್ರತಿಪಾದಿಸುತ್ತದೆ. ಸೌರಬಸ್ಸುಗಳು, ವಾಹನಗಳು, ಕಾರುಗಳ ಬಳಕೆ ಹೆಚ್ಚಾಗುತ್ತಿದೆ. ಉಡುಗೆ-ತೊಡುಗೆಗಳು ನೈಸರ್ಗಿಕವಾಗಿ ಉತ್ಪಾದಿಸಲ್ಪಟ್ಟವುಗಳಿಗೆ ಒತ್ತು ನೀಡಲಾಗುತ್ತಿದೆ.

**ಪರಿಸರ ಶಿಕ್ಷಣ ಮತ್ತು ಉದ್ಯೋಗ ಅವಕಾಶ:**

ಕೈಗಾರಿಕೀಕರಣ ಮತ್ತು ಪರಿಸರ ಈ ಎರಡನ್ನು ಪ್ರಸ್ತುತ ಸರಿದೂಗಿಸಿಕೊಂಡು ಹೋಗುವುದು ದೊಡ್ಡ ಸವಾಲಾಗಿದ್ದು, ಈ ಸವಾಲನ್ನು ಎದುರಿಸಲು ಪರಿಸರ ತಜ್ಞರ ಸಹಾಯ, ಸಹಕಾರ, ನೆರವು, ಮಾರ್ಗದರ್ಶನ ಅತ್ಯಗತ್ಯ. ಪರಿಸರ ಶಿಕ್ಷಣ ಇಂದು ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಶಿಕ್ಷಣದ ಮೂಲಕ ಪರಿಸರ ಸಂರಕ್ಷಣೆ ಮಾಡಬಹುದು ಎಂಬುದು ಕೊಠಾರಿ ಶಿಕ್ಷಣ ಆಯೋಗದ ಆಶಯ. ನಮ್ಮ ದೇಶದ ಶಾಲಾ-ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ಪರಿಸರ ಶಿಕ್ಷಣ ನೀಡಲಾಗುತ್ತಿದೆ. 1986ರ ರಾಷ್ಟ್ರೀಯ ಶಿಕ್ಷಣ ನೀತಿ ಪಠ್ಯದಲ್ಲಿ ಪರಿಸರ ಶಿಕ್ಷಣಕ್ಕೆ ಆದ್ಯತೆನೀಡಿ ಅಧ್ಯಾಪಕರಿಗೆ ತರಬೇತಿ ನೀಡಲಾಯಿತು. ಪರಿಸರ ವಿಜ್ಞಾನದಲ್ಲಿ ಬಿ.ಎಸ್.ಸಿ, ಎಂ.ಎಸ್.ಸಿ., ಪಿಎಚ್.ಡಿ ಮಾಡಬಹುದಾಗಿದೆ. ಹಾಗೆಯೇ ಫಾರೆಸ್ಟ್ ಮ್ಯಾನೇಜಮೆಂಟ್‌ನಲ್ಲಿ ಎಂ.ಬಿ.ಎ., ಐ.ಎಫ್.ಎಸ್. ಪರೀಕ್ಷೆ, ಪರಿಸರ ಇಂಜನೀಯರಿಂಗ್ ಕೋರ್ಸಗಳಿವೆ. ಪರಿಸರಕ್ಕೆ ಸಂಬಂಧಿಸಿದ ಸಂಶೋಧನೆ ಮಾಡಲು ವಿಪುಲ ಅವಕಾಶಗಳಿವೆ. ಪರಿಸರ ಕಾನೂನು ಕುರಿತು ಡಿಪ್ಲೋಮಾಗಳಿವೆ. ಪರಿಸರಕ್ಕೆ ಕಾಳಜಿ ವಹಿಸುವವರಿಗೆ, ಪರಿಸರ ತಜ್ಞರಿಗೆ ಹೆಚ್ಚಿನ ಬೇಡಿಕೆಗಳಿವೆ. ಸರ್ಕಾರಗಳು ಹಾಗೂ ಕಂಪನಿಗಳು ಪರಿಸರ ಸಂರಕ್ಷಣೆ ಯೋಜನೆಗಳಿಗೆ ಸಾಕಷ್ಟು ಬಂಡವಾಳ ಹೂಡುತ್ತಿವೆ. 'ನಡೆ ಹಸಿರಿಗೆ (ಗೋಗ್ರೀನ್)' ಹೆಚ್ಚು ಜನಪ್ರಿಯವಾಗಿರುವ ಘೋಷಣೆ. ಪರಿಸರ ವಿಜ್ಞಾನ, ಪರಿಸರ ಇಂಜನೀಯರಿಂಗ್, ಪರಿಸರ ಅರ್ಥಶಾಸ್ತ್ರಜ್ಞರಿಗೆ ಉದ್ಯೋಗಾವಕಾಶಗಳು ವಿಪುಲವಾಗಿವೆ. ಒಟ್ಟಾರೆ ಪರಿಸರ ಶಿಕ್ಷಣದಿಂದ ಪರಿಸರ ಸಂರಕ್ಷಣೆ ಸಾಧ್ಯವೆನ್ನಬಹುದು.

ವಾಯು ಜೀವನಾಧಾರವಾದ ವಸ್ತು. ಅದು ಶುದ್ಧವಾಗಿದ್ದರೆ, ಸಾಕಷ್ಟು ಆಮ್ಲಜನಕದಿಂದ ಕೂಡಿರುತ್ತದೆ. ವಾಯು ಮಾಲಿನ್ಯವಾದರೆ ಶಾರೀರಕ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ವಾಯು ಮಾಲಿನ್ಯ ಹೃದಯ ಹಾಗೂ ಶ್ವಾಸಕೋಶದ ಮೇಲೆ ಕೆಟ್ಟಪರಿಣಾಮ ಬೀರಿ, ಶ್ವಾಸಕೋಶದ ಕ್ಯಾನ್ಸರ್ ಬರುತ್ತದೆ. ವಾಹನಗಳು, ಕಾರ್ಖಾನೆಗಳು, ದುರ್ವಾಸನೆ ವಾಯು ಮಾಲಿನ್ಯಕ್ಕೆ ಪೂರಕವಾಗಿವೆ. ನೀರು ಸಮಸ್ತ ಜೀವಿಗಳ ಮೂಲ ಜೀವಾಳ. ಜೀವಿಗಳ ಬದುಕು, ವಿಕಾಸಕ್ಕಾಗಿ ನೀರು ಅಗತ್ಯ. ಭೂಮಿಯ ಮೇಲೆ ಮುಕ್ಕಾಲು ಭಾಗನೀರಿದ್ದರೂ ಅವು ಕುಡಿಯಲು ಯೋಗ್ಯವಲ್ಲ. ಭೂಮಿಯ ಮೇಲೆ ಲಭ್ಯವಿರುವ ಸಿಹಿ ನೀರು ಅತ್ಯಲ್ಪ ಇಂದು ಶುದ್ಧ ನೀರಿನ ಕೊರತೆ. ದುಸ್ತರವಾಗಿ ಜಲವು ಮಾಲಿನ್ಯ ಉಂಟಾಗುತ್ತಿದೆ. ನದಿಗಳು ಮಲಿನವಾಗಿವೆ. ನೀರಿನ ಅಶುದ್ಧತೆಯು ಹಲವು ರೋಗಗಳಿಗೆ ಕಾರಣವಾಗಿದೆ. ಹಾಗೆಯೇ ಶಬ್ಧ ಮಾಲಿನ್ಯವು ಮೋಟಾರು, ಕಾರು, ಕಾರ್ಖಾನೆಗಳು, ಸೈರನ್ನಗಳು, ಪಟಾಕಿಗಳು, ಸಿಡಿಮದ್ದುಗಳು ಡೈನಮಂಟ್‌ಗಳು, ಬಾಂಬ್‌ಗಳು, ಧ್ವನಿವರ್ಧಕಗಳು ಇವುಗಳಿಂದಾಗಿ ಜನರಲ್ಲಿ ಶಬ್ದದ ತೀವ್ರತೆಯಿಂದ ಕಿವುಡುತನ, ನಿದ್ರಾಭಂಗ, ರಕ್ತದೊತ್ತಡ, ಹೃದಯರೋಗ, ಮುಂತಾದ ರೋಗಗಳಿಗೆ ಕಾರಣವಾಗಿದೆ. ಅಣುವಿಕಿರಣ ಮಾಲಿನ್ಯವು ಅನೇಕ ಸಾವು-ನೋವುಗಳಿಗೆ, ಅಂಗವಿಕಲತೆಗೆ, ಆರೋಗ್ಯ ಸಮಸ್ಯೆಗೆ ಎಡೆಮಾಡಿಕೊಟ್ಟರೆ. ನಗರ ಮಾಲಿನ್ಯವು ಕೊಳಚೆ ಪ್ರದೇಶಗಳಿಂದ ದುರ್ಬಲ ಒಳಚರಂಡಿ ವ್ಯವಸ್ಥೆಗಳು. ಕಾರ್ಖಾನೆಗಳು, ಜನಸಾಂದ್ರತೆಯಿಂದ ಜನತೆಯಲ್ಲಿ ಅನೇಕ ಬಗೆಯ ರೋಗ-ರುಜಿಗಳಿಗೆ ಕಾರಣವಾಗುತ್ತಿದೆ. ಹೀಗಾಗಿ ಶುದ್ಧ ಪರಿಸರವೇ ನಮ್ಮ ರಕ್ಷಣೆ ನಮ್ಮ ಉತ್ತಮ ಬದುಕು. ಮಲಿನತೆಯೇ ನಮ್ಮಗಳ ವಿನಾಶ ಎಂಬ ಮಾತು ಗೊತ್ತಿರಲಿ.



ಡಾ. ಗಂಗಾಧರಯ್ಯ ಹಿರೇಮಠ
ವಿಶ್ರಾಂತ ಪ್ರಾಧ್ಯಾಪಕರು, ದಾವಣಗೆರೆ.
ಮೊ: 9880093613

### ಪರಿಸರ ಮಾಲಿನ್ಯಕ್ಕೆ ಕಾರಣವಾದ ಅಂಶಗಳು:



*ಅರಣ್ಯಗಳ ನಾಶ *ರಸಾಯನಿಕ ಪದಾರ್ಥಗಳ ಬಳಕೆ *ವಿಪರೀತ ವಾಹನಗಳ ಓಡಾಟ *ಕೈಗಾರಿಕೀಕರಣ *ನಗರೀಕರಣ *ಜನಸಂಖ್ಯಾ ಹೆಚ್ಚಳ *ಪರಿಸರ ಪ್ರಜ್ಞೆಯ ಅಭಾವ *ಆಡಳಿತ ನಿರ್ವಹಣೆಯ ಕೊರತೆ *ಅಣುವಿಕಿರಣ ಸ್ಥಾವರಗಳು * ಆರ್ಥಿಕ ಅಸಮಾನತೆಗಳು.

ಪರಿಸರ ಮಾಲಿನ್ಯದ ದುಷ್ಪರಿಣಾಮಗಳು:

*ಮಾನವ ಸಂಪತ್ತಿನ ಅಪಾರ ನಷ್ಟ *ಪಶು, ಪ್ರಾಣಿ, ಪಕ್ಷಿಗಳಿಗೆ ಗಂಡಾಂತರ *ಕೃಷಿ ಅಭಿವೃದ್ಧಿ ಕುಂಠಿತ *ಜಲಸಂಪತ್ತಿನ ನಾಶ *ವಿಚಿತ್ರ ರೋಗ ರುಜಿನಗಳು *ಜನರ ನೆಮ್ಮದಿಗೆ ಭಂಗ *ಸಂಸ್ಕೃತಿಯ ನಾಶ *ಪ್ರಗತಿಪರ ಕಾರ್ಯಗಳಿಗೆ ಕಡಿವಾಣ *ಸಾಮಾಜಿಕ ವೈಷಮ್ಯ.

ಪರಿಸರ ಮಾಲಿನ್ಯದ ವಿವಿಧ ಬಗೆಗಳು:

*ವಾಯು ಮಾಲಿನ್ಯ *ಜಲ ಮಾಲಿನ್ಯ *ನೆಲ ಮಾಲಿನ್ಯ *ಶಬ್ದ ಮಾಲಿನ್ಯ *ಅಣುವಿಕಿರಣ ಮಾಲಿನ್ಯ *ನಗರ ಮಾಲಿನ್ಯ.

## ಸಂಗೀತ ಮೊಬೈಲ್ಸ್ ಸೇವಾ ನ್ಯೂನತೆ: ಪರಿಹಾರ ನೀಡಲು ಆಯೋಗ ಆದೇಶ

**ಶಿವಮೊಗ್ಗ :** ಶಿವಮೊಗ್ಗ ಜಿಲ್ಲೆ ಶಿಕಾರಿಪುರ ತಾಲೂಕು ಐಸೂರು ವಾಸಿ ಸಂದೇಶ್ ಕುಮಾರ್ ಎಂಬುವವರು ಮ್ಯಾನೇಜರ್, ಸಂಗೀತ ಮೊಬೈಲ್ಸ್ ಪ್ರೈ. ಲಿ., ಶಿವಮೊಗ್ಗ ಮತ್ತು ಮ್ಯಾನೇಜರ್, ಸಂಗೀತ ಮೊಬೈಲ್ಸ್ ಪ್ರೈ. ಲಿ., ಬೆಂಗಳೂರು ಇವರ ವಿರುದ್ಧ ಮೊಬೈಲ್ ಇನ್ಸೂರನ್ಸ್ ಸಂಬಂಧ ಸೇವಾ ನ್ಯೂನತೆ ಕುರಿತು ವಕೀಲರ ಮೂಲಕ ಸಲ್ಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗವೂ ದೂರುದಾರಿಗೆ ಸೂಕ್ತ ಪರಿಹಾರ ನೀಡುವಂತೆ ತೀರ್ಪು ನೀಡಿದೆ.

ದೂರುದಾರರು ಎದುರುದಾರರಿಂದ ಅಕ್ಟೋಬರ್ 2022ರಲ್ಲಿ ರೂ. 84,000/- ಬೆಲೆಯ ಮೊಬೈಲ್ ಫೋನ್ ಖರೀದಿಸಿದ್ದು, ರೂ. 7,999/- ಮೊತ್ತದ ಇನ್ಸೂರನ್ಸ್ ಕಾರ್ಡ್ ಪಡೆದಿರುತ್ತಾರೆ. ಸೆಪ್ಟಂಬರ್ 2023ರಲ್ಲಿ ಈ ಮೊಬೈಲ್ ಫೋನ್‌ನಲ್ಲಿ ಸಮಸ್ಯೆ ಕಂಡುಬಂದಿದ್ದು, ಶಿವಮೊಗ್ಗದ ಸಂಗೀತ ಮೊಬೈಲ್ಸ್‌ನಲ್ಲಿ ಸಮಸ್ಯೆ ಬಗ್ಗೆ ತಿಳಿಸಿ, ಇನ್ಸೂರನ್ಸ್ ಕಾರ್ಡ್ ಸಲ್ಲಿಸಿ, ಬೇರೆ ಫೋನ್ ಕೊಡುವಂತೆ ಕೇಳಿದಾಗ ಹೆಚ್ಚುವರಿಯಾಗಿ ರೂ. 52,000/-ಗಳನ್ನು ಪಾವತಿಸಿದರೆ ಹೊಸ ಮೊಬೈಲ್ ನೀಡುವುದಾಗಿ ತಿಳಿಸಿರುತ್ತಾರೆ. ಈ ಕುರಿತು ಎದುರುದಾರರ ವಿರುದ್ಧ ಸೇವಾ ನ್ಯೂನತೆ ಎಸಗಿರುವುದಾಗಿ ತಿಳಿಸಿ ಆಯೋಗಕ್ಕೆ ದೂರನ್ನು ಸಲ್ಲಿಸಿರುತ್ತಾರೆ. ದೂರನ್ನು ದಾಖಲಿಸಿಕೊಂಡು ಎದುರುದಾರರಿಗೆ ನೋಟಿಸ್ ಕಳುಹಿಸಿದ್ದು, ತಮ್ಮ ವಕೀಲರ ಮೂಲಕ ಹಾಜರಾಗಿ ದೂರಿಗೆ ತಕರಾರು ಸಲ್ಲಿಸಿ, ತಮ್ಮಿಂದ ಯಾವುದೇ ಸೇವಾ ನ್ಯೂನತೆಯಾಗಿರುವುದಿಲ್ಲವೆಂದು ತಿಳಿದು ಅರ್ಜಿಯನ್ನು ವಜಾ ಮಾಡಬೇಕೆಂದು ಕೋರಿರುತ್ತಾರೆ.

ದೂರುದಾರರು ಮತ್ತು ಎದುರುದಾರರು ಸಲ್ಲಿಸಿರುವ ಪ್ರಮಾಣ ಪತ್ರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿ ಉಭಯ ಪಕ್ಷಗಾರರ ವಾದ-ವಿವಾದಗಳನ್ನು ಆಲಿಸಿ, ಎದುರುದಾರರು ಇನ್ಸೂರನ್ಸ್ ಕಾರ್ಡ್ ನೀಡಿದ್ದು, ಮೊಬೈಲ್ ರಿಪೇರಿಗೆ ಬಂದಾಗ ಇನ್ಸೂರೆನ್ಸ್ ಕಾರ್ಡ್ ಷರತ್ತಿನಂತೆ ಹೊಸ ಮೊಬೈಲ್ ಫೋನ್‌ನ್ನಾಗಲಿ ಅಥವಾ ರಿಪೇರಿ ಮಾಡಿಕೊಟ್ಟಿಲ್ಲವಾದ್ದರಿಂದ ಎದುರುದಾರರು ಸೇವಾ ನ್ಯೂನತೆ ಎಸಗಿರುವುದಾಗಿ ಪರಿಗಣಿಸಿ, ಎದುರುದಾರರು ದೂರುದಾರರಿಂದ ಹಳೆಯ ಮೊಬೈಲ್ ಫೋನ್ ಪಡೆದು ಹೊಸ ಮೊಬೈಲ್ ಫೋನ್‌ನ್ನು ಈ ಆದೇಶವಾದ ದಿನಾಂಕದಿಂದ 45 ದಿನಗಳೊಳಗಾಗಿ ಕೊಡುವುದು. ಅಥವಾ ಹೊಸ ಮೊಬೈಲ್ ಬದಲಿಗೆ ಬೆಲೆಯಲ್ಲಿ ಜಿ.ಎಸ್.ಟಿ. ಕಡಿತಗೊಳಿಸಿ ರೂ. 71,185/-ಗಳನ್ನು ನೀಡಲು ಮತ್ತು ಈ ಮೊತ್ತಕ್ಕೆ ಶೇ.9ರ ಬಡ್ಡಿಯೊಂದಿಗೆ ದಿ;13/10/2023 ರಿಂದ ಅನ್ವಯವಾಗುವಂತೆ ಪೂರಾ ಹಣವನ್ನು ಪಾವತಿಸುವವರೆಗೂ ನೀಡಬೇಕೆಂದು ತಪ್ಪಿದ್ದಲ್ಲಿ ಶೆ. 12%ರಂತೆ ಬಡ್ಡಿಯನ್ನು ಪೂರ ಹಣ ನೀಡುವವರೆಗೂ ಪಾವತಿಸತಕ್ಕದ್ದು. ಹಾಗೂ ಇಪ್ಪತ್ತು ಸಾವಿರಗಳನ್ನು ಮಾನಸಿಕ ಹಿಂಸೆಗಾಗಿ ಮತ್ತು ವ್ಯಾಜ್ಯದ ಖರ್ಚು-ವೆಚ್ಚದ ಬಾಬ್ತಾಗಿ ಎದುರುದಾರರು ದೂರುದಾರರಿಗೆ ನೀಡಲು ಶಿವಮೊಗ್ಗ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಟಿ.ಶಿವಣ್ಣ ಮತ್ತು ಸದಸ್ಯರಾದ ಬಿ.ಡಿ.ಯೋಗಾನಂದ ಭಾಂಡ್ಯ ಇವರನ್ನೊಳಗೊಂಡ ಪೀಠ ಮೇ 17 ರಂದು ಆದೇಶಿಸಿದೆ.

## ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ಸೌಲಭ್ಯ

**ಚಿಕ್ಕಮಗಳೂರು:** ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಹಲವು ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಸೇವಾ ಸಿಂಧು ತಂತ್ರಾಂಶದ ಮೂಲಕ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ (ಹೊಸದು), ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದಲ್ಲಿ ಸ್ವಯಂ ಉದ್ಯೋಗ ಸಾಲ ಯೋಜನೆ ಹಾಗೂ ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮದಡಿ ಹಿಂದುಳಿದ ವರ್ಗಗಳ ಪ್ರವರ್ಗ-2ಎ ಸವಿತಾ ಸಮಾಜ ಸಮುದಾಯಕ್ಕೆ ಸೇರಿದ ಅರ್ಹರು ಸೇವಾ ಸಿಂಧು ಪೋರ್ಟಲ್ ಆನ್‌ಲೈನ್ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜೂನ್ 30ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ನಿಗಮದ ವೆಬ್‌ಸೈಟ್ <http://www.dbcdc.karnataka.gov.in> ನಲ್ಲಿ ಅಥವಾ ನಿಗಮದ ತಮ್ಮ ಕಚೇರಿ(08262-295815) ಯನ್ನು ಸಂಪರ್ಕಿಸಬಹುದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಳಸದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ

**ಚಿಕ್ಕಮಗಳೂರು:** ಕಳಸ ತಾಲ್ಲೂಕಿನ ಲೋಕಾಯುಕ್ತ ಜನಸಂಪರ್ಕ ಸಭೆಯು ಜೂನ್ 11 ರಂದು ಬೆಳಿಗ್ಗೆ 11 ಗಂಟೆಗೆ ಕಳಸ ಪಟ್ಟಣದ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳಿಯ ಸಭಾಂಗಣದಲ್ಲಿ ನಿಗದಿಯಾಗಿದ್ದು, ಲೋಕಾಯುಕ್ತ ಪೊಲೀಸ್ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ಈ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ

## ಜಿಎಂ ವಿವಿಯಲ್ಲಿ ಸಾವಿರ ಜಾಬ್ ಆಫರ್ಸ್ ಸ್ವೀಕರಿಸಿದ ವಿದ್ಯಾರ್ಥಿಗಳು



**ದಾವಣಗೆರೆ:** ನಗರ ಜಿಎಂ ವಿಶ್ವವಿದ್ಯಾಲಯ ಮತ್ತು ಜಿ.ಎಂ. ತಾಂತ್ರಿಕ ಮಹಾವಿದ್ಯಾಲಯದ ಅಂತಿಮ ವರ್ಷದ ವಿದ್ಯಾರ್ಥಿಗಳು ವಿವಿಧ ಕಂಪನಿಗಳಿಗೆ ಆಯ್ಕೆಯಾಗಿದ್ದು, ಪ್ರಸಕ್ತ ವರ್ಷದ ಸಾಲಿನಲ್ಲಿ ಒಟ್ಟು ಒಂದು ಸಾವಿರ ಜಾಬ್ ಆಫರ್ಸ್ ಸ್ವೀಕರಿಸಲಾಗಿದೆ ಎಂದು ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಟಿ.ಆರ್. ತೇಜಸ್ವಿ ಕಟ್ಟಿಮನಿ ತಿಳಿಸಿದ್ದಾರೆ.

ಇಷ್ಟು ಹೆಚ್ಚಿನ ಜಾಬ್ ಆಫರ್ಸ್ ಸ್ವೀಕರಿಸಿರುವ ಜಿಎಂ ವಿವಿ, ಮಧ್ಯ ಕರ್ನಾಟಕ ಭಾಗದಲ್ಲಿಯೇ ಅತಿ ಹೆಚ್ಚು ವಿದ್ಯಾರ್ಥಿಗಳು ಸಂದರ್ಶನ ಪ್ರಕ್ರಿಯೆಯಲ್ಲಿ ಭಾಗವಹಿಸಿ ವಿವಿಧ ಕಂಪನಿಗಳಿಗೆ ಆಯ್ಕೆಯಾಗಿ ಸಂಸ್ಥೆಗೆ ಕೀರ್ತಿಯನ್ನು ತಂದಿರುತ್ತಾರೆ ಎಂದು ಇದೆ ವೇಳೆ ತಿಳಿಸಿದರು.

ವಿವಿಧ ಪ್ರತಿಷ್ಠಿತ ಕಂಪನಿಗಳಾದ ಎಲ್‌ಕೆ ಸಾಫ್ಟ್‌ವೇರ್ ಸರ್ವಿಸಸ್, ಐಬಿಎಂ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಇನ್ಫೋಸಿಸ್, ಸಾಸ್ಕಿನ್ ಕಮ್ಯೂನಿಕೇಶನ್, ಅನೋರ, ಕಾಗ್ನಿಜೆಂಟ್, ಆಕ್ಸಲೆಂಟ್, ಆರ್ ಬಿ ಸ್ಟ್ರಕ್ಚರ್ಸ್ ಪ್ರೈವೇಟ್ ಲಿಮಿಟೆಡ್, ಐಒಎಂಟ್ ಸಿಸ್ಟಮ್ಸ್ ಪ್ರೈವೇಟ್ ಲಿಮಿಟೆಡ್, ಕಲ್ಪತರು ಪ್ರಾಜೆಕ್ಟ್, ಬಲ್ಡೋಟ ಸ್ಟೀಲ್ ಅಂಡ್ ಪವರ್ ಲಿಮಿಟೆಡ್, ಅಪೆಕ್ಸ್ ಆಟೋ ಪ್ರೈವೇಟ್ ಲಿಮಿಟೆಡ್, ಆಪ್ಟಂ, ಫೇಸ್ ಡಿಜಿಟಕ್, ಎಚ್ ಡಿ ಎಫ್ ಸಿ, ಡಿ ಮಾರ್ಟ್, ಏರ್ಟೆಲ್, ಇಂಡೋ ಎಂ ಐ ಎಂ, ಕೇನ್ಸ್ ಟೆಕ್ನಾಲಜಿ, ಸ್ನೈಡರ್ ಎಲೆಕ್ಟ್ರಿಕ್ ಮುಂತಾದ ಕಂಪನಿಗಳು ಸಂದರ್ಶನ ಪ್ರಕ್ರಿಯೆ ನಡೆಸಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡಿದ್ದಾರೆ. 28 ವಿದ್ಯಾರ್ಥಿಗಳು ಟಿಸಿಎಸ್ ಕಂಪನಿಯ ಅಂತಿಮ ಸಂದರ್ಶನ ಪ್ರಕ್ರಿಯೆಯನ್ನು ಮುಗಿಸಿ ಫಲಿತಾಂಶಕ್ಕಾಗಿ ಕಾಯುತ್ತಿದ್ದಾರೆ. ಇನ್ನು ಹಲವಾರು ಕಂಪನಿಗಳಿದ್ದು, ಜೂನ್ ತಿಂಗಳ ಕೊನೆಯವರೆಗೂ ಕಂಪನಿ ಸಂದರ್ಶನ ಪ್ರಕ್ರಿಯೆಗಳನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಆಯ್ಕೆಯಾಗಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಜಿಎಂ ವಿಶ್ವವಿದ್ಯಾಲಯದ ಕುಲಾಧಿಪತಿಗಳು ಶ್ರೀ ಜಿಎಂ ಲಿಂಗರಾಜು, ಆಡಳಿತ ಅಧಿಕಾರಿ ಶ್ರೀ ವೈ ಯು ಸುಭಾಷ್ ಚಂದ್ರ, ಜಿ ಎಂ ಯು ಕುಲಪತಿಗಳಾದ ಡಾ ಎಸ್ ಆರ್ ಶಂಕಪಾಲ್, ಸಹಕುಲಪತಿಗಳಾದ ಡಾ ಎಚ್ ಡಿ ಮಹೇಶಪ್ಪ, ರಿಜಿಸ್ಟ್ರಾರ್ ಡಾ ಬಿ ಎಸ್ ಸುನಿಲ್ ಕುಮಾರ್, ಜಿಎಂಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ ಸಂಜಯ್ ಪಾಂಡೆ ಎಂಬಿ, ವಿಭಾಗಗಳ ಮುಖ್ಯಸ್ಥರುಗಳು ಮತ್ತು ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## ಪರಿಸರ ದಿನಾಚರಣೆ ಕಾರ್ಯಕ್ರಮ

**ಬಳ್ಳಾರಿ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ 'ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು' ಎಂಬ ಘೋಷವಾಕ್ಯದೊಂದಿಗೆ ಜೂ.05 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವಿಶ್ವ ಪರಿಸರ ದಿನಾಚರಣೆ

ಕಾರ್ಯಕ್ರಮ ಆಯೋಜಿಸಲಾಗಿದೆ.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಕಾರ್ಯಕ್ರಮ ಉದ್ಘಾಟಿಸುವರು.ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್, ಬಾಬು ಸೇರಿದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

**ಗದಗ-ಬೆಟಗೇರಿ ವ್ಯಾಪಾರ,ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣ ಸಮಾರಂಭ**

## ಅಭಿವೃದ್ಧಿಗೆ ಪೂರಕವಾದ ಯೋಜನೆ : ಸಚಿವ ರಹೀಂ ಖಾನ




**ಗದಗ:** ಗದಗ-ಬೆಟಗೇರಿ ವ್ಯಾಪಾರ,ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣವು ಒಂದು ಅದ್ಭುತ ಕಾರ್ಯಕ್ರಮವಾಗಿದೆ. ಈ ಯೋಜನೆಯು ಅಭಿವೃದ್ಧಿಗೆ ಪೂರಕವಾದಂತಹ ಯೋಜನೆಯಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ ಅವರು ನುಡಿದರು.

ನಗರದ ಪಂಡಿತ ಡಾ.ಭೀಮಸೇನ ಜೋಶಿ ರಂಗಮಂದಿರದಲ್ಲಿ ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ, ಜಿಲ್ಲಾಡಳಿತ ಗದಗ, ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ವತಿಯಿಂದ ಮಂಗಳವಾರ (ಜೂ.3) ಜರುಗಿದ ಗದಗ-ಬೆಟಗೇರಿ ವ್ಯಾಪಾರ,ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇದೊಂದು ಐತಿಹಾಸಿಕ ಯೋಜನೆಯಾಗಿದೆ. ಈ ಯೋಜನೆ ಪೂರ್ಣಗೊಂಡ ನಂತರ ಇಡೀ ಗದಗ-ಬೆಟಗೇರಿ ನಗರದ ಚಿತ್ರಣವೇ ಬದಲಾಗಲಿದೆ. ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರ ಈ ಪರಿಕಲ್ಪನೆಯು ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ಈ ಯೋಜನೆಗೆ ಬೇಕಾಗುವಂತಹ ಅಗತಗಯದ ಅನುದಾನ ಇದಗಿಸುವದರ ಜೊತೆಗೆ ಎಲ್ಲರೀತಿಯ ಸಹಕಾರ ನೀಡಲಾಗುವದು ಎಂದ ಅವರು ಎಚ್.ಕೆ.ಪಾಟೀಲ ಅವರ ದೂರದೃಷ್ಟಿಯಿಂದಾಗಿ ಗದಗ ಇಂದು ಎಲ್ಲ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಹೊಂದುತ್ತಿದೆ ಎಂದು ಸಚಿವರಾದ ರಹೀಂ ಖಾನ ಅವರು ಹೇಳಿದರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರು ಮಾತನಾಡಿ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣಗೊಳ್ಳುವಂತಹ 34 ಎಕರೆ 32 ಗುಂಟೆ ಭೂಮಿ ಹೋರಾಟದ ಭೂಮಿಯಾಗಿದೆ. ಇಂತಹ ಸಾರ್ವಜನಿಕರ ಭೂಮಿಯನ್ನು ಉಳಿಸಿದ ಪ್ರಾಮಾಣಿಕ ಅಧಿಕಾರಿ, ಸಾರ್ವಜನಿಕರನ್ನು ಅಭಿನಂದಿಸಿದರು.

ಈ ಯೋಜನೆಯ 19,33,000 ಚ.ಸೆ.ಮಿ. ಕಟ್ಟಡ ಕಾಮಗಾರಿ ಪ್ರದೇಶವಾಗಿರುತ್ತದೆ. ಇಲ್ಲಿ ಉತ್ತಮ ಗುಣಮಟ್ಟದ ಕಟ್ಟಡ ಕಾಮಗಾರಿಗೆ 500 ಕೋಟಿ. ರೂ ಅನುದಾನದನ ಅಗತ್ಯವಿರುತ್ತದೆ. ಈ ಯೋಜನೆ ಶೀಘ್ರದಲ್ಲಿಯೇ ಪ್ರಾರಂಭಿಸಿ ಮೂರು ವರ್ಷದೊಳಗಾಗಿ ಪೂರ್ಣಗೊಳಿಸಲು ಪ್ರಯತ್ನಿಸಲಾಗುವದು. ಈ ಯೋಜನೆಯ ಯಶಸ್ವಿಗಾಗಿ ಎಲ್ಲರ ಸಹಕಾರ ಅಗತ್ಯವಾಗಿದ್ದು ಸ್ಥಳೀಯರು ಇದರ ಹೆಚ್ಚಿನ ಸದುಪಯೋಗ ಪಡೆದುಕೊಳ್ಳುವಂತೆ ಸಚಿವ ಎಚ್.ಕೆ. ಪಾಟೀಲ ಅವರು ಕರೇ ನೀಡಿದರು.

ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್.ಪಾಟೀಲ ಅವರು ಮಾತನಾಡಿ ಗದಗ-ಬೆಟಗೇರಿ ನಗರದ ಮಧ್ಯಭಾಗದಲ್ಲಿ ಹೊಸ ವಿಚಾರಗಳು ಹೊಸ ಕಟ್ಟಡಗಳು ನಿರ್ಮಾಣವಾಗಬೇಕು ಎನ್ನುವದು ಎಲ್ಲರ ಕನಸಾಗಿತ್ತು. ಆ ಕನಸು ನನಸಾಗುವ ಕಾಲ ಕೂಡಿ ಬಂದಿದ್ದು ಗದಗ ಜನ ಇದರ ಸದುಪಯೋಗ ಪಡೆದುಕೊಳ್ಳಬೇಕು. ವ್ಯಾಪಾರಸ್ಥರು ಬೇರೆ ನಗರಗಳಲ್ಲಿ ಹೂಡಿಕೆ ಮಾಡುವದಕ್ಕೂ ಮುಂಚೆ ಜಿಲ್ಲೆಯಲ್ಲಿ ಹೂಡಿಕೆ ಮಾಡುವಂತೆ ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ್ ಬಬರ್ಚಿ, ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ.ಅಸೂಟಿ, ಗದಗ ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ನಗರಸಭೆ ಸದಸ್ಯರುಗಳು, ಮಾಜಿ ಶಾಸಕ ಡಿ.ಆರ್.ಪಾಟೀಲ, ರಾಮಣ್ಣ ಲಮಾಣಿ, ಮಾಜಿ ಸಂಸದರಾದ ಐ.ಜಿ.ಸನದಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾ ಪಂಚಾಯತ ಸಿ.ಇ.ಓ ಭರತ. ಎಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಸ್ವಾಗತಿಸಿದರು. ವೆಂಕಟೇಶ ಅಲ್ಕೋಡ ಹಾಗೂ ತಂಡದವರು ನಾಡಗೀತೆ ಪ್ರಸ್ತುತಿಸಿದರು.

# ಸಕಾಲದಲ್ಲಿ ಜನನ-ಮರಣ ಮಾಹಿತಿ ನೋಂದಣಿಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ



**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಜನನ-ಮರಣಗಳ ವಿವರಗಳನ್ನು ನಿಗದಿತ ಸಮಯದೊಳಗೆ ನೋಂದಣಿಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್.ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಕೆಸ್ವಾನ್‌ನಲ್ಲಿ ನಿನ್ನೆ ಜನನ-ಮರಣಗಳ ನಾಗರಿಕ ನೋಂದಣಿಯ ತ್ರೈಮಾಸಿಕ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಹಾಗೂ ಜಿಲ್ಲಾ ಮಟ್ಟದ ಕೃಷಿ ಅಂಕಿ-ಅಂಶಗಳ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಜನ್ಮ ತಂತ್ರಾಂಶದಲ್ಲಿ ಯಾವುದೇ ಜನನ ಮತ್ತು ಮರಣ ಘಟನೆ ನಡೆದ 21 ದಿನಗಳ ಒಳಗಾಗಿ ಕಡ್ಡಾಯವಾಗಿ ಸಂಬಂಧಿಸಿದ ನೋಂದಣಾಧಿಕಾರಿಗಳು ನೋಂದಣಿಯನ್ನು ಮಾಡಬೇಕು. ನೋಂದಣಿ ಮಾಡದೆ ಸಾರ್ವಜನಿಕರಿಗೆ ತೊಂದರೆಯಾದಲ್ಲಿ ಸಂಬಂಧಿಸಿದ ನೋಂದಣಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಆರ್.ಶಿವಕುಮಾರ್ ಸಭೆಗೆ ಮಾಹಿತಿ ನೀಡಿ, ಜನನ-ಮರಣ ಸಂಭವಿಸಿದ 21 ದಿನಗಳ ನಂತರ 30 ದಿನಗಳ ಅವಧಿಯೊಳಗಿನ ಘಟನೆಯ ತಡ ನೋಂದಣಿಗೆ ಶುಲ್ಕ ರೂ. 20 ಸಂದಾಯದ ನಂತರ ನೋಂದಣಿ ಮಾಡಬೇಕು. ಒಂದು ತಿಂಗಳ ನಂತರ ಒಂದು ವರ್ಷದ ಘಟನೆಗಳನ್ನು ಸಂಬಂಧಿಸಿದ ಗ್ರಾಮ ಆಡಳಿತಾಧಿಕಾರಿ ಮತ್ತು ರಾಜಸ್ವ ನಿರೀಕ್ಷಕರ ಮಹಜರು ವರದಿಯೊಂದಿಗೆ ತಹಸೀಲ್ದಾರರ ಆದೇಶದ ಮೂಲಕ ಗ್ರಾಮ ಆಡಳಿತಾಧಿಕಾರಿಗಳಿಗೆ ನೋಂದಣಿಗೆ ಅವಕಾಶ ನೀಡಲಾಗಿದೆ. ಒಂದು ವರ್ಷದ ನಂತರದ ಯಾವುದೇ ಜನನ-ಮರಣ ಘಟನೆಗಳು ಹಾಗೂ ಹೆಸರು ಸೇರ್ಪಡೆಯನ್ನು ಜೆಎಂಎಫ್‌ಸಿ ನ್ಯಾಯಾಲಯಕ್ಕೆ ನೀಡಿ ನೋಂದಣಿ ಮಾಡಿಕೊಳ್ಳಬೇಕು ಎಂದರು.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಡಿ ಮುಂಗಾರು, ಹಿಂಗಾರು ಹಾಗೂ ಬೇಸಿಗೆ ಹಂಗಾಮಿನ ಬೆಳೆ ಕಟಾವು ಪ್ರಯೋಗಗಳನ್ನು ನಿಯಮಾನುಸಾರ ಕೈಗೊಳ್ಳಲು ಹಾಗೂ ಯಾವುದೇ ಪ್ರಯೋಗಗಳು ನಷ್ಟವಾಗದಂತೆ ನೋಡಿಕೊಳ್ಳಬೇಕು. ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅನುಷ್ಠಾನಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾ ಇಲಾಖೆ ಹೊರ ತಂದಿರುವ 2023-24ನೇ ಸಾಲಿನ ಜಿಲ್ಲಾ ಅಂಕಿ-ಅಂಶಗಳ ನೋಟ ಮತ್ತು ಸಾಮಾಜಿಕ ಮತ್ತು ಆರ್ಥಿಕ ಅವಲೋಕನ ಪುಸ್ತಕವನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದರು. ಸಭೆಯಲ್ಲಿ ಚಿಕ್ಕಮಗಳೂರು ಉಪವಿಭಾಗಾಧಿಕಾರಿ ದೇವರಾಜ್, ಚಿಕ್ಕಮಗಳೂರು ತಾಲ್ಲೂಕು ತಹಸೀಲ್ದಾರ್ ರೇಷ್ಮಾಶೆಟ್ಟಿ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಬಿ.ಕೆ.ವಿಜಯಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅಶ್ವತ್ಥಬಾಬು, ಡಿವೈಎಸ್‌ಪಿ ಶೈಲೇಂದ್ರ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು.

## ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಗೆ ಪಾವತಿ ಕಡ್ಡಾಯ

**ಚಿಕ್ಕಮಗಳೂರು, ಜೂ.4:** ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965ರ ವ್ಯಾಪ್ತಿಯಲ್ಲಿ ಬರುವ ಕಾರ್ಖಾನೆ ಕಾಯ್ದೆ-1948ರಡಿ ನೋಂದಣಿಯಾಗಿರುವ ಎಲ್ಲ ನೋಂದಾಯಿತ ಕಾರ್ಖಾನೆಗಳು, ಪ್ಲಾಂಟೇಷನ್‌ಗಳು, ಕಾರ್ಯಾಗಾರಗಳು, ವಿದ್ಯುತ್ತನ್ನು ಉಪಯೋಗಿಸಿ 10ಕ್ಕಿಂತ ಹೆಚ್ಚು ಕಾರ್ಮಿಕರಿರುವ ಹಾಗೂ ವಿದ್ಯುತ್ ಉಪಯೋಗಿಸದೇ 20ಕ್ಕಿಂತ ಹೆಚ್ಚು ಕಾರ್ಮಿಕರು ಕೆಲಸ ನಿರ್ವಹಿಸುವ ಎಲ್ಲ ಕಾರ್ಖಾನೆಗಳು, ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆ ಕಾಯ್ದೆ 1961 ಹಾಗೂ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಅಡಿಯಲ್ಲಿ 50ಕ್ಕೂ ಹೆಚ್ಚಿನ ಎಲ್ಲ ಸಿಬ್ಬಂದಿ ಮತ್ತು ಕಾರ್ಮಿಕರನ್ನು ನೇಮಿಸಿಕೊಂಡಿರುವ ವಾಣಿಜ್ಯ, ಐಟಿಬಿಟಿ ಸಂಸ್ಥೆಗಳು, ಚಾರಿಟಬಲ್, ಶಿಕ್ಷಣ ಸಂಸ್ಥೆಗಳು ಹಾಗೂ ಈ ಎರಡು ಕಾಯ್ದೆಗಳಡಿಯಲ್ಲಿ ನೋಂದಣಿಯಾದ ಎಲ್ಲ ಸಂಘ ಸಂಸ್ಥೆಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ವಂತಿಕೆ ಪಾವತಿಸಬೇಕು. ಸರ್ಕಾರದ ತಿದ್ದುಪಡಿ ಕಾಯ್ದೆಯನ್ನು ಮೂಲ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆ 1965 ಸೆಕ್ಷನ್ 7ಎಗೆ ಸೇರಿಸಲಾಗಿದೆ. ಪ್ರತೀ ಕಾರ್ಮಿಕನಿಗೆ 20 ರೂ., ಕಾರ್ಖಾನೆಗಳ ಮಾಲೀಕರು, ಕಾರ್ಯಸಂಸ್ಥೆಗಳಿಂದ 40 ರೂ.ನಂತೆ ಒಟ್ಟು 60 ರೂ.ಗಳನ್ನು ಕಾರ್ಖಾನೆ, ಕಾರ್ಯಸಂಸ್ಥೆಯಲ್ಲಿ ಕೆಲಸ ನಿರ್ವಹಿಸುವ ಒಟ್ಟು ಸಿಬ್ಬಂದಿ ಮತ್ತು ಕಾರ್ಮಿಕರ ಸಂಖ್ಯೆಗೆ ಅನುಗುಣವಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿಗೆ ವಂತಿಕೆ ಪಾವತಿಸುವುದು ಕಡ್ಡಾಯವಾಗಿದೆ.

# ಸಮಾಜದ ಬಂಧುಗಳು ಮೊದಲು ಶಿಕ್ಷಣಕ್ಕೆ ಆದ್ಯತೆ ನೀಡಿ : ಮಹೇಶ್



\ಚಿಕ್ಕಮಗಳೂರು: ಆರ್ಥಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಸವಿತಾ ಸಮಾಜದ ಬಂಧುಗಳು ಪ್ರಗತಿ ಸಾಧಿಸಲು ಮೊಟ್ಟಮೊದಲು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎ.ಎನ್. ಮಹೇಶ್ ಹೇಳಿದರು.

ನಗರದ ನೆಹರು ರಸ್ತೆ ಸಮೀಪ ಶ್ರೀರಾಮ ಮಂದಿರದ ಸಭಾಂಗಣದಲ್ಲಿ ಶ್ರೀ ಸವಿತಾ ಸಮಾಜ ಟ್ರಸ್ಟ್ ಹಮ್ಮಿಕೊಂಡಿದ್ದ ಉಚಿತ ಪ್ರತಿಭಾ ಪುರಸ್ಕಾರ, ಲೇಖನ ಸಾಮಾಗ್ರಿ, ನೋಟ್‌ಬುಕ್ ವಿತರಣೆ ಹಾಗೂ ಸಮಾಜಕ್ಕೆ ಆರ್ಥಿಕ ದೇಣಿಗೆ ನೀಡಿ ಅವರು ಮಾತನಾಡಿದರು.

ಇತ್ತೀಚೆಗೆ ಸಮಾಜದ ಹಲವಾರು ಮಂದಿ ಸರ್ಕಾರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಲು ಅಂಬೇಡ್ಕರ್ ನೀಡಿದಂಥ ಶಿಕ್ಷಣವೇ ಮೂಲಕಾರಣ. ಇನ್ನೂ ಕೆಲವೆಡೆ ಸಮಾಜವು ಬಲಿಷ್ಟಗೊಳ್ಳುವ ಅಗತ್ಯವಿರುವ ಹಿನ್ನೆಲೆಯಲ್ಲಿ ವಿದ್ಯೆ ಎಂಬ ಹಸಿವನ್ನು ಬೆಳೆಸಿಕೊಂಡು, ಕಲಿಕೆಯೆಂಬ ಆಹಾರವನ್ನು ಸೇವಿಸಿ ಸದೃಢರಾಗಬೇಕು ಎಂದು ಕಿವಿಮಾತು ಹೇಳಿದರು.

ಸಮಾಜದ ಬಂಧುಗಳು ಅಪ್ಪ ಹಾಕಿದ ಆಲದ ಮರಕ್ಕೆ ಜೋತುಬೀಳದೇ ಐಎಎಸ್, ಐಪಿಎಸ್ ಅಥವಾ ಉನ್ನತ ಸರ್ಕಾರಿ ಸ್ಥಾನಗಳನ್ನು ಅಲಂಕರಿಸಿದರೆ ಸಮಾಜದ ಅಭಿವೃದ್ಧಿಗೂ ಶ್ರಮಿಸಬಹುದು. ಸಮಾಜದ ಕೆಲವರು ಆರ್ಥಿಕ ಸದೃಢರಾದವರು ಟ್ರಸ್ಟ್‌ಗೆ ಸಹಾಯಧನ ಒದಗಿಸಿದರೆ ಜನಾಂಗವು ಅಭಿವೃದ್ಧಿ ಹೊಂದಲು ಸಾಧ್ಯ ಎಂದರು.

ಪ್ರತಿಭಾ ಪುರಸ್ಕಾರ ಪಡೆದುಕೊಂಡ ವಿದ್ಯಾರ್ಥಿಗಳು ಮುಂದಿನ ಸಾಲಿನಲ್ಲೂ ಪುರಸ್ಕಾರ ಗಳಿಸುವಷ್ಟು ವಿದ್ಯಾಕ್ಷೇತ್ರದಲ್ಲಿ ಸಾಧನೆ ಮಾಡಿದರೆ ಈ ಕಾರ್ಯಕ್ರಮಕ್ಕೆ ನೈತಿಕವಾಗಿ ಅರ್ಥ ಬರಲಿದೆ. ಸಮಾಜದಲ್ಲಿ ಶಿಕ್ಷಣವೇ ದೊಡ್ಡ ಆಸ್ತಿ. ಕಲಿತಷ್ಟು ಮುಗಿಲೆತ್ತರಕ್ಕೆ ಬೆಳೆಯಲು ಸಾಧ್ಯ. ಹೀಗಾಗಿ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ಮಾಡಿದರು.

ಸವಿತಾ ಬಂಧುಗಳು ಮಕ್ಕಳ ಆಸಕ್ತಿ ಹೊಂದಿರುವ ಕ್ಷೇತ್ರಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಅಲ್ಲದೇ ಮೊಬೈಲ್ ಚಟಕ್ಕೆ ಬಲಿಯಾಗಿರುವ ಮಕ್ಕಳನ್ನು ಸರಿದಾರಿಗೆ ತರಬೇಕು. ಪಠ್ಯದ ಜೊತೆಗೆ ಕ್ರೀಡಾಸಕ್ತಿಯ ಅರಿವನ್ನು ಮೂಡಿಸಿದರೆ ದುಶ್ಚಟಕ್ಕೆ ಬಲಿಯಾಗದೇ ಉತ್ತಮ ನಾಗರೀಕರಾಗಲು ಸಾಧ್ಯ ಎಂದರು.

ಪತ್ರಕರ್ತ ಎಂ.ಎಸ್.ಉಮೇಶ್‌ಕುಮಾರ್ ಮಾತನಾಡಿ, ಸಮಾಜದಲ್ಲಿ ಕೆಲವೆಡೆ ಹಿಂದುಳಿದ ವರ್ಗವನ್ನು ಜಾತಿ ವ್ಯವಸ್ಥೆಯಡಿ ಕೀಳಾಗಿ ಕಾಣುವ ಮೂಲಕ ಅವಮಾನಿಸಲಾಗುತ್ತಿದೆ. ಇದನ್ನು ಮೆಟ್ಟಿನಿಲ್ಲಲು ಶಿಕ್ಷಣ ಎಂಬ ಅಸ್ತ್ರವನ್ನು ಸಂಪೂರ್ಣವಾಗಿ ಕರಗತ ಮಾಡಿಕೊಂಡರೆ ಅವಮಾನಿಸುವವರ ಎದುರು ಸದೃಢವಾಗಿ ನಿಲ್ಲಬಹುದು ಎಂದು ತಿಳಿಸಿದರು.

ಸವಿತಾ ಸಮಾಜ ಟ್ರಸ್ಟ್ ಅಧ್ಯಕ್ಷ ಸಿ.ವೆಂಕಟೇಶ್ ಮಾತನಾಡಿ, ಜನಾಂಗದ ಅಭಿವೃದ್ಧಿ, ಭವನದ ಕಟ್ಟಡ ನಿರ್ಮಾಣಕ್ಕೆ ಎ.ಎನ್. ಮಹೇಶ್‌ರವರು ಸರ್ಕಾರದಿಂದ ಸವಲತ್ತು, ಆರ್ಥಿಕ ಸಹಾಯವನ್ನು ನೀಡಿ ಪ್ರೋತ್ಸಾಹಿಸಿರುವ ಕಾರಣ ಹಂತಹಂತವಾಗಿ ಜನಾಂಗ ಮುನ್ನಡೆ ಸಾಧಿಸುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಶ್ರೀ ಸವಿತಾ ಸಮಾಜ ಟ್ರಸ್ಟ್‌ಗೆ ಜಿ.ಪಂ. ಮಾಜಿ ಅಧ್ಯಕ್ಷ ಎ.ಎನ್.ಮಹೇಶ್ 1 ಲಕ್ಷ ಹಾಗೂ ಉಮೇಶ್‌ಕುಮಾರ್ 25 ಸಾವಿರ ದೇಣಿಗೆ ನೀಡಿ-ದರು. ಬಳಿಕ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಿಸಲಾಯಿತು. 1 ರಿಂದ 10ನೇ ತರಗತಿಯ ಜನಾಂಗದ ಮಕ್ಕಳಿಗೆ ನೋಟ್‌ಪುಸ್ತಕ, ಲೇಖನಿ ನೀಡಲಾಯಿತು.

ಈ ಸಂದರ್ಭದಲ್ಲಿ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಶ್ರೀಧರ್‌ಮೋಹನ್, ಸಹ ಕಾರ್ಯದರ್ಶಿ ಕಾಂತ ರಾಜ್, ಸವಿತಾ ಸಮಾಜದ ಅಧ್ಯಕ್ಷ ಸಿ.ಎಂ.ಯೋಗೀಶ್, ಸಮಾಜದ ಮುಖಂಡರುಗಳಾದ ಎನ್.ಗಿರೀಶ್, ಹರೀಶ್, ಎನ್. ಶ್ರೀಧರ್ ಮತ್ತಿತರರು ಉಪಸ್ಥಿತರಿದ್ದರು.

# ಆರೋಗ್ಯಕರ ಜೀವನಕ್ಕೆ ಸ್ವಚ್ಛ ಪರಿಸರ ಅಗತ್ಯ : ಗಾಯತ್ರಿ



**ಚಿತ್ರದುರ್ಗ:** ಆರೋಗ್ಯಕರ ಜೀವನಕ್ಕೆ ಸ್ವಚ್ಛವಾದ ಪರಿಸರ ಅಗತ್ಯ ಎಂದು ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರಾದ ಸಿ.ಎಸ್.ಗಾಯತ್ರಿ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಮದಕರಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಮಂಗಳವಾರ ಜಿಲ್ಲಾ ಪಂಚಾಯಿತಿ, ಗ್ರಾಮ ಪಂಚಾಯಿತಿ ಮತ್ತು ಇಕೋ ಕ್ಲಬ್ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗಿಡ ನೆಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಆರೋಗ್ಯದಿಂದ ಇರಬೇಕಾದರೆ ನಮ್ಮ ಮನೆ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿ ಇರಬೇಕು. ಸ್ವಚ್ಛ ಪರಿಸರ ನಿರ್ಮಾಣಕ್ಕೆ ನಾಗರಿಕರು ಸಹಕರಿಸಬೇಕು ಎಂದರು.

ಹೆಚ್ಚಿನ ಪ್ಲಾಸ್ಟಿಕ್ ಬಳಕೆಯಿಂದಾಗಿ ವಾತಾವರಣ ಕಲುಷಿತವಾಗುತ್ತಿದ್ದು, ಈ ಬಾರಿಯ ಪರಿಸರ ದಿನಾಚರಣೆಯ ಉದ್ದೇಶ ಪ್ಲಾಸ್ಟಿಕ್ ಮುಕ್ತ ಗ್ರಾಮಗಳನ್ನಾಗಿ ಮಾಡುವುದಾಗಿದೆ. ಪ್ಲಾಸ್ಟಿಕ್‌ನಲ್ಲಿ ಏಕಬಳಕೆಯ ಪ್ಲಾಸ್ಟಿಕ್ ಮತ್ತು ಮರು ಬಳಕೆ ಮಾಡಬಹುದಾದ ಪ್ಲಾಸ್ಟಿಕ್ ಎಂಬ ಎರಡು ವಿಧವಿದ್ದು, ಈಗಾಗಲೇ ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧಿಸಲಾಗಿದೆ ಎಂದು ತಿಳಿಸಿದ ಅವರು, ಒಣ ಕಸ ಮತ್ತು ಹಸಿ ಕಸ ವಿಂಗಡಿಸಿ ಗ್ರಾಮ ಪಂಚಾಯಿತಿಯ ಸ್ವಚ್ಛ ವಾಹಿನಿಗೆ ನೀಡಲು ತಿಳಿಸಿದರು.

ಚಿತ್ರ ಡಾನ್ ಬಾಸ್ಕೋ ಸಂಸ್ಥೆಯ ಮಹಂತೇಶ್ ಅವರು, ಪರಿಸರ ಸಂರಕ್ಷಣೆ, ಪ್ಲಾಸ್ಟಿಕ್ ಕೊನೆಗೊಳಿಸುವ ಬಗ್ಗೆ ಹಾಗೂ ಸಾವಯವ ಕೃಷಿ, ಪೌಷ್ಟಿಕ ಆಹಾರ ಸೇವನೆ, ಶಾಲಾ ಉದ್ಯಾನವನ, ಕೈತೋಟದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಜಾಥಾ, ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಮದಕರಿಪುರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭವ್ಯ, ಸದಸ್ಯರಾದ ಸ್ವಾಮಿ, ನವೀನ್, ರಂಜಿತ್, ಮಂಜುಳಾ, ಯಶೋಧ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗರಾಜ್, ಸ್ವಚ್ಛ ಭಾರತ ಮಿಷನ್ (ಗ್ರಾ) ಜಿಲ್ಲಾ ಐಇಸಿ ಸಮಾಲೋಚಕರಾದ ಬಿ.ಸಿ.ನಾಗರಾಜ್, ಎಸ್‌ಡಬ್ಲ್ಯೂಎಂ ಸಮಾಲೋಚಕರಾದ ಪ್ರವೀಳಾ, ಶಾಲಾ ಮುಖ್ಯಶಿಕ್ಷಕರಾದ ರೇಖಾ, ಆರೋಗ್ಯ ಇಲಾಖೆ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ವಸಹಾಯ ಸಂಘದ ಮಹಿಳೆಯರು, ಸಿಬ್ಬಂದಿ ಇದ್ದರು.

## ಜಿಲ್ಲೆಯಲ್ಲಿ ಖಾಸಗಿ ಡ್ರೋಣ್ ಬಳಕೆಗೆ ನಿಷೇಧ

**ಚಿಕ್ಕಮಗಳೂರು, ಜೂ.4:** ಜಿಲ್ಲೆಯಲ್ಲಿರುವ ಎಲ್ಲಾ ಖಾಸಗಿ ವ್ಯಕ್ತಿಗಳು ಮತ್ತು ಸಂಸ್ಥೆಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ಯಾವುದೇ ಪೂರ್ವಾನುಮತಿ ಪಡೆಯದೆ ಡ್ರೋಣ್‌ಗಳನ್ನು ಬಳಸಬಾರದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆಯೊಂದನ್ನು ಬಿಡುಗ-ಡೆ ಮಾಡಿರುವ ಅವರು, ಡ್ರೋಣ್ ಬಳಕೆಯನ್ನು ಪ್ರಮುಖವಾಗಿ ಸೂಕ್ಷ್ಮ ಸ್ಥಳಗಳು ಮತ್ತು ಪ್ರಮುಖ ಸ್ಥಾವರಗಳ ಸುತ್ತಮುತ್ತ ವಿಶೇಷವಾಗಿ ನಿರ್ಬಂಧಿಸಲಾಗಿದೆ. ಜಿಲ್ಲೆಯ ಎಲ್ಲ ಕೈಗಾರಿಕೆ, ವಾಣಿಜ್ಯ ಸಂಸ್ಥೆಗಳು, ಭದ್ರತೆ ಒದಗಿಸುವ ಎಲ್ಲ ಖಾಸಗಿ ಭದ್ರತಾ ಸಂಸ್ಥೆಗಳು, ಕಣ್ಗಾವಲು ಅಥವಾ ಇತರ ಉದ್ದೇಶಗಳಿಗಾಗಿ ಸಂಬಂಧಪಟ್ಟ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆಯದೆ ಡ್ರೋಣ್‌ಗಳನ್ನು ಹಾರಿ ಬಿಡುವುದು, ಬಳಕೆ ಮಾಡಬಾರದೆಂದು ಅವರು ಹೇಳಿದ್ದಾರೆ.

ಭಾರತ, ಪಾಕ್ ಗಡಿಯಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ಮತ್ತು ಭದ್ರತಾ ಪಡೆಗಳ ಅನಿಯಂತ್ರಿತ ನಮತ್ತು ಗುರುತಿಸಲಾಗದ ಡ್ರೋಣ್ ಚಟುವಟಿಕೆಯ ಬಗ್ಗೆ, ವಿಶೇಷವಾಗಿ ಸೂಕ್ಷ್ಮ ಮಿಲಿಟರಿ ಮತ್ತು ಪ್ರಮುಖ ಸ್ಥಾವರಗಳ ಬಳಿ (ಸಂಸ್ಕಾರಣಾಗಾರಗಳು, ಬಂದರುಗಳು, ವಿದ್ಯುತ್ ಸ್ಥಾವರಗಳು, ವಿಮಾನ ನಿಲ್ದಾಣಗಳು, ರೈಲು ನಿಲ್ದಾಣಗಳು, ತೈಲ ಡಂಪ್‌ಗಳು ಮತ್ತು ಸಾರ್ವಜನಿಕರ ಸ್ಥಾವರಗಳು) ಎದ್ದಿರುವ ಭದ್ರತಾ ಕಾಳಜಿಗಳನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ ಈ ಬಗ್ಗೆ ಮಾಹಿತಿ ನೀಡಿರುವುದಾಗಿ ರಾಜ್ಯದ ಗೃಹ ಇಲಾಖೆ (ಕಾನೂನು ಸುವ್ಯವಸ್ಥೆ) ಕಾರ್ಯದರ್ಶಿ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವುದಾಗಿ ಎಸ್.ಪಿ. ಮಾಹಿತಿ ನೀಡಿ-ದ್ದಾರೆ.

## ಜೂನ್ 11 ರಂದು ದಿಶಾ ಸಭೆ


**ಚಿಕ್ಕಮಗಳೂರು, ಜೂ.4:** ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ(ದಿಶಾ)ಯು ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ಅಧ್ಯಕ್ಷತೆಯಲ್ಲಿ ಹಾಗೂ ಹಾಸನ ಸಂಸದ ಶ್ರೇಯಸ್ ಎಂ.ಪಟೇಲ್ ಅವರ ಸಹ ಅಧ್ಯಕ್ಷತೆಯಲ್ಲಿ ಜೂನ್ 11 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿಯ ಅಬ್ದುಲ್ ಸಜೀರ್ ಸಾಬ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ತಿಳಿಸಿದ್ದಾರೆ.

## ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆ-3

**ಚಿಕ್ಕಮಗಳೂರು, ಜೂ.4:** 2025 ನೇ ಸಾಲಿನ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆ-3 ಜೂ.9 ರಿಂದ 20 ರವರೆಗೆ ನಡೆಯಲಿದೆ. ಜಿಲ್ಲೆಯಲ್ಲಿ ಒಟ್ಟು ಮೂರು ಪರೀಕ್ಷಾ ಕೇಂದ್ರಗಳಿದ್ದು, ಜಿಲ್ಲಾ ಖಜಾನೆಯಿಂದ ಎರಡು ಹಾಗೂ ಎನ್.ಆರ್.ಪುರ ಉಪಖಜಾನೆಯಿಂದ ಒಂದು ಕೇಂದ್ರಗಳಿವೆ ಜಿಲ್ಲೆಯಲ್ಲಿ ಒಟ್ಟು 473 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗ್ರಾಮ ಆರೋಗ್ಯ ಪೌಷ್ಠಿಕ ದಿನದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್

# ಅಪೌಷ್ಠಿಕತೆಯಿಂದ ಶಿಶು ಮರಣ, ತಾಯಿ ಮರಣ ಆಗಬಾರದು



**ಚಿತ್ರದುರ್ಗ:** ಅಪೌಷ್ಠಿಕತೆಯ ಕಾರಣದಿಂದ ಶಿಶು ಮರಣ, ತಾಯಿ ಮರಣ ಆಗಬಾರದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ತುರುವನೂರು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಅಂಗನವಾಡಿ ಕೇಂದ್ರದಲ್ಲಿ ಶನಿವಾರ ಆರೋಗ್ಯ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಗ್ರಾಮ ಆರೋಗ್ಯ ಪೌಷ್ಠಿಕ ದಿನದಲ್ಲಿ ಅವರು ಮಾತನಾಡಿದರು.

ಗರ್ಭಿಣಿ ಆರೈಕೆ, ಬಾಣಂತಿ ಆರೈಕೆ, ಮಕ್ಕಳ ಆರೈಕೆ, ತಾಯಿ ಮಕ್ಕಳ ಆರೋಗ್ಯ ಸೇವೆಯಲ್ಲಿ ಪ್ರಮುಖ ಜವಾಬ್ದಾರಿಗಳಾಗಿವೆ. 12 ವಾರಗಳ ಒಳಗಡೆ ಗರ್ಭಿಣಿಯರನ್ನು ನೋಂದಾಯಿಸಿ, ತಾಯಿ ಕಾರ್ಡ್ ವಿತರಣೆ ಮಾಡಿ. ಪ್ರಾಥಮಿಕ ಹಂತದ ತಪಾಸಣೆ ನಡೆಸಿ ರಕ್ತದ ಒತ್ತಡ ಪರೀಕ್ಷೆ, ಹಿಮೋಗ್ಲೋಬಿನ್ ಪರೀಕ್ಷೆ ದಾಖಲಾತಿ ತೆಗೆದುಕೊಳ್ಳಿ. ಪ್ರತಿ ತಿಂಗಳು ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಮನವರಿಕೆ ಮಾಡಿ ಪೌಷ್ಟಿಕ ಆಹಾರ ಸೇವನೆಯ ಬಗ್ಗೆ ತಿಳಿಸಿ ಸುರಕ್ಷಿತ ತಾಯ್ತನ ಪಡೆಯುವಂತೆ ಮಾಡಿ ಎಂದು ಹೇಳಿದರು.

ಮನೆ ಆಧಾರಿತ ನವಜಾತ ಶಿಶು ಭೇಟಿ ಕಾರ್ಯಕ್ರಮಗಳ ಬಲವರ್ಧನೆಗೊಳಿಸಿ, ಎದೆ ಹಾಲು ಉಣಿಸುವಿಕೆ, ಮಕ್ಕಳಿಗೆ ನೀಡುವ ಪೂರಕ ಪೌಷ್ಠಿಕ ಆಹಾರದ ಮಾಹಿತಿಯನ್ನು ಗ್ರಾಮ ಆರೋಗ್ಯ ಪೋಷಕ ದಿನದಂದು ಎಲ್ಲಾ ತಾಯಂದಿರಿಗೂ ತಿಳಿಸಿಕೊಡಿ ಎಂದು ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ವಾರದಲ್ಲಿ ಎರಡು ದಿನ ಪ್ರತಿ ಮಂಗಳವಾರ ಮತ್ತು ಶುಕ್ರವಾರ ಗೃಹ ಆರೋಗ್ಯ ಸೇವೆ ಒದಗಿಸಲು ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಆರೋಗ್ಯ ನಿರೀಕ್ಷಣಾಧಿಕಾರಿಗಳು ನಿಮ್ಮ ಮನೆಗಳಿಗೆ ಭೇಟಿ ನೀಡುತ್ತಾರೆ. ಸಾಂಕ್ರಾಮಿಕವಲ್ಲದ ರೋಗಗಳಾದ ರಕ್ತದ ಒತ್ತಡ, ಮಧುಮೇಹ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆಯ ಮಾರ್ಗದರ್ಶನ ಉಚಿತವಾಗಿ ನೀಡುತ್ತಾರೆ. ಈ ಸಂದರ್ಭದಲ್ಲಿ 30 ವರ್ಷದ ಮೇಲ್ಪಟ್ಟ ಎಲ್ಲಾ ನಾಗರಿಕರು ತಪಾಸಣೆ ಮಾಡಿಸಿಕೊಳ್ಳಿ. ಮಧುಮೇಹ, ರಕ್ತದ ಒತ್ತಡ ರೋಗಗಳಿಂದ ಮುಕ್ತಿ ಪಡೆಯಿರಿ, ಅಲ್ಲದೆ ಮಕ್ಕಳಿಗೆ ಕಾಲಕಾಲಕ್ಕೆ 12 ಮಾರಕ ರೋಗಗಳ ವಿರುದ್ಧ ಲಸಿಕೆ ಕೊಡಿಸಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳಾದ ಮಾಂತಾ ರಾಥೋಡ್ ನವ್ಯಶ್ರೀ, ನಾಗಮಣಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ವೀಣಾ, ಹಿರಿಯ ಆರೋಗ್ಯ ನಿರಕ್ಷಣಾಧಿಕಾರಿ ತಿಮ್ಮಣ್ಣ ನಾಯಕ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆ ಮಂಜುಳಾ, ಹಿರಿಯ ನಾಗರಿಕರ, ತಾಯಂದಿರು, ಗರ್ಭಿಣಿಯರು ಇದ್ದರು.

# ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಗುಣಮಟ್ಟದ ಶಿಕ್ಷಣ ತುಂಬಾ ಅವಶ್ಯ



**ಮೊಳಕಾಲ್ಮೂರು:** ಸಮಾಜದಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಸರ್ವತೋಮುಖ ಅಭಿವೃದ್ಧಿ ಹೊಂದಲು ಗುಣಮಟ್ಟದ ಶಿಕ್ಷಣ ಅತ್ಯಾವಶ್ಯವಾಗಿದೆ ಎಂದು ಶಾಲಾ ಮುಖ್ಯ ಶಿಕ್ಷಕ ಕೆ.ಎಸ್.ಹನುಮಂತಪ್ಪ ತಿಳಿಸಿದ್ದಾರೆ.

ತಾಲೂಕಿನ ಗುಂಡ್ಲೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾರದಾ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಾಲಾ ಮಕ್ಕಳಿಗೆ ವಿದ್ಯೆಯೇ ಭೂಷಣವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಶಾಲಾ ತರಗತಿಗಳಲ್ಲಿ ನೀಡುವ ಪಾಠಗಳನ್ನು ಗ್ರಹಿಸುವ ಮೂಲಕ ವಿದ್ಯಾಭ್ಯಾಸವನ್ನು ಪಡೆದು ಉನ್ನತ ವ್ಯಾಸಂಗದಲ್ಲಿ ಯಶಸ್ಸು ಪಡೆಯಲು ಸಾಧ್ಯ. ಮುಂದಿನ ಸ್ಪರ್ಧಾತ್ಮಕ ಕಾಲಘಟ್ಟದಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಲು ಶ್ರಮಿಸಿದ್ದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ. ಪ್ರತಿಯೊಬ್ಬ ವಿದ್ಯಾರ್ಥಿಯು ಪ್ರಾಥಮಿಕ ಹಂತದಲ್ಲಿಯೇ ಶಾಲಾ ತರಗತಿಗಳಲ್ಲಿ ಶಿಕ್ಷಕರು ನೀಡುವ ಕಲಿಕೆಯನ್ನು ಏಕಾಗ್ರತೆಯಿಂದ ಆಲಿಸಿ ವಿದ್ಯಾಭ್ಯಾಸವನ್ನು ಪಡೆದಲ್ಲಿ ಅಗ್ರಶ್ರೇಯಾಂಕದಲ್ಲಿ ಉತ್ತೀರ್ಣರಾಗಿ ಉನ್ನತ ಹುದ್ದೆಗಳನ್ನು ಗಳಿಸಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ಜೊತೆಗೆ ತಂದೆ, ತಾಯಿ, ಗುರು, ಹಿರಿಯರಿಗೆ ಗೌರವ ನೀಡುವ ಸಂಸ್ಕಾರವನ್ನು ರೂಡಿಸಿಕೊಂಡು ಉಜ್ವಲ ಭವಿಷ್ಯರೂಪಿಸಿಕೊಳ್ಳಬಹುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲಾ ವಿದ್ಯಾರ್ಥಿಗಳು ಶಾರದಾ ಮಾತೆಯ ಭಾವಚಿತ್ರಕ್ಕೆ ಭಕ್ತಿ ಭಾವದೊಂದಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ಕಾರ್ಯಕ್ರಮದಲ್ಲಿ ಬಿ.ಆರ್.ಪಿ.ಗಳಾದ ಸಿದ್ದಪ್ಪ, ಮಂಜುನಾಥ, ಸಿ.ಆರ್.ಪಿ. ಆದಿಬಸಪ್ಪ, ಈ ಶಾಲೆಯ ಸಹ ಶಿಕ್ಷಕ ಎನ್.ತಿಪ್ಪೇಸ್ವಾಮಿ ಹಾಗೂ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**